22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 337 | ನವದೆಹಲಿ | ಬೆಲೆ ₹10 | ಜೂನ್ 15, 2025, ಭಾನುವಾರ

## ಒಳಪುಟಗಳಲ್ಲಿ



ಜಾಗತಿಕ ಲಿಂಗ ಅಂತರ ಸೂಚ್ಯಂಕ: ಭಾರತಕ್ಕೆ 131ನೇ ಸ್ಥಾನ - ಪು.4

ಜೀವಿಕೆ ಸಂಸ್ಥೆಯಿಂದ ಕುಟುಂಬ ಕಲ್ಯಾಣ ಇಲಾಖೆಯ ತೆಕ್ಕೆಗೆ ಆರೋಗ್ಯ ಕವಚ ಸೇವೆ: ದಿನೇಶ್ ಗುಂಡೂರಾವ್ - ಪು.5

ಮುಖ್ಯಮಂತ್ರಿ ಬದಲಾವಣೆ ಮುಂದಿನ ನವೆಂಬರ್‌ನಲ್ಲಿ: ವಿಶ್ವನಾಥ್ ಭವಿಷ್ಯ - ಪು.6

ರೈತರ ಕಬ್ಬಿನ ಬಾಕಿ ಹಣ ಪಾವತಿಗೆ ಆಗ್ರಹಿಸಿ ಬೃಹತ್ ಮೆರವಣಿಗೆ - ಪು.7

# ಕಲ್ಯಾಣ ಕರ್ನಾಟಕದ ಅಭಿವೃದ್ಧಿ: ಮನಮೋಹನ್ ಸಿಂಗ್‌ರಿಂದ 371ಜೆ ವಿಧಿಗೆ ತಿದ್ದುಪಡಿ

- ಮಲ್ಲಿಕಾರ್ಜುನ ಖರ್ಗೆ, ಧರಂ ಸಿಂಗ್ ಅವರ ಪರಿಶ್ರಮ ಹೋರಾಟ 371ಜೆ ಜಾರಿ ಹಿಂದೆ ಕೆಲಸ ಮಾಡಿದೆ
- ಮೂರು ವರ್ಷದಲ್ಲಿ 13000 ಕೋಟಿ ಕೆಕೆಆರ್‌ಡಿಬಿಗೆ ನಮ್ಮ ಸರ್ಕಾರ ನೀಡಿ ದಾಖಲೆ ನಿರ್ಮಿಸಿದೆ: ಮುಖ್ಯಮಂತ್ರಿ



**ಯಾದಗಿರಿ ಜೂ 14:** ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಅಭಿವೃದ್ಧಿಗೆ ಮೂರು ವರ್ಷದಲ್ಲಿ 13000 ಕೋಟಿ ರೂಪಾಯಿ ಅನುದಾನ ನೀಡಿದ್ದೇನೆ ಎಂದು ಸಿ.ಎಂ ಸಿದ್ದರಾಮಯ್ಯ ನುಡಿದರು. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಆಯೋಜಿಸಿರುವ "ಆರೋಗ್ಯ ಆವಿಷ್ಕಾರ" ಯೋಜನೆಯ ಅಡಿಯಲ್ಲಿ 440.63 ಕೋಟಿ ಮೊತ್ತದ ಕಾಮಗಾರಿಗಳನ್ನು ಉದ್ಘಾಟಿಸಿ, ಬಂಜಾರ ಭವನವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು. ವರ್ಷಕ್ಕೆ 5000 ಕೋಟಿ ಕೆಕೆಆರ್‌ಡಿಬಿಗೆ ಕೊಡುವುದಾಗಿ ನಾವು ಚುನಾವಣೆ ವೇಳೆ ಭರವಸೆ ನೀಡಿದ್ದೆವು. ಕಾಂಗ್ರೆಸ್ ಕೊಟ್ಟ ನಮ್ಮ ಭರವಸೆಯಂತೆ ಇಲ್ಲಿಯವರೆಗೂ 13000 ಕೋಟಿ ರೂಪಾಯಿ ಹಣ ನೀಡಿದ್ದೇವೆ. ಇಲ್ಲಿಯವರೆಗೂ 5300 ಕೋಟಿ ಮೊತ್ತ ಖರ್ಚಾಗಿದ್ದು ಕಾಮಗಾರಿ ಜನರಿಗೆ ತಲುಪಿದೆ ಎಂದರು. ಏಏಖಈಃ ಗೆ ಕೊಡುವ ಈ ಅನುದಾನದ ಹೊರತಾಗಿ ಸರ್ಕಾರ ಇಲಾಖಾವಾರು ಕಾರ್ಯಕ್ರಮಗಳಿಗಾಗಿ ಅನುದಾನ ನೀಡುತ್ತಲೇ ಇದೆ ಎಂದರು.

ನಂಜುಂಡಪ್ಪ ಅವರ ವರದಿಯ ಆಶಯಗಳನ್ನು ನಮ್ಮ ಸರ್ಕಾರ ಈಡೇರಿಸುತ್ತಿದೆ. ಆರೋಗ್ಯ, ಶಿಕ್ಷಣ, ಉದ್ಯೋಗದಲ್ಲಿ ಕಲ್ಯಾಣ ಕರ್ನಾಟಕ ಪ್ರಗತಿ ಸಾಧಿಸುವ ಜೊತೆಗೆ ಮೂಲಭೂತ ಸೌಕರ್ಯಗಳ ಈಡೇರಿಕೆಗೆ ಹಣ ವಿನಿಯೋಗ ಮಾಡಲು ಸೂಚನೆ ನೀಡಿದ್ದೇನೆ. ಇದರ ಪ್ರಕಾರ ಅಕ್ಷರ ಆವಿಷ್ಕಾರ ನಡೆದು ಇಂದು 440.63 ಕೋಟಿ ವೆಚ್ಚದ ಆರೋಗ್ಯ ಆವಿಷ್ಕಾರ ಕಾರ್ಯಕ್ರಮ ಇಂದು ಉದ್ಘಾಟನೆ ಮಾಡಿದ್ದೇವೆ. ಕೊಲ್ಲೂರು ಮಲ್ಲಪ್ಪ ಅವರ ಸ್ಮಾರಕಕ್ಕೆ ಪುಕ್ಕಟೆಯಾಗಿ ಜಾಗ ಕೊಟ್ಟಿದ್ದೇವೆ. ಮಲ್ಲಪ್ಪ ಅವರು ಕಲ್ಯಾಣ ಕರ್ನಾಟಕದ ಗಾಂಧಿ ಎಂದು ಕರೆಸಿಕೊಂಡಿದ್ದವರು. ಸ್ವಾತಂತ್ರ್ಯ ಹೋರಾಟಗಾರರಾದ ಇವರ ಸ್ಮಾರಕ ಕೂಡಲೇ ಆಗಬೇಕು ಎಂದು ಸಿಎಂ ಸೂಚನೆ ನೀಡಿದರು.

42 ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸುವುದು, ಹೊಸ ಆಸ್ಪತ್ರೆಗಳ ನಿರ್ಮಾಣ ಆಗುತ್ತಿದೆ. ಈ ಭಾಗದ ಆರೋಗ್ಯ ಸವಲತ್ತು ವಿಸ್ತರಿಸಲು ಒಟ್ಟು 847 ಕೋಟಿ ಕೊಡಲು ಸರ್ಕಾರ ಯೋಜನೆ ರೂಪಿಸಿದೆ ಎಂದರು.

ರಾಜ್ಯದಲ್ಲಿ ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಬಿಜೆಪಿ ಪರಿವಾರದ ಎಲ್ಲಾ ಸುಳ್ಳುಗಳಿಗೆ ಜನರೇ ಉತ್ತರ ನೀಡುತ್ತಿದ್ದಾರೆ. ಏಕೆಂದರೆ ನಾವು ಅಭಿವೃದ್ಧಿಗೆ ಕೊಟ್ಟಿರುವ ಹಣ ರಾಜ್ಯದ ಜನರ ಮನೆ ಬಾಗಿಲಿಗೆ ತಲುಪಿದೆ ಎಂದರು. ಬೆಲೆ ಏರಿಕೆಗೆ ಕಾರಣವಾಗಿರುವುದು ಕೇಂದ್ರದ ಮೋದಿ ನೇತೃತ್ವದ ಬಿಜೆಪಿ ಸರ್ಕಾರ. ಮೋದಿ ಬರುವ ಮೊದಲು ಚಿನ್ನ, ಪೆಟ್ರೋಲ್, ಡೀಸೆಲ್, ಔಷಧ, ರಸಗೊಬ್ಬರ, ಅಡುಗೆ ಎಣ್ಣೆ, ಅಡುಗೆ ಅನಿಲದ ಬೆಲೆ ಎಷ್ಟಿತ್ತು ? ಮೋದಿ ಬಂದ ಬಳಿಕ ಎಷ್ಟು ಏರಿಕೆಯಾಗಿದೆ ನೋಡಿ. ಬೆಲೆ ಏರಿಕೆಯ ಸೃಷ್ಟಿಕರ್ತ ಪ್ರಧಾನಿ ಮೋದಿ ಎಂದರು.

ಸುಳ್ಳೇ ಬಿಜೆಪಿಯ ಮನೆ ದೇವರು. ಬಿಜೆಪಿಗೆ ಅಧಿಕಾರ ಇದ್ದಾಗಲೂ ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಮಾಡಲಿಲ್ಲ. ಬಿಜೆಪಿ 371 ಜೆ ಗೆ ವಿರುದ್ಧವಿತ್ತು. ಉಪ ಪ್ರಧಾನಿ ಆಗಿದ್ದ ಎಲ್. ಕೆ.ಅಡ್ವಾಣಿ ಅವರು 371ಜೆ ಜಾರಿ ಮಾಡುವುದಿಲ್ಲ ಎಂದು ಪತ್ರ ಬರೆದಿದ್ದರು. ಕೊನೆಗೆ ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿ ಖರ್ಗೆ, ಧರಂಸಿಂಗ್ ಅವ್ ಹೋರಾಟಕ್ಕೆ ಮಾನ್ಯತೆ ನೀಡಿ 371ಜೆ ಜಾರಿ ಮಾಡಿದರು ಎಂದು ವಿವರಿಸಿದರು.

ನಾವು ಬಸವಣ್ಣನವರ ಆಶಯದಂತೆ ನುಡಿದಂತೆ ನಡೆಯುವರು. ನಾವು ಚುನಾವಣೆಯಲ್ಲಿ ಕೊಟ್ಟ ಭರವಸೆಗಳಲ್ಲಿ ಐದು ಗ್ಯಾರಂಟಿಗಳು ಸೇರಿ 200 ಭರವಸೆಗಳು ಈಡೇರಿಸಿದ್ದೇವೆ. ಮುಂದಿನ ಮೂರು ವರ್ಷಗಳಲ್ಲಿ ಉಳಿದ ಎಲ್ಲಾ ಭರವಸೆಗಳನ್ನೂ ಈಡೇರಿಸಿ ಸಮಗ್ರ ಕರ್ನಾಟಕದ ಅಭಿವೃದ್ಧಿ ಸಾಧಿಸಿ ತೋರಿಸುತ್ತೇವೆ ಎಂದರು. ಜಿಎಸ್ ಟಿ ಸಂಗ್ರಹದಲ್ಲಿ ರಾಜ್ಯ ಎರಡನೇ ಸ್ಥಾನದಲ್ಲಿರುವುದು ಆರ್ಥಿಕವಾಗಿ ರಾಜ್ಯ ಪ್ರಗತಿ ಪಥದಲ್ಲಿರುವುದಕ್ಕೆ ಸಾಕ್ಷಿ . ಕಲ್ಯಾಣ ಕರ್ನಾಟಕದ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೂ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಸಿಂಗ್ ಅವರು ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ಸಂವಿಧಾನ ತಿದ್ದುಪಡಿ ಮಾಡಿ 371 ಜೆ ಜಾರಿ ಮಾಡಿದರು. ಮಲ್ಲಿಕಾರ್ಜುನ ಖರ್ಗೆ, ದಿವಂಗತ ಧರಮ್ ಸಿಂಗ್ ಅವರ ಶ್ರಮ ಮತ್ತು ಹೋರಾಟ 371ಜೆ ಜಾರಿ ಹಿಂದೆ ಕೆಲಸ ಮಾಡಿದೆ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳುಶ್ಲಾಘಿಸಿದರು.

# ಮೈಸೂರು, ಬೆಂಗಳೂರಿನಂತೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಾಡಿ: ಸಿಎಂ, ಡಿಸಿಎಂಗೆ ಖರ್ಗೆ ಸಲಹೆ

**ಯಾದಗಿರಿ, ಜೂ.14:** ಮೀಸಲಾತಿ ನೆಪವೊಡ್ಡಿ ಖಾಲಿ ಹುದ್ದೆಗಳ ಭರ್ತಿ ನಿಲ್ಲಿಸುವ ಬದಲು ಬ್ಯಾಕ್ ಲಾಗ್ ಇಟ್ಟು ಉಳಿದ ಹುದ್ದೆಗಳ ಭರ್ತಿಗೆ ಮುಂದಾಗುವಂತೆ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಸಿಎಂ–ಡಿಸಿಎಂ ಅವರಿಗೆ ಸಲಹೆ ನೀಡಿದರು. ಯಾದಗಿರಿ ನಗರದಲ್ಲಿ ಕೆಕೆಆರ್ ಡಿಬಿ ಹಾಗೂ ಆರೋಗ್ಯ ಇಲಾಖೆಯ ಸಹಯೋಗದಡಿಯ ಆರೋಗ್ಯ ಆವಿಷ್ಕಾರ ಯೋಜನೆಗೆ ಚಾಲನೆ ನೀಡಿದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿನ ಖಾಲಿ ಹುದ್ದೆಗಳು ಭರ್ತಿ ಮಾಡಿಕೊಳ್ಳದಿರುವುದು ಈ ಭಾಗದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ ಫಲಿತಾಂಶ ಕುಂಠಿತವಾಗಲು ಕಾರಣವಾಗುತ್ತಿದೆ. ಇದೇ ಕಾರಣಕ್ಕೆ ಕೊನೆಸ್ಥಾನದಲ್ಲಿ ಈ ಭಾಗದ ಜಿಲ್ಲೆಗಳು ಸ್ಥಾನ ಪಡೆಯುತ್ತಿವೆ. ಅದೇ ತೆರನಾಗಿ ಇತರ ಹುದ್ದೆಗಳ ಸಹ ಖಾಲಿಯಿವೆ. ಯಾವ



ಜನರಿಗೆ ಸಮಸ್ಯೆ ಇದೆ. 15, 18 ಪ್ರತಿಶತ ಜನರಿಗಾಗಿ 82 ಪ್ರತಿಶತ ಜನರ ಮಕ್ಕಳಿಗೆ ನ್ಯಾಯ ಕೊಡಿಸದೆ ಹೋದರೆ, ನಮ್ಮನಿಮ್ಮ ಮಕ್ಕಳು ಬೀದಿ ಪಾಲಾಗುತ್ತಾರೆ ಎಂದು ಮಲ್ಲಿಕಾರ್ಜುನ ಖರ್ಗೆ ಕಳವಳ ವ್ಯಕ್ತಪಡಿಸಿದರು. ಪ್ರಮುಖವಾಗಿ ಕಲ್ಯಾಣ ಕರ್ನಾಟಕ ಭಾಗದ ಖಾಲಿ ಹುದ್ದೆಗಳ ಭರ್ತಿಗೆ ಯಾವುದೇ ಅದರಲ್ಲೂ ಆರ್ಥಿಕ ಇಲಾಖೆಯ ಅಡ್ಡಿಯಿಲ್ಲ. ಜತೆಗೆ ಅನುಮತಿ ಸಹ ಬೇಕಾಗಿಲ್ಲ. ಬೆಂಗಳೂರನ್ನು ಸಿಂಗಾಪುರ ಮಾಡಿಕೊಳ್ಳಿ ಪರವಾಗಿಲ್ಲ, ನಮ್ಮ ಕಲಬುರಗಿಯನ್ನು ಮೈಸೂರು, ಬೆಂಗಳೂರು ಮಾಡಿ ಸಾಕು. ಸಿದ್ದರಾಮಯ್ಯ ಅವರ ಮೈಸೂರು, ಶಿವಕುಮಾರ್ ಅವರ ಬೆಂಗಳೂರಿನ ರೀತಿ ಕಲ್ಯಾಣ ಕರ್ನಾಟಕವನ್ನು ಅಭಿವೃದ್ಧಿ ಮಾಡಿ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇಂದಿಲ್ಲಿ ನಗೆಗಡಲಲ್ಲಿ ಸರ್ಕಾರಕ್ಕೆ ಸೂಚನೆ ನೀಡಿದರು.

**ಕಪ್ಪುಚುಕ್ಕೆ ಹೋಗಲಾಡಿಸಿ:** ಕಲ್ಯಾಣ ಕರ್ನಾಟಕಕ್ಕೆ ನೀಡಲಾಗಿರುವ ಅನುದಾನ ಖರ್ಚು ಮಾಡುವುದಿಲ್ಲ ಎಂಬ ಅಪವಾದವಿದೆ. ಹೀಗಾಗಿ ಕೆಕೆಆರ್ ಡಿಬಿ ಮಂಡಳಿಗೆ ನೀಡಲಾಗಿರುವ 5000 ಕೋ.ರೂ ಸಂಪೂರ್ಣವಾಗಿ ಇದೇ ವರ್ಷ ಖರ್ಚು ಮಾಡಬೇಕು. ಈ ನಿಟ್ಟಿನಲ್ಲಿ ಈ ಭಾಗದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನೀಡಲಾಗುವ ಅನುದಾನ ಖರ್ಚು ಮಾಡುವುದಿಲ್ಲ ಎಂಬ ಅಪವಾದ ಹೋಗಲಾಡಿಸಬೇಕು ಎಂದರು.

# ಕಲ್ಯಾಣ ಕರ್ನಾಟಕದಲ್ಲಿ ಅಭಿವೃದ್ಧಿಯ ಪಥ, ಅಭಿವೃದ್ಧಿಯ ರಥ: ಡಿಸಿಎಂ ಡಿ.ಕೆ.ಶಿವಕುಮಾರ್

ಯಾದಗಿರಿ, ಜೂ. 14: ಕಾಂಗ್ರೆಸ್ ಸರ್ಕಾರದ ಸಚಿವರು, ಶಾಸಕರು ಹಾಗೂ ಸಂಸದರು ಸೇರಿ ಎಲ್ಲಾ ರಂಗದಲ್ಲಿಯೂ ಕಲ್ಯಾಣ ಕರ್ನಾಟಕವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುತ್ತಿದ್ದಾರೆ. ಅಭಿವೃದ್ಧಿಯ ರಥ ಎಳೆಯುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ಅಧಿಕಾರ ನಶ್ವರ, ಸಾಧನೆಗಳು ಅಜರಾಮರ, ಆದರೆ ಮತದಾರರೇ ಈಶ್ವರ. ಹೀಗಾಗಿ ನಿಮಗೆ ಅಭಿನಂದನೆ ಹೇಳಲು ನಾವು ಇಲ್ಲಿಗೆ ಬಂದಿದ್ದೇವೆ. ಕಲ್ಯಾಣ ಕರ್ನಾಟಕದ ಜನರು ಕಾಂಗ್ರೆಸ್ ಪಕ್ಷಕ್ಕೆ, ಮಲ್ಲಿಕಾರ್ಜುನ ಖರ್ಗೆ ಅವರ ನಾಯಕತ್ವಕ್ಕೆ, ಸಿದ್ದರಾಮಯ್ಯ ಅವರ ಆಡಳಿತಕ್ಕೆ ಮೆಚ್ಚಿ ಈ ಭಾಗದಲ್ಲಿ ಆರು ಸಂಸದರನ್ನು ಆಯ್ಕೆ ಮಾಡಿ ದೇಶಕ್ಕೆ ದೊಡ್ಡ ಸಂದೇಶ ರವಾನಿಸಿದ್ದೀರಿ. ನಮ್ಮ ಜಿಲ್ಲೆಗಳಿಗಿಂತ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳು ಹೆಚ್ಚು ಪ್ರಗತಿ ಸಾಧಿಸುತ್ತಿವೆ. ಯುಪಿಎ ಸರ್ಕಾರದಲ್ಲಿ ಮಲ್ಲಿಕಾರ್ಜುನ ಖರ್ಗೆ, ಮನಮೋಹನ್ ಸಿಂಗ್, ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರಿಂದಾಗಿ ಈ ಭಾಗಕ್ಕೆ 371–ಜೆ ಮೂಲಕ ವಿಶೇಷ ಸ್ಥಾನಮಾನ ನೀಡಲಾಗಿದೆ. ಇದನ್ನು ಪಡೆದ ನೀವೆ ಪುಣ್ಯವಂತರು. ಕಾಂಗ್ರೆಸ್ ಪಕ್ಷದ ಈ ಕೊಡುಗೆಯನ್ನು ನೀವು ನಿಮ್ಮ ಮುಂದಿನ ಪೀಳಿಗೆಗಳು ಸ್ಮರಿಸಬೇಕು ಎಂದರು. ವಿರೋಧ ಪಕ್ಷಗಳು ಏನೇ ಟೀಕೆ ಮಾಡಿದರೂ ಎಲ್ಲರಿಗೂ ಸಾಮಾಜಿಕ ನ್ಯಾಯ ನೀಡಲು ನಾವು ಬದ್ಧವಾಗಿದ್ದೇವೆ. ರಾಹುಲ್ ಗಾಂಧಿಯವರ ಚಿಂತನೆ, ಮಲ್ಲಿಕಾರ್ಜುನ ಖರ್ಗೆ ಅವರ ನಾಯಕತ್ವದಲ್ಲಿ ನಾವು ಜಾತಿಗಣತಿ ಮರುಸಮೀಕ್ಷೆ ಮಾಡಲು ಮುಂದಾಗಿದ್ದೇವೆ. ಎಲ್ಲಾ ವರ್ಗ, ಸಮುದಾಯ, ಜಾತಿ, ಧರ್ಮದವರು ಈ ಅವಕಾಶವನ್ನು ಬಳಸಿಕೊಂಡು ತಮ್ಮ ಮಾಹಿತಿಯನ್ನು ಸರಿಯಾಗಿ ಒದಗಿಸಬೇಕು ಎಂದರು.



ಅಹ್ಮದಾಬಾದ್‌ನಲ್ಲಿ 279 ಜನರನ್ನು ಬಲಿಪಡೆದ ಏರ್ ಇಂಡಿಯಾ ವಿಮಾನ ಅಪಘಾತದಲ್ಲಿ ಗಾಯಗೊಂಡಿರುವ ವೈದ್ಯಕೀಯ ಕಾಲೇಜ್ ಹಾಸ್ಟೆಲ್ ವಿದ್ಯಾರ್ಥಿಗಳು ಚಿಕಿತ್ಸೆ ಪಡೆಯುತ್ತಿರುವ ಅಹ್ಮದಾಬಾದ್ ಸಿವಿಲ್ ಆಸ್ಪತ್ರೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಶನಿವಾರ ಭೇಟಿ ನೀಡಿ, ಆರೋಗ್ಯ ವಿಚಾರಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಮತ್ತು ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಇ1ದ್ದರು.

# ಏರ್ ಇಂಡಿಯಾ ವಿಮಾನ ದುರಂತ ತನಿಖೆಗೆ ಉನ್ನತ ಸಮಿತಿ ರಚನೆ ವರದಿಗೆ 3 ತಿಂಗಳ ಗಡುವು: ಸಚಿವ ರಾಮಮೋಹನ್ ನಾಯ್ಡು

**ನವದೆಹಲಿ: ಜೂ.14:** ಜೂನ್ 12ರಂದು ಅಹಮದಾಬಾದ್‌ನ ಮೇಘನಿನಗರದಲ್ಲಿ ಸಂಭವಿಸಿದ ವಿಮಾನ ದುರಂತ ಪ್ರಕರಣದ ತನಿಖೆಗೆ ಉನ್ನತ ಮಟ್ಟದ ಸಮಿತಿ ನಿಯೋಜಿಸಲಾಗಿದೆ. ಕೇಂದ್ರ ಗೃಹಸಚಿವಾಲಯ ಕಾರ್ಯದರ್ಶಿ ನೇತೃತ್ವದಲ್ಲಿ ತನಿಖೆ ನಡೆಯಲಿದ್ದು, 3 ತಿಂಗಳ ಗಡುವು ನಿಗದಿಪಡಿಸಲಾಗಿದೆ ಎಂದು ಕೇಂದ್ರ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಹೇಳಿದರು.




ಏರ್ ಇಂಡಿಯಾ ವಿಮಾನ ದುರಂತ ನಡೆದ 48 ಗಂಟೆ ಬಳಿಕ ಮೊದಲ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಚಿವರು, ಮೂರು ತಿಂಗಳಲ್ಲಿ ತನಿಖೆ ಪೂರ್ಣಗೊಳಿಸಲು ಗಡುವು ನಿಗದಿಮಾಡಲಾಗಿದೆ ಎಂದು ತಿಳಿಸಿದರು. ವಿಮಾನ ದುರಂತ ನಡೆದಿದ್ದು ನಿಜಕ್ಕೂ ದುರದೃಷ್ಟಕರ. ನಾನೂ ನನ್ನ ಅಪ್ಪನನ್ನು ರಸ್ತೆ ಅಪಘಾತದಲ್ಲಿ ಕಳೆದುಕೊಂಡಿದ್ದೇನೆ. ಹಾಗಾಗಿ ಕುಟುಂಬಸ್ಥರ ಕಷ್ಟ ನನಗೆ ಅರ್ಥವಾಗುತ್ತದೆ. ಮೃತರ ಕುಟುಂಬಗಳಿಗೆ ಅಗತ್ಯ ನೆರವು ನೀಡಲು ಸೂಚನೆ ನೀಡಿದ್ದೇವೆ ಎಂದು ಹೇಳಿದರು.

**ಬ್ಲ್ಯಾಕ್‌ಬಾಕ್ಸ್ ಡಿಕೋಡ್ ಮಾಡಲಾಗ್ತಿದೆ**

ಮುಂದುವರಿದು, ಶುಕ್ರವಾರ ಸಂಜೆ 5 ಗಂಟೆ ವೇಳೆಗೆ ಬ್ಲ್ಯಾಕ್‌ಬಾಕ್ಸ್ ಪತ್ತೆ ಮಾಡಲಾಗಿದ್ದು, ದತ್ತಾಂಶವನ್ನು ಡಿಕೋಡ್ ಮಾಡಲಾಗುತ್ತಿದೆ. ಇದರ ದತ್ತಾಂಶದಿಂದ ಅಪಘಾತಕ್ಕೆ ನಿಖರ ಕಾರಣ ಏನೆಂಬುದು ತಿಳಿಯಲಿದೆ. ಅಲ್ಲದೇ ಅನೇಕ ತನಿಖಾ ಸಂಸ್ಥೆಗಳು ಹಾಗೂ ಕೇಂದ್ರದ ಉನ್ನತ ಮಟ್ಟದ ಸಮಿತಿ ಸಹ ವಿಮಾನ ದುರಂತದ ಬಗ್ಗೆ ತನಿಖೆ ನಡೆಸುತ್ತಿವೆ ಎಂದು ವಿವರಿಸಿದರು.

ವಿಮಾನ ದುರಂತವನ್ನು ವಿಮಾನಯಾನ ಸಚಿವಾಲಯವು ಅತ್ಯಂತ ಗಂಭೀರವಾಗಿ ತೆಗೆದುಕೊಂಡಿದೆ. ಅದಕ್ಕಾಗಿ ಅಪಘಾತ ನಡೆದ ತಕ್ಷಣ ವಿಮಾನ ಅಪಘಾತ ತನಿಖಾ ಬ್ಯೂರೋಗೆ ತನಿಖೆ ನಡೆಸುವಂತೆ ಸೂಚಿಸಲಾಯಿತು. ಕೂಡಲೇ ಎಎಐಬಿ ತಂಡ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ಪರಿಶೀಲಿಸಿತ್ತು ಎಂದು ತಿಳಿಸಿದರು. ಕಪ್ಪು ಪೆಟ್ಟಿಗೆಯಿಂದ ಡಿಕೋಡ್ ಮುಕ್ತಾಯದ ಬಳಿಕ ಅಪಘಾತ ಸಮಯದಲ್ಲಿ ಅಥವಾ ಅಪಘಾತಕ್ಕೆ ಕೆಲವು ಕ್ಷಣಗಳ ಮೊದಲು ನಿಜವಾಗಿ ಏನಾಯ್ತು ಅನ್ನೋದು ಗೊತ್ತಾಗಲಿದೆ. ಎಎಐಬಿ ತನ್ನ ತನಿಖೆಯನ್ನು ಪೂರ್ಣಗೊಳಿಸಿದ ಬಳಿಕ ವರದಿ ನೀಡಲಿದ್ದು, ಏನಾಗಿದೆ ಎಂಬುದು ಗೊತ್ತಾಗಲಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಶಿಷ್ಟಾಚಾರ ಮತ್ತು ಅಪಘಾತದ ನಂತರದ ಕ್ರಮಗಳ ಬಗ್ಗೆ ಮಾತನಾಡಿದ ಸಚಿವರು, ಭಾರತವು ಕಟ್ಟುನಿಟ್ಟಿನ ಸುರಕ್ಷತಾ ಮಾನದಂಡಗಳು ಹಾಗೂ ವಾಯುಯಾನ ಸುರಕ್ಷತಾ ಚೌಕಟ್ಟನ್ನು ಹೊಂದಿದೆ. ಈ ಘಟನೆ ಬಳಿಕ ಬೋಯಿಂಗ್ 787 ಸರಣಿಯ ನಿಗಾ ಇಡಲಾಗಿದೆ. ಸದ್ಯ ಭಾರತದಲ್ಲಿ ಬೋಯಿಂಗ್ 787 ಸರಣಿಯ 34 ವಿಮಾನಗಳಿದ್ದು, ಅವುಗಳ ತಪಾಸಣೆಗೆ ಡಿಜಿಸಿಎ ಕೂಡ ಆದೇಶ ನೀಡಿದೆ. 8 ವಿಮಾನಗಳನ್ನು ಈಗಾಗಲೇ ಪರಿಶೀಲಿಸಲಾಗಿದ್ದು, ಉಳಿದ ಎಲ್ಲ ವಿಮಾನಗಳನ್ನು ತುರ್ತಾಗಿ ಪರಿಶೀಲಿಸಲಾಗುವುದು ಎಂದು ವಿವರಿಸಿದರು. ಇನ್ನೂ ನಾಗರಿಕ ವಿಮಾನಯಾನ ಕಾರ್ಯದರ್ಶಿ ಸಮೀರ್ ಕುಮಾರ್ ಸಿನ್ಹಾ, ಅಪಘಾತಕ್ಕೀಡಾದ ಏರ್ ಇಂಡಿಯಾ ವಿಮಾನವು ದುರಂತಕ್ಕೂ ಮುನ್ನ ಯಾವುದೇ ಅಡೆತಡೆಯಿಲ್ಲದೇ ಪ್ಯಾರಿಸ್–ದೆಹಲಿ–ಅಹಮದಾಬಾದ್ ಪ್ರಯಾಣವನ್ನ ಪೂರ್ಣಗೊಳಿಸಿತ್ತು ಎಂದು ಮಾಹಿತಿ ನೀಡಿದರು.

# ಏರ್ ಇಂಡಿಯಾ ವಿಮಾನ ದುರಂತ: ಸಾವಿನ ಸಂಖ್ಯೆ 279ಕ್ಕೆ ಏರಿಕೆ

**ಗಾಂಧೀನಗರ, ಜೂ.14:** ಅಹಮದಾಬಾದ್‌ನಲ್ಲಿ ಸಂಭವಿಸಿದ ಏರ್ ಇಂಡಿಯಾ ಬೋಯಿಂಗ್ ಡ್ರೀಮ್‌ಲೈನರ್ ವಿಮಾನ ದುರಂತದಲ್ಲಿ ಮೃತಪಟ್ಟವರ ಸಂಖ್ಯೆ 279ಕ್ಕೆ ಏರಿಕೆಯಾಗಿದೆ. ಈ ಸಾವು–ನೋವುಗಳಲ್ಲಿ ವಿಮಾನದಲ್ಲಿದ್ದ ಪ್ರಯಾಣಿಕರು, ಪೈಲಟ್ ಹಾಗೂ ಸಿಬ್ಬಂದಿ, ವಿಮಾನ ಅಪಘಾತಕ್ಕೀಡಾದ ಸ್ಥಳದಲ್ಲಿದ್ದ ಜನರು ಸೇರಿದ್ದಾರೆ. ಮೃತದೇಹಗಳ ಡಿಎನ್‌ಎ ಗುರುತಿಸುವಿಕೆಯ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಅಧಿಕೃತ ಸಾವುನೋವುಗಳ ಸಂಖ್ಯೆಯನ್ನು ಅಂತಿಮಗೊಳಿಸ ಲಾಗುವುದಿಲ್ಲ.

ಗುರುವಾರ ಅಹಮದಾಬಾದ್‌ನಿಂದ ಲಂಡನ್ ಗ್ಯಾಟ್ವಿಕ್ ವಿಮಾನ ನಿಲ್ದಾಣಕ್ಕೆ ಟೇಕಾಫ್ ಆದ ಕೆಲವೇ ಸೆಕೆಂಡುಗಳಲ್ಲಿ ಅಪಘಾತಕ್ಕೀಡಾದ ವಿಮಾನದಲ್ಲಿ 230 ಪ್ರಯಾಣಿಕರು, ಇಬ್ಬರು ಪೈಲಟ್‌ಗಳು ಮತ್ತು 10 ಸಿಬ್ಬಂದಿ ಸೇರಿದಂತೆ 242 ಜನರಿದ್ದರು. ಈ ಪೈಕಿ ಭಾರತೀಯ ಮೂಲದ ಬ್ರಿಟಿಷ್ ಪ್ರಜೆ ಮಾತ್ರ ಅಪಘಾತದಲ್ಲಿ ಬದುಕುಳಿದರು.




ದುರಂತಕ್ಕೆ ಕಾರಣವೇನು ಎಂಬ ಬಗ್ಗೆ ತನಿಖೆ ನಡೆಯುತ್ತಿದೆ. ವಿಮಾನದಲ್ಲಿದ್ದ ಎರಡು ಬ್ಲ್ಯಾಕ್‌ಬಾಕ್ಸ್‌ಗಳ ಪೈಕಿ ಒಂದು ಪತ್ತೆಯಾಗಿದೆ. ಅದನ್ನು ಅಧಿಕಾರಿಗಳ ತಂಡ ಕೊಂಡೊಯ್ದಿದೆ. ಮತ್ತೊಂದು ಬ್ಲ್ಯಾಕ್ ಬಾಕ್ಸ್‌ಗಾಗಿ ಹುಡುಕಾಟ ನಡೆದಿದೆ. ಈ ಬ್ಲಾಕ್‌ಬಾಕ್ಸ್ ವಿಮಾನ ದುರಂತಕ್ಕೆ ಕಾರಣವಾದ ಬಗ್ಗೆ ಪ್ರಮುಖ ಸುಳಿವುಗಳನ್ನು ಒದಗಿಸುತ್ತದೆ ಎಂದು ಹೇಳಲಾಗಿದೆ. ಬ್ಲಾಕ್‌ಬಾಕ್ಸ್ ವಿಮಾನವು ತನ್ನ ಹಾರಾಟದ ಸಮಯದಲ್ಲಿ ಮಾಹಿತಿಯನ್ನು ದಾಖಲಿಸುವ ಒಂದು ಸಣ್ಣ ಸಾಧನವಾಗಿದೆ. ಇದು ವಿಮಾನ ಅಪಘಾತಗಳ ತನಿಖೆಗೆ ಕೂಡ ಸಹಾಯ ಮಾಡುತ್ತದೆ.

# ವಿಮಾನ ಅಪಘಾತ: ಮೃತರ ಕುಟುಂಬಗಳಿಗೆ ಏರ್ ಇಂಡಿಯಾದಿಂದ 25 ಲಕ್ಷ ರೂ. ಮಧ್ಯಂತರ ಪರಿಹಾರ

**ನವದೆಹಲಿ, ಜೂ.14:** ಇತ್ತೀಚೆಗೆ ತನ್ನ ವಿಮಾನ ಅಪಘಾತದಲ್ಲಿ ಮೃತಪಟ್ಟವರ ಕುಟುಂಬ ಗಳಿಗೆ ತಲಾ ರೂ. 25 ಲಕ್ಷ ಮಧ್ಯಂತರ ಆರ್ಥಿಕ ಸಹಾಯವನ್ನು ಏರ್‌ಇಂಡಿಯಾ ಶನಿವಾರ ಘೋಷಿಸಿದೆ.

ಟಾಟಾ ಸನ್ಸ್ ಈಗಾಗಲೇ ಘೋಷಿಸಿರುವ ಒಂದು ಕೋಟಿ ರೂಪಾಯಿಗಳ ಬೆಂಬಲದ ಜೊತೆಗೆ ಇದು ಎಂದು ಏರ್ ಇಂಡಿಯಾ ತಿಳಿಸಿದೆ. "ಇತ್ತೀಚಿನ ಅಪಘಾತದಲ್ಲಿ ದುರಂತವಾಗಿ ಪ್ರಾಣ ಕಳೆದುಕೊಂಡ ಪ್ರಯಾಣಿಕರ ಕುಟುಂಬಗಳಿಗೆ ಏರ್ ಇಂಡಿಯಾ ಒಗ್ಗಟ್ಟಿನಿಂದ ನಿಂತಿದೆ. ಈ ನಂಬಲಾಗದಷ್ಟು ಕಷ್ಟಕರ ಸಮಯದಲ್ಲಿ ಆರೈಕೆ ಮತ್ತು ಬೆಂಬಲವನ್ನು ನೀಡಲು ನಮ್ಮ ತಂಡಗಳು ಸಾಧ್ಯವಿರುವ ಎಲ್ಲವನ್ನೂ ಮಾಡುತ್ತಿವೆ" ಎಂದು ಏರ್ ಇಂಡಿಯಾ ಹೇಳಿದೆ. "ನಮ್ಮ ನಿರಂತರ ಪ್ರಯತ್ನಗಳ ಭಾಗವಾಗಿ, ಮೃತರ ಕುಟುಂಬಗಳಿಗೆ ಮತ್ತು ಬದುಕುಳಿದವರಿಗೆ ತುರ್ತು ಆರ್ಥಿಕ ಅಗತ್ಯಗಳನ್ನು ಪೂರೈಸಲು ಏರ್ ಇಂಡಿಯಾ ರೂ. 25 ಲಕ್ಷ ಅಥವಾ ಸರಿಸುಮಾರು 21,000 ಜಿಬಿಪಿ ಮಧ್ಯಂತರ ಪಾವತಿಯನ್ನು ನೀಡಲಿದೆ" ಎಂದು ಅದು ಹೇಳಿದೆ. "ಟಾಟಾ ಸನ್ಸ್ ಈಗಾಗಲೇ ಘೋಷಿಸಿರುವ ರೂ. 1 ಕೋಟಿ ಅಥವಾ ಸರಿಸುಮಾರು 85,000 ಜಿಬಿಪಿ ಬೆಂಬಲದ ಜೊತೆಗೆ ಇದು" ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

## ನಿತ್ಯ ಪಂಚಾಂಗ 15.06.2025 ಭಾನುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ಗ್ರೀಷ್ಮ ಋತು
ಚಾಂದ್ರಮಾನ, ಜ್ಯೇಷ್ಠ ಬಹುಳ

ಚೌತಿ, ಶ್ರವಣ ನಕ್ಷತ್ರ,
ಮಿಥುನ ಸಂಕ್ರಮಣ, ಅನಧ್ಯಯನ,
ಮೈಸೂರು ತಿಲಕ ನಗರ ಶ್ರೀನಿವಾಸ ಉತ್ಸವ,
ಮೈಸೂರು ಕೋಟೆರಥ, ಫಾದರ್ಸ್ ಡೇ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ವಿರೋಧ ಪಕ್ಷದಲ್ಲಿ ಕುಳಿತುಕೊಳ್ಳಲೂ ಯೋಗ್ಯರಲ್ಲ

## ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಪ್ರಲ್ಹಾದ್ ಜೋಶಿ ವಾಗ್ದಾಳಿ

**ಕಲಬುರಗಿ, ಜೂ.14:** ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಶನಿವಾರ ತೀವ್ರ ವಾಗ್ದಾಳಿ ನಡೆಸಿದ್ದು, ಕಾಂಗ್ರೆಸ್ ಪಕ್ಷವು ಜನರ ವಿಶ್ವಾಸವನ್ನು ಕಳೆದುಕೊಂಡಿದೆ ಮತ್ತು ಅದರ ನಾಯಕರು. ವಿರೋಧ ಪಕ್ಷದಲ್ಲಿ ಕುಳಿತುಕೊಳ್ಳಲೂ ಯೋಗ್ಯರಲ್ಲ" ಎಂದು ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಖರ್ಗೆ ಅವರ ವಿವಾದಾತ್ಮಕ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಜೋಶಿ, ನಮಗೆ ಖರ್ಗೆಯವರ ಪ್ರಮಾಣಪತ್ರ ಅಗತ್ಯವಿಲ್ಲ. ಭಾರತದ ಜನರು ಅವರನ್ನು ಯಾರು ಮುನ್ನಡೆಸಬೇಕೆಂದು ನಿರ್ಧರಿಸುತ್ತಾರೆ. ನಿಮ್ಮನ್ನು (ಕಾಂಗ್ರೆಸ್) ಎಷ್ಟು ಸಂಪೂರ್ಣವಾಗಿ ತಿರಸ್ಕರಿಸಲಾಗಿದೆಯೆಂದರೆ, ಕಳೆದ ಎರಡು ಅವಧಿಯಲ್ಲಿ ವಿರೋಧ ಪಕ್ಷದ ನಾಯಕನ ಪಾತ್ರವೂ ನಿಮಗೆ ತಲುಪಲು ಅಸಾಧ್ಯವೆಂದು ತೋರುತ್ತಿತ್ತು. ಮತ್ತು ಈ ಬಾರಿಯೂ ಸಹ, ಸುಳ್ಳು ಕಥೆಗಳನ್ನು ಹರಡುತ್ತಿದ್ದರೂ, ಚುನಾವಣೆ ಗಳು ನಡೆದಲ್ಲೆಲ್ಲಾ, ನೀವು (ಲೋಕಸಭಾ ಚುನಾವಣೆಯ ನಂತರ) ಅವಮಾನಕರ ಸೋಲುಗಳನ್ನು ಎದುರಿಸಿದ್ದೀರಿ."

ನೀವು ವಿರೋಧ ಪಕ್ಷದಲ್ಲಿ ಕುಳಿತುಕೊಳ್ಳಲೂ ಯೋಗ್ಯರಲ್ಲ – ನೀವು ಏನು ಅಸಂಬದ್ಧವಾಗಿ ಮಾತನಾಡುತ್ತಿದ್ದೀರಿ?" ರಾಜಕೀಯ ಉದ್ವಿಗ್ನತೆಯನ್ನು ಉಂಟುಮಾಡುವ ಸಾಧ್ಯತೆಯಿರುವ ನೇರ ಹೇಳಿಕೆಯಲ್ಲಿ ಜೋಶಿ ಹೇಳಿದರು. ಜೂನ್ 11ರಂದು, ಪ್ರಧಾನಿ ಮೋದಿ 11 ವರ್ಷಗಳನ್ನು ಪೂರೈಸಿದ ದಿನದಂದು, ಖರ್ಗೆ ಅವರು ಪ್ರಧಾನಿ ಸುಳ್ಳು ಹೇಳುತ್ತಿದ್ದಾರೆ ಮತ್ತು ಮತಗಳಿಗಾಗಿ ಜನರನ್ನು ಕುಶಲತೆಯಿಂದ ಬಳಸುತ್ತಿದ್ದಾರೆ ಎಂದು ಆರೋಪಿಸಿದರು. "ಇಷ್ಟು ವ್ಯಾಪಕವಾಗಿ ಸುಳ್ಳು ಹೇಳುವ ಮತ್ತು ಮತಗಳನ್ನು ಗೆಲ್ಲಲು ಕುಶಲತೆಯಿಂದ ವರ್ತಿಸುವ ಪ್ರಧಾನಿಯನ್ನು ನಾನು ಎಂದಿಗೂ ನೋಡಿಲ್ಲ" ಎಂದು ಖರ್ಗೆ ಹೇಳಿದ್ದರು, ಹಲವಾರು ರಾಷ್ಟ್ರೀಯ ವಿಷಯಗಳಲ್ಲಿ ಸರ್ಕಾರದಿಂದ ಹೊಣೆಗಾರಿಕೆಯನ್ನು ಕೋರಿದ್ದರು. ಇದಕ್ಕೆ ಪ್ರತಿಯಾಗಿ ಜೋಶಿ, ಇಂತಹ ಹೇಳಿಕೆಗಳು ಪ್ರಜಾಪ್ರಭುತ್ವದ ಜನಾದೇಶಕ್ಕೆ ಮಾಡಿದ ಅವಮಾನ ಎಂದು ಹೇಳಿದರು.

ನೆಹರು ಮತ್ತು ಇಂದಿರಾ ಗಾಂಧಿ ನಂತರ, ನರೇಂದ್ರ ಮೋದಿ ಮಾತ್ರ ಸತತ ಮೂರನೇ ಅವಧಿಗೆ ಮರಳಿದ್ದಾರೆ. ಅದು ಜನರ ತೀರ್ಪು. ನೀವು ಅದನ್ನು ಪ್ರಶ್ನಿಸಿದರೆ ಅದರ ಅರ್ಥವೇನು? ಅದು ಭಾರತದ ಮತದಾರರಿಗೆ ಮಾಡಿದ ಅವಮಾನವಲ್ಲದೆ ಬೇರೇನೂ ಅಲ್ಲ ಎಂದು ಅವರು ಹೇಳಿದರು.

ಏತನ್ಮಧ್ಯೆ, ಜೋಶಿ ಇತ್ತೀಚಿನ ಏರ್ ಇಂಡಿಯಾ ವಿಮಾನ ಘಟನೆಯನ್ನು ಸಹ ಉಲ್ಲೇಖಿಸಿ, ಇದನ್ನು "ತೀವ್ರ ದುರದೃಷ್ಟಕರ" ಎಂದು ಕರೆದರು. ಭಾರತ ಸರ್ಕಾರ ಮತ್ತು ನಾಗರಿಕ ವಿಮಾನಯಾನ ನಿರ್ದೇಶನಾಲಯ (ಡಿಜಿಸಿಎ) ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದೆ ಎಂದು ಅವರು ಭರವಸೆ ನೀಡಿದರು.



ಸಂಪೂರ್ಣ ತನಿಖೆ ನಡೆಯುತ್ತಿದೆ. ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಯಲು ಏನು ಮಾಡಬೇಕೋ ಅದನ್ನು ಮಾಡಲಾಗುವುದು. ಮೃತರ ಕುಟುಂಬಗಳಿಗೆ ಪರಿಹಾರ ಸಿಗುತ್ತದೆ ಮತ್ತು ಗಾಯಗೊಂಡವರಿಗೆ ಸಂಪೂರ್ಣ ಆರೈಕೆ ನೀಡಲಾಗುವುದು" ಎಂದು ಅವರು ಹೇಳಿದರು.

ಡಿಜಿಸಿಎ ಮತ್ತು ನಾಗರಿಕ ವಿಮಾನಯಾನ ಸಚಿವಾಲಯ ಎರಡೂ ಘಟನೆಯನ್ನು "ಅತ್ಯಂತ ಗಂಭೀರವಾಗಿ" ಪರಿಗಣಿಸಿವೆ ಮತ್ತು ಅಂತಹ ದುರಂತಗಳು ಪುನರಾವರ್ತನೆಯಾಗದಂತೆ ನೋಡಿಕೊಳ್ಳಲು ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದು ಕೊಳ್ಳಲಾಗುವುದು ಎಂದು ಸಚಿವರು ಹೇಳಿದರು.

## ಜಾತಿಗಣತಿ ಮರು ಸಮೀಕ್ಷೆಗೆ ಕಾಂಗ್ರೆಸ್ ವರಿಷ್ಠರ ಸೂಚನೆ

**ಬೆಂಗಳೂರು, ಜೂ.14:** ಒಳ ಮೀಸಲಾತಿಗಾಗಿ ಮರು ಜಾತಿಗಣತಿ ಸಮೀಕ್ಷೆ ನಡೆಸುವಂತೆ ಕಾಂಗ್ರೆಸ್ ಹೈಕಮ್ಯಾಂಡ್ ರಾಜ್ಯದ ನಾಯಕರಿಗೆ ಸೂಚಿಸಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮುಖಂಡರು ಬೆಂಗಳೂರಿನಲ್ಲಿ ಸಭೆ ನಡೆಸಿ ಚರ್ಚೆ ನಡೆಸಿದ್ದಾರೆ. ಗ್ರೇಟರ್ ಬೆಂಗಳೂರು ಸಂಬಂಧಿತ ವಿಷಯವೂ ಸಹ ಈ ಸಭೆಯಲ್ಲಿ ಚರ್ಚೆಗೊಳಗಾಗಲಿದೆ ಎಂದು ತಿಳಿದುಬಂದಿದೆ. ಸಭೆಯಲ್ಲಿ ಸಚಿವ ಕೆ.ಎಚ್. ಮುನಿಯಪ್ಪ, ಆರ್.ಬಿ. ತಿಮ್ಮಾಪುರ, ಎಲ್. ಹನುಮಂತಯ್ಯ, ಎಚ್. ಆಂಜನೇಯ ಸೇರಿದಂತೆ ಹಲವು ಮುಖಂಡರು ಭಾಗಿಯಾಗಿದ್ದಾರೆ. ಒಳಮೀಸಲಾತಿ ಸಮೀಕ್ಷೆಯು ಯಶಸ್ವಿಯಾಗಿಲ್ಲ. ಹೀಗಾಗಿ ಪ್ರತಿಯೊಂದು ಮನೆಗೂ ಮಾಹಿತಿಯನ್ನು ತಲುಪಿಸಬೇಕು. ಮಾದಿಗ ಸಮುದಾಯಕ್ಕೆ ಮಾಹಿತಿ ತಲುಪಿಸಬೇಕು. 28 ವಿಧಾನಸಭಾ ಕ್ಷೇತ್ರಗಳಲ್ಲೂ ಸಮೀಕ್ಷೆ ವಿಫಲಗೊಂಡಿದೆ. ಸಮೀಕ್ಷೆಯಲ್ಲಿ ಭಾಗವಹಿಸಿದ ಕುಟುಂಬಗಳಿಗೆ ಮಾಹಿತಿ ತಲುಪಿಸುವ ಕೆಲಸವಾಗಬೇಕು ಎಂದು ಸಭೆಯಲ್ಲಿ ಒತ್ತಾಯ ಕೇಳಿಬಂದಿದೆ.



ಮಾಜಿ ಸಚಿವ ಎಚ್.ಎಂ.ರೇವಣ್ಣ ಅವರ ಪತ್ನಿ ನಿಧನರಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ರೇವಣ್ಣ ನಿವಾಸಕ್ಕೆ ಭೇಟಿ ನೀಡಿ ಸಾಂತ್ವನ ಹೇಳಿದರು

## ಭಾರಿ ಮಳೆ ಹಿನ್ನೆಲೆ: ಸಿಎಂ ಸಿದ್ದರಾಮಯ್ಯ ಉತ್ತರ ಕನ್ನಡ ಪ್ರವಾಸ ರದ್ದು



**ಬೆಂಗಳೂರು, ಜೂ.14:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉತ್ತರ ಕನ್ನಡ ಜಿಲ್ಲಾ ಪ್ರವಾಸವನ್ನು ದಿಢೀರ್ ರದ್ದುಗೊಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಭಾರಿ ಮಳೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಸಿಎಂ ಸಿದ್ದರಾಮಯ್ಯ ಜಿಲ್ಲಾ ಪ್ರವಾಸ ರದ್ದುಮಾಡಿದ್ದಾರೆ ಎಂದು ತಿಳಿದುಬಂದಿದೆ.ಉತ್ತರ ಕನ್ನಡ ಜಿಲ್ಲಾಧಿಕಾರಿ ಕಚೇರಿಯ ನೂತನ ಕಟ್ಟಡ ಉದ್ಘಾಟನಾ ಕಾರ್ಯಕ್ರಮಕ್ಕೆ ಜೂನ್ 20ರಂದು ಸಿಎಂ ಸಿದ್ದರಾಮಯ್ಯ ಕಾರವಾರಕ್ಕೆ ತೆರಳುವವರಿದ್ದರು. ಆದರೆ ಹವಾಮಾನ ಇಲಾಖೆ ಉತ್ತರ ಕನ್ನಡ ಜಿಲ್ಲೆಯಾದ್ಯಂತ ಭಾರಿ ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಜಿಲ್ಲಾ ಪ್ರವಾಸವನ್ನು ರದ್ದುಗೊಳಿಸಿದ್ದಾರೆ.

## ಕಿದ್ವಾಯಿ ಬಳಿ ಕ್ಯಾನ್ಸರ್ ಪೀಡಿತರಿಗೆ ವಸತಿ ಶಾಲೆ ತೆರೆಯಲು ಸಿದ್ಧತೆ ಸಚಿವ ಮಧುಬಂಗಾರಪ್ಪ ಮಾಹಿತಿ



**ಶಿವಮೊಗ್ಗ, ಜೂ.14:** ಕ್ಯಾನ್ಸರ್ ಪೀಡಿತ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಉಚಿತ ಆರೋಗ್ಯ ಸೌಲಭ್ಯದ ಜೊತೆಗೆ ಶಿಕ್ಷಣ ನೀಡಲು ವಸತಿ ಶಾಲೆ ಆರಂಭಿಸಲು ಸಿದ್ಧತೆ ನಡೆಸಲಾಗಿದೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬೆಂಗಳೂರಿನಲ್ಲಿ ಪ್ರಥಮ ಹಂತವಾಗಿ ರಾಜ್ಯದ ಪ್ರಮುಖ ಕ್ಯಾನ್ಸರ್ ಆಸ್ಪತ್ರೆಗಳಲ್ಲಿ ಒಂದಾದ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ ಪಕ್ಕದಲ್ಲೇ ಕ್ಯಾನ್ಸರ್ ಪೀಡಿತರಿಗೆ ವಸತಿ ಶಾಲೆಯನ್ನು ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಈಗಾಗಲೇ ಖಾಸಗಿ ಎನ್‌ಜಿಒ ಜತೆ ಸಭೆ ನಡೆಸಿ ಯೋಜನೆ ರೂಪಿಸಿದ್ದೇನೆ. ಕಿದ್ವಾಯಿ ಆಸ್ಪತ್ರೆ ಸಮೀಪದಲ್ಲಿ ಖಾಸಗಿ ಕಟ್ಟಡವನ್ನು ನೋಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಲಹೆ ಪಡೆದುಕೊಂಡು ಜುಲೈ ಅಂತ್ಯದೊಳಗೆ ಪ್ರಾರಂಭಿಸಲಾಗುವುದು. ಎನ್‌ಜಿಒ ಅವರ ಮಾಹಿತಿ ಪ್ರಕಾರ ಈಗಾಗಲೇ 1,500 ಸಾವಿರ ಮಕ್ಕಳನ್ನು ಗುರುತಿಸಿದ್ದಾರೆ. ಇದಕ್ಕೂ ಹೆಚ್ಚು ಇರಬಹುದು. ಒಂದನೇ ತರಗತಿಯಿಂದ ಹತ್ತನೇ ತರಗತಿಯವರೆಗೆ ಶಿಕ್ಷಣ ನೀಡಲಾಗುವುದು. ವಿಸ್ತರಣೆ ಬಗ್ಗೆ ಮುಂದಿನ ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು. ಕ್ಯಾನ್ಸರ್ ಪೀಡಿತರಿಗೆ ವಸತಿ ಶಾಲೆಯಲ್ಲಿ ಶಿಕ್ಷಣ ನೀಡಲಾಗುತ್ತದೆ. ಮಕ್ಕಳಿಗೆ ಆರೋಗ್ಯದಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಕಿದ್ವಾಯಿ ಆಸ್ಪತ್ರೆಗೆ ಕರೆದೊಯ್ಯಲು ಮಿನಿ ಬಸ್ ಹಾಗೂ ಕಾರಿನ ಸೌಲಭ್ಯ ಕಲ್ಪಿಸಲಾಗುತ್ತದೆ. ಆಟ, ಪಾಠಕ್ಕೆ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಎಲ್ಲ ಮಕ್ಕಳಂತೆ ಅವರು ಗೌರವಯುತವಾಗಿ ಬದುಕಬೇಕು ಎಂಬುದು ನನ್ನ ಉದ್ದೇಶ ಎಂದರು.

## ಪರಿಶಿಷ್ಟರು ತಪ್ಪದೇ ಮೂಲಜಾತಿ ನೋಂದಾಯಿಸಿ



**ಬೆಂಗಳೂರು, ಜೂ.14:** ಒಳಮೀಸಲಾತಿ ಸಮೀಕ್ಷೆಯಲ್ಲಿ ಪರಿಶಿಷ್ಟರು ತಪ್ಪದೇ ಮೂಲಜಾತಿ ನೊಂದಾಯಿಸಬೇಕು. ಆದರೆ ಬೆಂಗಳೂರಿನಲ್ಲಿ ಶೇ.50 ರಷ್ಟು ಜನ ಜಾತಿ ಜನಗಣತಿಯಲ್ಲಿ ಭಾಗವಹಿಸಿಲ್ಲ ಎಂದು ಆಹಾರ ಸಚಿವ ಕೆ.ಎಚ್. ಮುನಿಯಪ್ಪ ವಿಷಾದ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನ ಮಯೂರ ಹೋಟೆಲ್‌ನಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಸಚಿವರು ಸಮುದಾಯದ ಮುಖಂಡರೊಂದಿಗೆ ಚರ್ಚೆ ನಡೆಸಿದರು.

ನ್ಯಾಯಮೂರ್ತಿ ಎಚ್. ಎನ್.ನಾಗಮೋಹನ್‌ದಾಸ್ ರವರ ಏಕ ಸದಸ್ಯ ಆಯೋಗದ ನಿರ್ದೇಶನದ ಮೇರೆಗೆ ರಾಜ್ಯ ಸರ್ಕಾರ ಪರಿಶಿಷ್ಟ ಜಾತಿಯಲ್ಲಿನ 101 ಉಪ ಜಾತಿಗಳ ದತ್ತಾಂಶ ಸಂಗ್ರಹಣೆಗಾಗಿ ಮೇ 6 ರಿಂದ ಸಮಗ್ರ ಸಮೀಕ್ಷೆ ನಡೆಸುತ್ತಿದ್ದು ರಾಜ್ಯದಾದ್ಯಂತ ಉತ್ತಮ ಸ್ಪಂದನೆಯಿಂದ ಉಪ ಜಾತಿಯ ಮಾಹಿತಿಯನ್ನು ನೀಡಿದ್ದು ಸ್ವಾಗತಿಸುತ್ತೇನೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ಎಲ್ಲಾರು ಒಟ್ಟಾಗಿ ಕೆಲಸ ಮಾಡಬೇಕು. ಪಕ್ಷಾತೀತವಾಗಿ ನಾವು ಕೆಲಸ ಮಾಡಬೇಕಾಗುತ್ತದೆ ಎಂದು ಹೇಳಿದರು.

ಸಮೀಕ್ಷೆಯು ಪರಿನಾಮಕಾರಿಯಾಗಿ ಮತ್ತು ಯಶಸ್ವಿಯಾಗಿಸಲು ಎಲ್ಲಾ ಮುಖಂಡರು ಕಾರ್ಯ ನಿರ್ವಹಿಸಬೇಕು ನಮ್ಮ ಸಮುದಾಯದ ಎಲ್ಲಾ ಸ್ವಾಮೀಜಿಗಳು ಹಾಗೂ ನಾಯಕರು,ಇದರ ಯಶಸ್ವಿಗೆ ಶ್ರಮಿಸಬೇಕು ಎಂದರು. ಬೆಂಗಳೂರಿನಲ್ಲಿ ಹೆಚ್ಚಿನ ಜನಸಂಖ್ಯೆ ಇದ್ದು, ಇಲ್ಲಿಯವರೆಗೂ ಶೇ 46% ಜನಸಂಖ್ಯೆ ಮಾತ್ರ ತಮ್ಮ ಮೂಲ ಜಾತಿಯನ್ನು ನೊಂದಾಯಿಸಿದ್ದಾರೆ. ಇನ್ನೂ ಹೆಚ್ಚಿನ ಜನ ನೊಂದಣಿ ಮಾಡದಿರುವ ಕಾರಣ ಇಂದು ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಬರುವ 192 ವಾರ್ಡಗಳಲ್ಲಿ ಪರಿಶಿಷ್ಟ ಜಾತಿಯ ಪ್ರಮುಖ ಮುಖಂಡರೊಂದಿಗೆ ಇಂದು ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್. ಮುನಿಯಪ್ಪ ಹಾಗೂ ಅಬಕಾರಿ ಸಚಿವರಾದ ಆರ್.ಬಿ.ತಿಮ್ಮಾಪುರ ರವರ ನೇತೃತ್ವದಲ್ಲಿ ಸಭೆಯನ್ನು ನಡೆಸಲಾಯಿತು.

ಸಮಗ್ರ ಸಮೀಕ್ಷೆಯಲ್ಲಿ ನಾಗರಿಕರು ಕೆಲಸಗಳ ಒತ್ತಡದಿಂದ ಗಣತಿದಾರರಿಗೆ ಸಿಗದ ಕಾರಣ ಅವರಿಗೆ ಅನುಕೂಲವಾಗುವಂತೆ ಬೆಳಗ್ಗೆ 6 ಗಂಟೆಯಿಂದ 9 ಗಂಟೆಯವರೆಗೆ ನಡೆಸಲು ಸಭೆಯಲ್ಲಿ ಚರ್ಚಿಸಿದರು.

ಈ ಸಂದರ್ಭದಲ್ಲಿ ಪಾಲನಹಳ್ಳಿ ಸ್ವಾಮೀಜಿಗಳಾದ ಸಿದ್ದರಾಜು ಸ್ವಾಮೀಜಿ,ಮಾಜಿ ಕೇಂದ್ರ ಸಚಿವರಾದ ಎ.ನಾರಾಯಣಸ್ವಾಮಿ, ಮಾಜಿ ಸಂಸದರಾದ ಚಂದ್ರಪ್ಪ, ಮಾಜಿ. ಮೇಯರ್ ನಾರಾಯಣ,ಹಾಗೂ ನಿವೃತ್ತ ಐಎಎಸ್ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಗ್ಯಾರಂಟಿಗೆ ಹಣ ಹೊಂದಿಸಲಾಗದೆ ಕೇಂದ್ರದ ವಿರುದ್ಧ ಮುಖ್ಯಮಂತ್ರಿ ರಾಜಕೀಯ ಪ್ರಹಾರ

**14ನೇ ಹಣಕಾಸು ಆಯೋಗಕ್ಕೆ ಹೋಲಿಸಿದರೆ 15ನೇ ಹಣಕಾಸು ಆಯೋಗದಲ್ಲಿ ಲಕ್ಷ ಕೋಟಿ ರೂ. ಹೆಚ್ಚಿಗೆ ಬರುತ್ತದೆ: ಬಸವರಾಜ ಬೊಮ್ಮಾಯಿ**



ಬೆಂಗಳೂರು: 14ನೇ ಹಣಕಾಸು ಆಯೋಗಕ್ಕೆ ಹೋಲಿಕೆ ಮಾಡಿದರೆ 15 ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ಕೇಂದ್ರದಿಂದ 1 ಲಕ್ಷ ಕೋಟಿ ರೂ. ಗೂ ಹೆಚ್ಚು ಹಣ ಬರುತ್ತದೆ. ಗ್ಯಾರಂಟಿ ಯೋಜನೆಗೆ ಹಣ ಹೊಂದಿಸಲಾಗದೇ ಸಿಎಂ ಸಿದ್ದರಾಮಯ್ಯ ಅವರು ಕೇಂದ್ರ ಸರ್ಕಾರದ ವಿರುದ್ಧ ರಾಜಕೀಯವಾಗಿ ಮಾತನಾಡುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರು, ಹೊಸದೇನು ಹೇಳಿಲ್ಲ ಈಗಾಗಲೇ ಹಲವಾರು ಬಾರಿ ಸುಳ್ಳು ಹೇಳಿದ್ದಾರೆ. ಈಗ ಅದನ್ನೇ ಮತ್ತೆ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರು ಕೇಂದ್ರದ ಅನುದಾನ ಶೇ.32 ರಿಂದ ಶೇ.42 ಕ್ಕೆ ಏರಿಸಿದ್ದರು. ಅವರು ಶೇ 10% ಹೆಚ್ಚಳ ಮಾಡಿದ್ದಾರೆ. ಅದು ಸಿದ್ದರಾಮಯ್ಯ ಅವರಿಗೆ ಗೊತ್ತಿದ್ದು ಮರೆ ಮಾಚುತ್ತಾರೆ. ಶೇ 40% ರಿಂದ 50%ಕ್ಕೆ ಹೆಚ್ಚಳ ಮಾಡ ಬೇಕೆನ್ನುವುದು ನಮ್ಮೆಲ್ಲರ ಬೇಡಿಕೆಯಾಗಿದೆ. 14 ನೇ ಹಣಕಾಸು ಆಯೋಗ ಸಭೆ ನಡೆಸಿದ ಸಂದರ್ಭದಲ್ಲಿ ಐದು ಜನ ಕಾಂಗ್ರೆಸ್ ಸಚಿವರಿದ್ದರು ಆಗ ರಾಜ್ಯದ ಪರವಾಗಿ ಸರಿಯಾಗಿ ವಾದ ಮಾಡದೇ ತಮ್ಮ ತಪ್ಪು ಮುಚ್ಚಿಕೊಳ್ಳಲು ಈ ರೀತಿ ಮಾತನಾಡುತ್ತಿದ್ದಾರೆ. ರಾಜ್ಯಕ್ಕೆ ಕಾಂಗ್ರೆಸ್‌ನಿಂದಲೇ ಅನ್ಯಾಯವಾಗಿದೆ ಎಂದು ಆರೋಪಿಸಿದರು.

14ನೇ ಹಣಕಾಸು ಆಯೋಗಕ್ಕೆ ಹೋಲಿಕೆ ಮಾಡಿದರೆ 15 ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ಕೇಂದ್ರದಿಂದ 1 ಲಕ್ಷ ಕೋಟಿ ರೂ. ಹೆಚ್ಚಿಗೆ ಬರುತ್ತದೆ. ಈಗಾಗಲೇ 14 ನೇ ಹಣಕಾಸು ಆಯೋಗದಲ್ಲಿ ಬಂದಷ್ಟು ಹಣ ರಾಜ್ಯಕ್ಕೆ ಬಂದಿದೆ. ಇನ್ನು ಎರಡು ವರ್ಷ ಬರುತ್ತದೆ. ಗ್ಯಾರಂಟಿ ಯೋಜನೆಗೆ ಹಣ ಹೊಂದಿಸಲಾಗದೇ ಸಿಎಂ ಸಿದ್ದರಾಮಯ್ಯ ಅವರು ಕೇಂದ್ರ ಸರ್ಕಾರದ ವಿರುದ್ಧ ರಾಜಕೀಯವಾಗಿ ಮಾತನಾಡುತ್ತಾರೆ. ರಾಜ್ಯದ ರೈಲ್ವೆ ಯೋಜನೆಗೆ ಯುಪಿಎ ಅವಧಿಯಲ್ಲಿ 700 ಕೋಟಿ ರೂ. ಬಂದಿತ್ತು. ಈ ವರ್ಷ ಕೇಂದ್ರ ಸರ್ಕಾರ 7700 ಕೋಟಿ ರೂ. ಕೊಟ್ಟಿದೆ ಅದಕ್ಕೆ ಮ್ಯಾಚಿಂಗ್ ಗ್ರ್ಯಾಂಟ್ ಕೊಡಲು ರಾಜ್ಯಸರ್ಕಾರಕ್ಕೆ ಆಗುತ್ತಿಲ್ಲ. ಆರೋಗ್ಯ, ಗ್ರಾಮೀಣಾಭಿವೃದ್ಧಿ, ರಸ್ತೆ ಸೇರಿದಂತೆ ಹಲವಾರು ಯೋಜನೆಗಳಿಗೂ ಕೇಂದ್ರ ಸರ್ಕಾರ ಅನುದಾನ ನೀಡುತ್ತಿದೆ. ಅದನ್ನು ರಾಜ್ಯ ಸರ್ಕಾರ ಹೇಳುವುದಿಲ್ಲ ಎಂದು ಹೇಳಿದರು.

**ಜಾತಿ ಸಮೀಕ್ಷೆ ಅಧಿಕಾರವಿಲ್ಲ**

ಜಾತಿ ಸಮೀಕ್ಷೆ ಮಾಡುವ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಮುಖ್ಯಮಂತ್ರಿಗಳು ಸುಮ್ಮನೆ ಹಿಂದುಳಿದ ವರ್ಗದ ಜನರ ಕಣ್ಣಿಗೆ ಮಣ್ಣೆರಚುತ್ತಿದ್ದಾರೆ. ಹತ್ತು ವರ್ಷದಿಂದ ಇವರೇ ಸಿಎಂ ಇದ್ದರು, ಆಗ ಯಾಕೆ ಮಾಡಲಿಲ್ಲ. ಜಾತಿ ಸಮೀಕ್ಷೆ ವಿಚಾರದಲ್ಲಿ ಸಿಎಂ ಬಹಳ ಸಂಕಷ್ಟಕ್ಕೆ ಸಿಲುಕಿದ್ದರು. ಹೈಕಮಾಂಡ್ ಅದರಿಂದ ಇವರನ್ನು ರಕ್ಷಿಸಿದೆ. ಆದರೆ, ಕೇಂದ್ರ ಸರ್ಕಾರವೇ ಮಾಡುವ ಜಾತಿ ಸಮೀಕ್ಷೆ ಅಂತಿಮ ಎಂದು ಹೇಳಿದರು.


**ಯುದ್ಧ ನಿಲ್ಲಿಸಲು ಶ್ರಮಿಸಬೇಕು**

ಇರಾನ್ ಮೇಲೆ ಇಸ್ರೇಲ್ ದಾಳಿ ನಡೆಸಿರುವುದು ಆಘಾತಕಾರಿ ವಿಚಾರ, ಈ ಬಗ್ಗೆ ಅಮೆರಿಕಾ ಕೂಡ ತುರ್ತು ಸಭೆ ನಡೆಸಿದೆ. ಒಂದೆಡೆ ರಷ್ಯಾ ಉಕ್ರೇನ್ ಯುದ್ಧ, ಇದು ವಿಶ್ವದ ಮೇಲೆ ಬಹಳಷ್ಟು ಪರಿಣಾಮ ಬೀರುತ್ತದೆ. ವಿಶ್ವದ ಎಲ್ಲ ನಾಯಕರು ಯುದ್ಧ ನಿಲ್ಲಿಸುವ ನಿಟ್ಟಿನಲ್ಲಿ ಪ್ರಯತ್ನ ನಡೆಸಬೇಕು ಎಂದು ಹೇಳಿದರು.

## ಮಳೆನೀರಿನಲ್ಲಿ ಕೊಚ್ಚಿ ಹೋಗಿ ಮೃತಪಟ್ಟ ಹುಸೇನ್ ಕುಟುಂಬಕ್ಕೆ 5ಲಕ್ಷ ರೂ. ಪರಿಹಾರ

**ಹುಬ್ಬಳ್ಳಿ, ಜೂ.14:** ಇತ್ತೀಚಿಗೆ ಸುರಿದ ಭಾರಿ ಮಳೆಯಿಂದ ನೀರಿನಲ್ಲಿ ಕೊಚ್ಚಿ ಹೋಗಿ ಮೃತಪಟ್ಟಿದ್ದ ಹುಸೇನಸಾಬ್ ಕಳಸ ಕುಟುಂಬದ ಸದಸ್ಯರಿಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಶನಿವಾರ 5 ಲಕ್ಷ ರೂ. ಪರಿಹಾರದ ಆದೇಶವನ್ನು ಹಸ್ತಾಂತರಿಸಿದರು. ಹುಬ್ಬಳ್ಳಿ ಹೊರವಲಯದ ಮಾವನೂರು ರಸ್ತೆಯ ಬಳಿ ಬುಧವಾರ ರಾತ್ರಿ ಹುಸೇನಸಾಬ್ ಅವರು ಮಳೆನೀರಿನಲ್ಲಿ ಕೊಚ್ಚಿ ಹೋಗಿ ಮೃತಪಟ್ಟಿದ್ದರು. ಇಂದು ಹುಸೇನಸಾಬ್ ಅವರ ಮನೆಗೆ ತೆರಳಿ, ಅವರ ಕುಟುಂಬಕ್ಕೆ ಸಾಂತ್ವನ ಹೇಳಿ, ಪರಿಹಾರದ ಆದೇಶದ ಪ್ರತಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಂತೋಷ್ ಲಾಡ್, ಜಿಲ್ಲೆಯಲ್ಲಿ ಭಾರಿ ಮಳೆಯಿಂದಾಗಿ ಇಲ್ಲಿಯವರೆಗೆ ಒಟ್ಟು ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಬೆಳೆ ನಷ್ಟದ ಬಗ್ಗೆ ಸರ್ವೇ ಮಾಡಬೇಕಾಗಿದೆ ಎಂದು ತಿಳಿಸಿದರು. ಅಲ್ಲದೆ ಸರ್ವೇ ಮುಗಿದ ನಂತರ, ಅದನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.ಜೂನ್ 12 ರಂದು, ಹುಬ್ಬಳ್ಳಿಯ ಹೊರವಲಯದ ಮಾವನೂರು ರಸ್ತೆಯ ಬಳಿಯ ತಗ್ಗು ಪ್ರದೇಶದಲ್ಲಿ ಬುಧವಾರ ರಾತ್ರಿ ಸುರಿದ ಭಾರೀ ಮಳೆ ಮತ್ತು ಬಲವಾದ ಗಾಳಿಯ ನಂತರ, ಹುಸೇನಸಾಬ್ ನೀರಿನಲ್ಲಿ ಕೊಚ್ಚಿಹೋಗಿ ಸಾವನ್ನಪ್ಪಿದ್ದಾರೆ. ಇನ್ನು ಹೆಚ್ಚಿನ ಮಳೆಯಾದಗ ಬೆಣ್ಣೆಹಳ್ಳದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತದೆ. ಪ್ರತಿ ಬಾರಿ ಕೂಡಾ ಸಾವಿರಾರು ಎಕರೆಯಲ್ಲಿ ಬೆಳದಿದ್ದ ಬೆಳೆ ಹಾಳಾಗಿ ಹೋಗುತ್ತದೆ. ಹೀಗಾಗಿ ಬೆಣ್ಣೆಹಳ್ಳದಲ್ಲಿ ಉಂಟಾಗುತ್ತಿರುವ ಪ್ರವಾಹಕ್ಕೆ ಶಾಶ್ವತ ಪರಿಹಾರ ಕಲ್ಪಿಸುವುದರ ಜೊತೆಗೆ, ಬೆಳೆಹಾನಿಯಾದ ರೈತರಿಗೆ ಪರಿಹಾರ ಕೊಡಿಸುವ ಕೆಲಸ ಕೂಡಾ ಆಗಬೇಕಿದೆ ಎಂದು ಸಚಿವರು ಹೇಳಿದ್ದಾರೆ.

## ಜಾತಿಗಣತಿ ಬಗ್ಗೆ ಸ್ಪಷ್ಟ ನಿಲುವು ಕೈಗೊಳ್ಳಿ: ವಿಜಯೇಂದ್ರ ಒತ್ತಾಯ



**ಬೆಂಗಳೂರು, ಜೂ.14:** ರಾಜ್ಯ ಸರ್ಕಾರಕ್ಕೆ ಜಾತಿ ಜನಗಣತಿ ವಿಷಯವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವ ಉದ್ದೇಶವಿಲ್ಲ ಎಂದು ಬಿಜೆಪಿ ಆರೋಪಿಸಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮೊದಲು, ರಾಜ್ಯ ಸರ್ಕಾರ ಜಾತಿ ಜನಗಣತಿ ವಿಷಯದ ಬಗ್ಗೆ ಸ್ಪಷ್ಟ ನಿಲುವು ತೆಗೆದುಕೊಳ್ಳಲಿ ಎಂದು ಆಗ್ರಹಿಸಿದರು.

ಹೈಕಮಾಂಡ್‌ನ ಸೂಚನೆಗಳನ್ನು ಅನುಸರಿಸಿ ರಾಜ್ಯ ಸರ್ಕಾರ ಹೊಸ ಜಾತಿ ಜನಗಣತಿ ಸಮೀಕ್ಷೆಯನ್ನು ಘೋಷಿಸಿದೆ. ಈಗಾಗಲೇ ಜನಗಣತಿ ಮತ್ತು ಜಾತಿ ಜನಗಣತಿ ಎರಡಕ್ಕೂ ಕೇಂದ್ರ ಸರ್ಕಾರ ಯೋಜನೆಗಳನ್ನು ಘೋಷಿಸಿದೆ. ಜಾತಿ ಜನಗಣತಿ ನಡೆಸುವುದು ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುತ್ತದೆಯೇ ಎಂಬ ಬಗ್ಗೆ ಗೊಂದಲವಿದೆ ಎಂದು ಕಳವಳ ವ್ಯಕ್ತಪಡಿಸಿದರು.

ನಮ್ಮ ಹೋರಾಟಗಳ ಪರಿಣಾಮವಾಗಿ ಸುಮಾರು 3 ತಿಂಗಳ ಹಿಂದೆ ರಾಜ್ಯ ಸರಕಾರಕ್ಕೆ ಮುಜುಗರ ಆಗುತ್ತಿತ್ತು. ಆ ಸಂದರ್ಭದಲ್ಲಿ ಸಿದ್ದರಾಮಯ್ಯ ಕಾಂತರಾಜು ವರದಿಯನ್ನು ಅನುಷ್ಠಾನಕ್ಕೆ ತರುವುದಾಗಿ ಹೇಳಿದ್ದರು. ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಮಂಡಿಸುವುದಾಗಿ ಹೇಳಿದರು. 4–5 ಕ್ಯಾಬಿನೆಟ್ ಸಭೆ ಆದರೂ ಅನುಷ್ಠಾನ ಆಗಲಿಲ್ಲ. 10 ವರ್ಷ ಕಳೆದಿದ್ದು, ಅಂಕಿಅಂಶಗಳು ಅವೈಜ್ಞಾನಿಕ. ಇದನ್ನು ತರಾತುರಿಯಲ್ಲಿ ಮಾಡಬಾರದು. ಹೊಸದಾಗಿ ಮಾಡಬೇಕಿದೆ ಎಂದು ಹೇಳಿದರು. ತಾವೇ ಘೋಷಣೆ ಮಾಡಿಕೊಂಡಿರುವ ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಪರದಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಪರಿಸ್ಥಿತಿ ನೋಡಿದರೆ, ತಮಗೆ ಕನಿಕರ ಬರುತ್ತದೆ. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸದೆ ಕೈ ಕೈ ಹಿಸುಕಿಕೊಳ್ಳುತ್ತಿರುವ ಸಿದ್ದರಾಮಯ್ಯನವರ ಪರಿಸ್ಥಿತಿ ಪಾಪ, ಯಾರಿಗೂ ಬರಬಾರದು. ತಮ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಕೇಂದ್ರದ ಮೇಲೆ ಗೂಬೆ ಕೂರಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

ಮುಖ್ಯಮಂತ್ರಿಗಳು ದೆಹಲಿಯಲ್ಲಿ ಕುಳಿತು ಕೇಂದ್ರದ ಮೇಲೆ ಗೂಬೆ ಕೂರಿಸುವ ಪ್ರಯತ್ನ, ಕುತಂತ್ರ ಮತ್ತು ಷಡ್ಯಂತ್ರ ಮಾಡಿದ್ದಾರೆ. ಬಹಳ ದೊಡ್ಡ ಮನಸ್ಸು ಮಾಡಿ, 16ನೇ ಹಣಕಾಸಿನ ಆಯೋಗದ ಸಭೆಯಲ್ಲಿ ಭಾಗವಹಿಸಿದ್ದಾರೆ. ರಾಜ್ಯದ ಪರವಾಗಿ ವಿಚಾರಮಂಡನೆ ಮಾಡಿದ್ದು, ಅವರಿಗೆ ಅಭಿನಂದನೆಗಳು. ಕೇಂದ್ರದ ಸಭೆಯಲ್ಲಿ ಭಾಗವಹಿಸಲು ಮುಖ್ಯಮಂತ್ರಿಗಳಿಗೆ ಮುಜುಗರವೇ, ಇವರು ರಾಜ್ಯದ ಮುಖ್ಯಮಂತ್ರಿಯೇ ಅಥವಾ ಕಾಂಗ್ರೆಸ್ಸಿನ ಮುಖ್ಯಮಂತ್ರಿಗಳೇ ಎಂದು ಬಿಜೆಪಿ ಕೇಳಿತ್ತು. ಹಣಕಾಸಿನ ಆಯೋಗದ ಸಭೆಯಲ್ಲಿ ಭಾಗವಹಿಸಿ ಹಣಕಾಸಿನ ವಿಚಾರ ಪ್ರಸ್ತಾಪ ಮಾಡಿ ಸರಿಪಡಿಸಿ ಎಂದು ಒತ್ತಾಯಿಸಿದರು.

ದೆಹಲಿ ಸಭೆಯಲ್ಲಿ ಭಾಗವಹಿಸಿದ್ದು ಸ್ವಾಗತಾರ್ಹ. ಆದರೆ, ಮುಖ್ಯಮಂತ್ರಿಗಳನ್ನು ನೋಡಿದರೆ ಪಾಪ ಅನಿಸುತ್ತದೆ. ಗ್ಯಾರಂಟಿಗಳ ಅನುಷ್ಠಾನಕ್ಕೆ ಹಣ ಕ್ರೋಡೀಕರಿಸಲು ಸಾಧ್ಯವಾಗುತ್ತಿಲ್ಲ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳೇ ನಡೆಯುತ್ತಿಲ್ಲ. ಹಾಗಾಗಿ ಕೇಂದ್ರದ ಮೇಲೆ ಆರೋಪ ಮಾಡುತ್ತಿದ್ದಾರೆ. ಕರ್ನಾಟಕವು 100 ರೂ. ಕೊಟ್ಟರೆ ಕೇವಲ 13

# ಹಣಕಾಸು ಕಂಪನಿ ಟೈಗರ್ ಕ್ಯಾಪಿಟಲ್ ವತಿಯಿಂದ ಟ್ರ್ಯಾಕ್ಟರ್ ಸಾಲ ಸೌಲಭ್ಯ ಕಿಸಾನ್ ಎಕ್ಸ್‌ಪ್ರೆಸ್ ಪ್ರಕಟ

**ವಿಜಯಪುರ, ಜೂ.14:** ಗ್ರಾಮೀಣ ಮತ್ತು ಅರೆನಗರ ಪ್ರದೇಶಗಳಿಗೆ ಆದ್ಯತೆ ನೀಡಿರುವ ಹಣಕಾಸು ಕಂಪನಿ ಟೈಗರ್ ಕ್ಯಾಪಿಟಲ್ ಆವಿಷ್ಕಾರಕ, ಕೃಷಿಕ–ಸ್ನೇಹಿ ಟ್ರ್ಯಾಕ್ಟರ್ ಫೈನಾನ್ಸ್ ಉತ್ಪನ್ನ ಕಿಸಾನ್ ಎಕ್ಸ್‌ಪ್ರೆಸ್‌ನ್ನು ಪ್ರಕಟಿಸಿದ್ದು ರೈತರಿಗೆ ಸಾಲ ಪೂರೈಸುತ್ತದೆ. ಕಿಸಾನ್ ಎಕ್ಸ್‌ಪ್ರೆಸ್ ಸಾಲಗಳನ್ನು ಶೇ.100 ಡಿಜಿಟಲಿ ಸಂಸ್ಕರಿಸಲಾಗುತ್ತದೆ ಮತ್ತು ಕರ್ನಾಟಕದ 30 ಜಿಲ್ಲೆ ಹಾಗೂ 200ಕ್ಕೂ ಹೆಚ್ಚು ತಾಲೂಕುಗಳಲ್ಲಿ ಪೂರೈಸಲಾಗುತ್ತದೆ.

ಕಿಸಾನ್ ಎಕ್ಸ್‌ಪ್ರೆಸ್ ಸ್ಥಳದಲ್ಲಿಯೇ ವಾಹನ ಮೌಲ್ಯಮಾಪನ, ಬಯೋಮೆಟ್ರಿಕ್ ದೃಢೀಕರಣ ಮತ್ತು ಡಿಜಿಟಲ್ ಕೆವೈಸಿ ಮಾಡುವ ಮೂಲಕ ಅದೇ ದಿನ ಸಾಲ ವಿತರಿಸುತ್ತದೆ. ಕಿಸಾನ್ ಎಕ್ಸ್‌ಪ್ರೆಸ್ ಅರ್ಜಿಯನ್ನು ಕೇವಲ 4 ನಿಮಿಷಗಳಲ್ಲಿ ಅನುಮೋದಿಸಲಾಗುತ್ತದೆ ಮತ್ತು 4 ಗಂಟೆಗಳ ಒಳಗೆ ವಿತರಿಸುವ ಮೂಲಕ ಗ್ರಾಮೀಣ ಸಾಲ ಪೂರೈಕೆಯನ್ನು ಮರು ವ್ಯಾಖ್ಯಾನಿಸಲಾಗಿದೆ.

40ಕ್ಕೂ ಹೆಚ್ಚು ಶಾಖೆಗಳು, 175 ಫೀಲ್ಡ್ ಏಜೆಂಟರೊಂದಿಗೆ ದಕ್ಷ ತಂತ್ರಜ್ಞಾನದ ಅಳವಡಿಕೆಯ ಸದೃಢ ಜಾಲವು ವಿಮಾ ಮಾಹಿತಿಯನ್ನೂ ಡಿಜಿಟಲಿ ಸೃಷ್ಟಿಸುತ್ತದೆ. ಟೈಗರ್ ಕ್ಯಾಪಿಟಲ್ ಕರ್ನಾಟಕದಾದ್ಯಂತ ಗ್ರಾಹಕರಿಗೆ ಮನೆಬಾಗಿಲಿಗೆ ಸೇವೆಗಳನ್ನು ಒದಗಿಸುತ್ತದೆ. ಟೈಗರ್ ಕ್ಯಾಪಿಟಲ್ ಈಗಾಗಲೇ ರಾಜ್ಯದಲ್ಲಿ 42,000 ರೈತರಿಗೆ ಸಬಲೀಕರಿಸಿದೆ.


ವಿಜಯನಗರ ಜಿಲ್ಲೆಯ ರೈತ ಲೋಕನಾಯಕ್.ಎಚ್ ಇಲುವರಿಗೆ ಮುನ್ನ ನನಗೆ ಟ್ರ್ಯಾಕ್ಟರ್ ಅಗತ್ಯವಿತ್ತು, ಆದರೆ ಬ್ಯಾಂಕುಗಳು ಬಹಳ ಹೆಚ್ಚು ಸಮಯ ತೆಗೆದುಕೊಳ್ಳುತ್ತಿದ್ದವು. ಟೈಗರ್ ಕ್ಯಾಪಿಟಲ್ ನನಗೆ ಕೆಲವೇ ಗಂಟೆಗಳಲ್ಲಿ ನನ್ನ ಜಮೀನಿನಲ್ಲಿಯೇ ಸಾಲ ನೀಡಿತು. ನಾನು ಹಳ್ಳಿ ಬಿಟ್ಟು ಕಾಗದಪತ್ರಗಳೊಂದಿಗೆ ಸುತ್ತಾಡುವ ಅಗತ್ಯವಿರಲಿಲ್ಲ. ಯಾರೋ ಒಬ್ಬರು ರೈತರಿಗೆ ನಿಜಕ್ಕೂ ಏನು ಅಗತ್ಯ ಎಂದು ಅಂತಿಮವಾಗಿ ಅರ್ಥ ಮಾಡಿಕೊಂಡಂತೆ ಭಾಸವಾಯಿತು ಎಂದರು.

ಟೈಗರ್ ಕ್ಯಾಪಿಟಲ್‌ನಲ್ಲಿ ನಾವು ಸದೃಢ ವಿಸ್ತರಿಸಬಲ್ಲ ಮಾತ್ರವಲ್ಲದೆ ವೇಗ ಹಾಗೂ ದಕ್ಷತೆಯ ರೈತರ ಅಗತ್ಯಗಳಿಗೆ ಸಹಾನುಭೂತಿಯ ಸಾಲದ ಮಾದರಿಯನ್ನು ನಿರ್ಮಿಸಲು ಗಮನ ಹರಿಸಿದ್ದೆವು. ನಮ್ಮ ತಂತ್ರಜ್ಞಾನ–ಪ್ರೇರಿತ ವಿಧಾನವು ನಮಗೆ ವೇಗದೊಂದಿಗೆ ಸೂಕ್ಷ್ಮತೆಯನ್ನು ಸಂಯೋಜಿಸಲು ಅವಕಾಶ ಕ್ಪಿಸಿದ್ದು ರೈತರಿಗೆ ಸಕಾಲಿಕ ಸಾಲದ ಲಭ್ಯತೆ ದೊರೆಯುವಲ್ಲಿ ಮತ್ತು ಈ ಪ್ರಕ್ರಿಯೆಯಲ್ಲಿ ಅವರ ಘನತೆ ಕಾಪಾಡುವಲ್ಲಿ ಅವಕಾಶ ಕಲ್ಪಿಸಿದೆ. ಹಣಕಾಸು ಪೂರೈಸಿದ ಪ್ರತಿ ಟ್ರ್ಯಾಕ್ಟರ್‌ನಿಂದ ನಾವು ಉತ್ಪಾದಕತೆ ಹೆಚ್ಚಿಸುತ್ತಿರುವುದು ಮಾತ್ರವಲ್ಲದೆ ಸದೃಢ, ಸ್ವಾವಲಂಬಿ ಗ್ರಾಮೀಣ ಸಮುದಾಯಗಳನ್ನು ನಿರ್ಮಿಸುತ್ತಿದ್ದೇವೆ ಎಂದು ಟೈಗರ್ ಕ್ಯಾಪಿಟಲ್ ಎಂ.ಡಿ. ಮತ್ತು ಸಿಇಒ ಗೌರವ್ ಗುಪ್ತಾ ಹೇಳಿದರು.

ಟೈಗರ್ ಕರ್ನಾಟಕದಾದ್ಯಂತ ತನ್ನ ಹೆಜ್ಜೆ ಗುರುತನ್ನು ವಿಸ್ತರಿಸುವುದನ್ನು ಮುಂದುವರಿಸುತ್ತಿದ್ದಂತೆ ರೈತರ ಸಬಲೀಕರಣಕ್ಕೆ ಆದ್ಯತೆ ಸ್ಪಷ್ಟವಾಗಿದ್ದು ಹಣಕಾಸು ಪೂರೈಕೆ ಸರಣೀಲರಿಸುವ ಮತ್ತು ಅತ್ಯಂತ ಅಗತ್ಯವಿರುವಲ್ಲಿ ಬೆಂಬಲಿಸುವ ಕೆಲಸ ಮಾಡುತ್ತಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಗಾಜಾ ನಿರ್ಣಯ: ಸಭೆಗೆ ಭಾರತ ಗೈರುಹಾಜರು




**ವಿಶ್ವಸಂಸ್ಥೆ, ಜೂ.14:** ಗಾಜಾ ಪಟ್ಟಿಯಲ್ಲಿ 'ತಕ್ಷಣದ, ಷರತ್ತಿಲ್ಲದ ಮತ್ತು ಶಾಶ್ವತ' ಕದನ ವಿರಾಮಕ್ಕೆ ಸಂಬಂಧಿಸಿದಂತೆ ಕರಡು ನಿರ್ಣಯ ಅಂಗೀಕರಿಸಲು ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ನಡೆದ ಮತದಾನ ಪ್ರಕ್ರಿಯೆಗೆ ಭಾರತ ಗೈರುಹಾಜರಾಗಿದೆ. ಗಾಜಾಪಟ್ಟಿಯಲ್ಲಿ ಶಾಶ್ವತ ಕದನ ವಿರಾಮ ಘೋಷಿಸಿ, ಹಮಾಸ್, ಮತ್ತಿತರರ ಸಂಘಟನೆಗಳು ಒತ್ತೆಯಾಳುಗಳನ್ನಾಗಿ ಇಟ್ಟುಕೊಂಡಿರುವವರನ್ನು ಷರತ್ತುಗಳಿಲ್ಲದೆ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿ ಸ್ಪೇನ್ ಮಂಡಿಸಿದ ಈ ನಿರ್ಣಯಕ್ಕೆ 193 ಸದಸ್ಯ ರಾಷ್ಟ್ರಗಳು ಸದಸ್ಯರಾಗಿರುವ ವಿಶ್ವ ಸಂಸ್ಥೆಯ ಮಹಾಸಭೆಯಲ್ಲಿ ಅಭೂತಪೂರ್ವ ಬೆಂಬಲ ಲಭಿಸಿತು.

ಭಾರತ ಸೇರಿ 19 ರಾಷ್ಟ್ರಗಳು ಮತದಾನ ಪ್ರಕ್ರಿಯೆಯಿಂದ ಹೊರಗುಳಿದಿದ್ದವು. 12 ರಾಷ್ಟ್ರಗಳು ನಿರ್ಣಯಕ್ಕೆ ವಿರುದ್ಧವಾಗಿ, 149 ರಾಷ್ಟ್ರಗಳು ನಿರ್ಣಯದ ಪರವಾಗಿ ಮತ ಚಲಾಯಿಸಿದವು. ಗೈರುಹಾಜರಾದ ದೇಶಗಳಲ್ಲಿ ಭಾರತ, ಆಲ್ಬೇನಿಯಾ, ಈಕ್ವೆಡಾರ್, ಇಥಿಯೋಪಿಯಾ, ಮಾಲಾವಿ, ಪನಾಮಾ, ದಕ್ಷಿಣ ಸುಡಾನ್, ಟೋಗೋ ಸೇರಿವೆ. 'ಗಾಜಾಪಟ್ಟಿಯಲ್ಲಿ ಮಾನವೀಯ ಪರಿಸ್ಥಿತಿ ಹದಗೆಡುತ್ತಿರುವ ಕಾರಣದಿಂದ ಈ ನಿರ್ಣಯ ಅಂಗೀಕರಿಸಲಾಗಿದೆ' ಎಂದು ವಿಶ್ವ ಸಂಸ್ಥೆಯಲ್ಲಿನ ಭಾರತದ ಶಾಶ್ವತ ರಾಯಭಾರ ಪ್ರತಿನಿಧಿ ಪರ್ವತನೇನಿ ಹರೀಶ್ ತಿಳಿಸಿದ್ದಾರೆ. 'ಗಾಜಾ ಪಟ್ಟಿಯಲ್ಲಿನ ಮಾನವೀಯ ಬಿಕ್ಕಟ್ಟು ಮತ್ತು ನಾಗರಿಕರ ಜೀವಹಾನಿಯ ಕುರಿತು ಭಾರತ ಅತೀವ ಕಳವಳ ಹೊಂದಿದೆ' ಎಂದು ಅವರು ಹೇಳಿದ್ದಾರೆ. 'ಇಸ್ರೇಲ್–ಪ್ಯಾಲೆಸ್ತೀನಿಯನ್ ವಿಷಯದಲ್ಲಿ ವಿಶ್ವಸಂಸ್ಥೆ ಕೈಗೊಂಡ ನಿರ್ಣಯದಿಂದಲೂ ಭಾರತ ದೂರ ಉಳಿದಿತ್ತು' ಎಂದು ಹರೀಶ್ ಹೇಳಿದ್ದಾರೆ

# ಗಾಜಾ ಸಂಘರ್ಷದಲ್ಲಿ ಭಾರತ ಒಂಟಿ: ಖರ್ಗೆ



**ಗಾಜಾ, ಜೂ.14:** ಇಸ್ರೇಲ್ ಆಕ್ರಮಿತ ಪ್ಯಾಲೆಸ್ತೀನ್‌ನ ಗಾಜಾದಲ್ಲಿ ಕದನ ವಿರಾಮಕ್ಕೆ ಕರೆ ನೀಡುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯದಿಂದ ಭಾರತ ಮತ್ತೆ ತಟಸ್ಥವಾಗಿದೆ. ಕಳೆದ ಮೂರು ವರ್ಷಗಳಲ್ಲಿ ಇದು ನಾಲ್ಕನೇ ಬಾರಿಗೆ ಭಾರತ ಮತದಾನದಿಂದ ತಟಸ್ಥವಾಗಿದೆ. ಮೋದಿ ನೇತೃತ್ವದ ಸರ್ಕಾರದ ಈ ನಿರ್ಧಾರದ ವಿರುದ್ಧ ಪ್ರತಿಪಕ್ಷ ಕಾಂಗ್ರೆಸ್ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಈ ಬಗ್ಗೆ ಶನಿವಾರ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಕಾಂಗ್ರೆಸ್‌ನ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಮ್ಮ ವಿದೇಶಾಂಗ ನೀತಿಯು ಈಗ ಹೆಚ್ಚು ಹೆಚ್ಚು ಶಿಥಿಲಗೊಂಡಿದೆ ಎಂಬುದು ಸ್ಪಷ್ಟವಾಗುತ್ತಿದೆ. ಬಹುಶಃ, ಪ್ರಧಾನಿ ಮೋದಿ ಈಗ ತಮ್ಮ ವಿದೇಶಾಂಗ ಸಚಿವರ ಪುನರಾವರ್ತಿತ ತಪ್ಪುಗಳನ್ನು ಪರಿಗಣಿಸಿ ಕೆಲವು ಹೊಣೆಗಾರಿಕೆಯನ್ನು ಹೊಂದಿಸಬೇಕು. ಎಂದು ಹೇಳಿದ್ದಾರೆ.

ಗಾಜಾದಲ್ಲಿ ಕದನ ವಿರಾಮಕ್ಕಾಗಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯಕ್ಕೆ 149 ದೇಶಗಳು ಮತ ಹಾಕಿದವು. ಮತದಾನದಿಂದ ದೂರವಿದ್ದ 19 ದೇಶಗಳಲ್ಲಿ ಭಾರತ ಕೂಡಾ ಒಂದಾಗಿದೆ. ಈ ಹೆಜ್ಜೆಯಿಂದ ನಾವು ವಾಸ್ತವಿಕವಾಗಿ ಒಂಟಿಯಾಗಿ ನಿಂತಿದ್ದೇವೆ. ಅಕ್ಟೋಬರ್ 8, 2023 ರಂದು, ಇಸ್ರೇಲ್ ಜನರ ಮೇಲೆ ಪ್ಯಾಲೆಸ್ತೀನಿ ಹೋರಾಟಗಾರರಾದ ಹಮಾಸ್ ನಡೆಸಿದ ಕ್ರೂರ ದಾಳಿಯನ್ನು ಕಾಂಗ್ರೆಸ್ ಖಂಡಿಸಿತ್ತು ಎಂದು ಹೇಳಿರುವ ಅವರು, ಗಾಜಾದ ದಿಗ್ಬಂಧನ ಮತ್ತು ಅದರ ಮೇಲಿನ ಬಾಂಬ್ ದಾಳಿಗಳನ್ನು ಒಳಗೊಂಡಂತೆ ವಿವೇಚನಾರಹಿತ ಕೃತ್ಯಗಳನ್ನು ನಾವು ನಿರಂತರವಾಗಿ ಖಂಡಿಸಿದ್ದೇವೆ ಎಂದು ಹೇಳಿದ್ದಾರೆ.

ದಾಳಿಯಲ್ಲಿ 60,000 ಜನರು ಸಾವನ್ನಪ್ಪಿದ್ದಾರೆ ಮತ್ತು ವ್ಯಾಪಕ ಮತ್ತು ಭಯಾನಕ ಮಾನವೀಯ ಬಿಕ್ಕಟ್ಟು ಇದೆ. ಮಧ್ಯಪ್ರಾಚ್ಯ ಮತ್ತು ಪಶ್ಚಿಮ ಏಷ್ಯಾದಲ್ಲಿ ಕದನ ವಿರಾಮ, ಶಾಂತಿ ಮತ್ತು ಮಾತುಕತೆಗಾಗಿ ಪ್ರತಿಪಾದಿಸುವ ಭಾರತದ ಈ ಹಿಂದಿನ ನಿಲುವನ್ನು ನಾವು ಕೈಬಿಟ್ಟಿದ್ದೇವೆಯೇ ಎಂದು ಮಲ್ಲಿಕಾರ್ಜುನ ಖರ್ಗೆ ಕೇಳಿದ್ದಾರೆ. ಭಾರತದ ಈ ನಿಲುವು ನಮ್ಮ ದೀರ್ಘಕಾಲದ ಅಲಿಪ್ತತೆ ಮತ್ತು ನೈತಿಕ ರಾಜತಾಂತ್ರಿಕತೆಯ ಸಂಪ್ರದಾಯದಲ್ಲಿ ತೀವ್ರವಾಗಿ ಬೇರೂರಿದೆ. ಅದರ ಮೂಲಕ ಭಾರತವು ಅಂತರರಾಷ್ಟ್ರೀಯ ಸಂಘರ್ಷಗಳಲ್ಲಿ ಯಾವಾಗಲೂ ನ್ಯಾಯ ಮತ್ತು ಶಾಂತಿಯನ್ನು ಪ್ರತಿಪಾದಿಸಿದೆ ಎಂದು ಹೇಳಿದ್ದಾರೆ.

ಅಕ್ಟೋಬರ್ 19, 2023 ರಂದು, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ತಕ್ಷಣದ ಕದನ ವಿರಾಮಕ್ಕೆ ಮತ್ತು ಗಾಜಾದ ಸಂಕಷ್ಟಕ್ಕೊಳಗಾದ ಮತ್ತು ಹೊರದಬ್ಬಲ್ಪಟ್ಟ ಜನರಿಗೆ ಮಾನವೀಯ ನೆರವು ನೀಡುವಂತೆ ಕರೆ ನೀಡಿತ್ತು. ಈ ಪ್ರದೇಶವು ಭೀಕರ ಹಿಂಸೆ, ಮಾನವೀಯ ದುರಂತ ಮತ್ತು ಹೆಚ್ಚುತ್ತಿರುವ ಅಸ್ಥಿರತೆಯನ್ನು ಎದುರಿಸುತ್ತಿರುವಾಗ ಭಾರತ ಮೌನವಾಗಿ ಅಥವಾ ನಿಷ್ಕ್ರಿಯವಾಗಿ ನಿಲ್ಲಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ

# ಜನಸಂದಣಿ ನಿರ್ವಹಣೆ ಕಾನೂನು ಜಾರಿಗೆ ಕರಡು ಸಿದ್ಧ: ಎಚ್.ಕೆ.ಪಾಟೀಲ್



**ಕಲಬುರಗಿ, ಜೂ.14:** ಬೆಂಗಳೂರಿನಲ್ಲಿ ಸಂಭವಿಸಿದ ಕಾಲ್ತುಳಿತದ ಘಟನೆಯ ನಂತರ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದ್ದು, ಜನಸಂದಣಿ ನಿರ್ವಹಣೆ ಕಾನೂನು ಜಾರಿಗೆ ತರುವ ನಿಟ್ಟಿನಲ್ಲಿ ಕರಡು ಸಿದ್ಧಗೊಳಿಸಿದ್ದು ಶೀಘ್ರವೇ ಜಾರಿಗೊಳಿಸಲಾಗುವುದು ಎಂದು ರಾಜ್ಯ ಕಾನೂನು ಸಚಿವ ಎಚ್. ಕೆ.ಪಾಟೀಲ್ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವೆಡೆ ಜನಸಂದಣಿಯಿಂದಾಗಿ ಹಲವು ದುರಂತಗಳು ಉಂಟಾಗುತ್ತಿವೆ. ಈ ನಿಟ್ಟಿನಲ್ಲಿ ಜನಸಂದಣಿಯನ್ನು ನಿಯಂತ್ರಣ ಮಾಡುವುದು ಹಾಗೂ ಸಂಭಾವ್ಯ ಅಪಾಯಗಳನ್ನು ತಪ್ಪಿಸುವ ಸಲುವಾಗಿ ವಿಶೇಷವಾದ ಕಾನೂನು ಜಾರಿ ಮಾಡುವ ಮೂಲಕ ನಿಯಂತ್ರಣಕ್ಕೆ ತರುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಕರಡು ಸಿದ್ಧ ಮಾಡಿದೆ. ಈ ನಿಟ್ಟಿನಲ್ಲಿ ಶೀಘ್ರವೇ ಸಚಿವ ಸಂಪುಟ ಸಭೆಯಲ್ಲಿ ಕರಡು ಇಡಲಾಗುವುದು. ಸಭೆ ಒಪ್ಪಿದರೆ ಶೀಘ್ರವೇ ಕಾನೂನು ಜಾರಿಯಾಗಲಿದೆ. ಬಳಿಕ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ಈ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮಾತುಕತೆ ಮಾಡಲಾಗಿದೆ ಎಂದರು.ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ವಿರೋಧಪಕ್ಷದ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆ ಕೇಳುವುದು ಸೂಕ್ತವಲ್ಲ. ಇದೊಂದು ಆಕಸ್ಮಿಕವಾಗಿ ನಡೆದ ಘಟನೆಯಾಗಿದ್ದು ಈ ನಿಟ್ಟಿನಲ್ಲಿ ಈಗಾಗಲೇ ತನಿಖೆ ಆರಂಭವಾಗಿದೆ. ತಪ್ಪಿತಸ್ಥರಿಗೆ ಯಾವುದೇ ಕಾರಣಕ್ಕೂ ಶಿಕ್ಷೆಯಿಂದ ಬಚಾವ್ ಮಾಡುವ ಪ್ರಯತ್ನ ನಡೆದಿಲ್ಲ ಎಂದರು.

# ಸಮಿತಿ ವರದಿಯ ಆಧಾರದಲ್ಲಿ ವಿಶೇಷ ಪ್ಯಾಕೇಜ್: ಸಿದ್ದರಾಮಯ್ಯ



**ಯಾದಗಿರಿ,ಜೂ.14:** ರಾಜ್ಯದಲ್ಲಿನ ಅಭಿವೃದ್ಧಿ ಸೂಚ್ಯಂಕ ನಿಖರವಾಗಿ ತಿಳಿಯುವ ನಿಟ್ಟಿನಲ್ಲಿ ಆರ್ಥಿಕ ತಜ್ಞ ಪ್ರೊ.ಗೋವಿಂದರಾವ್ ನೇತೃತ್ವದಲ್ಲಿ ರಚಿಸಲಾಗಿರುವ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ವರದಿ ಆಧಾರದ ಮತ್ತೆ ವಿಶೇಷ ಪ್ಯಾಕೇಜ್ ನೀಡಿ ಸಮಗ್ರ ಕರ್ನಾಟಕ ಅಭಿವೃದ್ಧಿಯೊಂದಿಗೆ ಮುನ್ನೆಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಯಾದಗಿರಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್ ಡಿಬಿ) ಸಹಯೋಗದ ಆರೋಗ್ಯ ಆವಿಷ್ಕಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರೊ.ಗೋವಿಂದರಾವ್ ಸಮಿತಿ ಮೂರು ತಿಂಗಳೊಳಗೆ ವರದಿ ನೀಡುವ ಸಾಧ್ಯತೆಗಳಿವೆ. ಈ ವರದಿ ರಾಜ್ಯದಲ್ಲಿ ಯಾವ ತಾಲೂಕು ಯಾವ ನಿಟ್ಟಿನಲ್ಲಿ ಅಭಿವೃದ್ಧಿಯಾಗಿದೆ ಎಂಬುದು ಅಂಕಿ–ಅಂಶಗಳ ಸಮೇತ ಗೊತ್ತಾಗಲಿದೆ. ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ವರದಿ ಆಧಾರದ ಮೇಲೆ ಮತ್ತೆ ವಿಶೇಷ ಪ್ಯಾಕೇಜ್ ನೀಡಲಾಗುವುದು. ವಿಶೇಷ ಪ್ಯಾಕೇಜ್ ರಾಜ್ಯದ ಮುಂದುವರೆದ ಭಾಗದ ಜತೆ ತೆಗೆದುಕೊಂಡು ಹೋಗಲು ಪೂರಕವಾಗುತ್ತದೆ. ನಂತರ ಸಮಗ್ರ ಕರ್ನಾಟಕ ಪರಿಕಲ್ಪನೆ ದೃಢಗೊಳ್ಳುತ್ತದೆ ಎಂದು ಹೇಳಿದರು.ಪ್ರೊ.ಡಿ.ಎಂ ನಂಜುಂಡಪ್ಪ ನೇತೃತ್ವದ ಪ್ರಾದೇಶಿಕ ಅಸಮತೋಲನ ನಿವಾರಣಾ ವರದಿಗೆ ಈಗ ಇಪ್ಪತ್ತೈದು ವಸಂತಗಳು ಸಂದಿವೆ. ಅವರ ವರದಿ ಆಧಾರದ ಮೇಲೆ ಎಂಟು ವರ್ಷಗಳ ಕಾಲ ಪ್ರತಿವರ್ಷ 2 ಸಾವಿರ ಕೋ.ರೂ ಖರ್ಚು ಮಾಡಲು ಉದ್ದೇಶಿಸಿ ಅಭಿವೃದ್ಧಿ ಮಾಡಲಾಗಿದೆಯಾದರೂ ಈಗ ಹಿಂದಿನ ಸಮಯಕ್ಕಿಂತ ಈಗ ಯಾವ ಪ್ರಮಾಣದಲ್ಲಿ ಅಭಿವೃದ್ಧಿಯಾಗಿದೆ ಎಂದು ವರದಿಯಿಂದ ಗೊತ್ತಾಗಲಿದೆ. ವರದಿ ಆಧಾರದ ಹಿಂದುಳಿದ ತಾಲೂಕುಗಳ ಸಮಗ್ರ ಅಭಿವೃದ್ಧಿ ಗೆ ವಿಶೇಷ ಪ್ಯಾಕೇಜ್ ನೀಡಲಾಗುವುದು ಸಿಎಂ ಸಿದ್ದರಾಮಯ್ಯ ವಿವರಣೆ ನೀಡಿದರು.

## ಜನಸಂಖ್ಯೆ ಆಧಾರದಲ್ಲಿ ಆರೋಗ್ಯ ಆವಿಷ್ಕಾರ ಯೋಜನೆ

**ಯಾದಗಿರಿ:** ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಭಾಗಕ್ಕೆ ವಿಶೇಷ ಕಾಳಜಿ ನೀಡಬೇಕೆಂದು ತಿರ್ಮಾನಿಸಿ, ಅದರಂತೆ ಆರೋಗ್ಯ ಇಲಾಖೆಯಿಂದ ವೈಜ್ಞಾನಿಕವಾಗಿ ಬೇಡಿಕೆಯಾಧಾರ ಅವಶ್ಯಕತೆ, ಜನಸಂಖ್ಯೆ ಆಧಾರದಲ್ಲಿ ಆರೋಗ್ಯ ಆವಿಷ್ಕಾರ ಯೋಜನೆ ರೂಪಿಸಿ 800 ಕೋಟಿಯ ಪ್ರಸ್ತಾವನೆಯನ್ನು ಸಂಪುಟಕ್ಕೆ ಸಲ್ಲಿಸಲಾಯಿತು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಯಾದಗಿರಿಯಲ್ಲಿ ಶನಿವಾರ (ಜೂ.14) ಆರೋಗ್ಯ ಆವಿಷ್ಕಾರ ಯೋಜನೆ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ಆರೋಗ್ಯ ಕ್ಷೇತ್ರದ ಅಭಿವೃದ್ಧಿ ಕಾಣುವ ದೃಷ್ಟಿಯಿಂದ ಉಳಿದ ಅನುದಾನದಲ್ಲಿ ಮುಂದಿನ ದಿನದಲ್ಲಿ ಕಾಮಗಾರಿ ಚಾಲನೆ ನೀಡಲಾಗುತ್ತಿದೆ. ಆರೋಗ್ಯ–ಶಿಕ್ಷಣ ಕ್ಷೇತ್ರ ಬಹು ಮುಖ್ಯವಾದ ಕ್ಷೇತ್ರಗಳಾಗಿದ್ದು, ಇವುಗಳ ಮೇಲೆ ನಮ್ಮ ಸರ್ಕಾರ ನಿರಂತರ ಅಭಿವೃದ್ಧಿ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲಾಗಿದೆ ಎಂದರು.ವಿರೋಧ ಪಕ್ಷದವರು ತಾವು ಅಧಿಕಾರದಲ್ಲಿದ್ದಾಗ ಕೆಲಸ ಮಾಡದೆ, ಈಗ ನಮ್ಮ ಕೆಲಸದ ಬಗ್ಗೆ ಟೀಕಿಸುತ್ತಿದ್ದಾರೆ. ಅವರು ಟೀಕಿಸುತ್ತಾ ಕೂರಲಿ, ನಾವು ನಮ್ಮ ಅನುದಾನದ ಬಿಡುಗಡೆಗೊಳಿಸಿ ಅಭಿವೃದ್ಧಿ ಕಾಮಗಾರಿ ಕೈಗೊಂಡಿದ್ದೇವೆ ಎಂದು ಹೇಳಿದರು. ಆರೋಗ್ಯ ಆವಿಷ್ಕಾರದ ಅನುಷ್ಠಾನದಲ್ಲಿ ಪಕ್ಷಪಾತ ಮಾಡದೆ, ರಾಜಕೀಯ ಕಾರಣ ಇಟ್ಟುಕೊಂಡು ಅಥವಾ ಸ್ವಹಿತಾಸಕ್ತಿಯಿಂದ ಮಾಡದೆ ಅತ್ಯಂತ ಪಾರದರ್ಶಕತೆ ಹಾಗೂ ಅವಶ್ಯಕತೆ ತಕ್ಕಂತೆ ವೈಜ್ಞಾನಿಕವಾಗಿ ಈ ಯೋಜನೆ ರೂಪಿಸಲಾಗಿದೆ ಎಂದರು.

# ಗಗನಯಾತ್ರಿ ಶುಭಾಂಶು ಶುಕ್ಲಾ ಜೂ.19ರಂದು ಬಾಹ್ಯಾಕಾಶಕ್ಕೆ



**ಬೆಂಗಳೂರು, ಜೂ.14;** ಅಮೆರಿಕ ಮೂಲದ ಆಕ್ಸಿಯಮ್ ಸ್ಪೇಸ್ ಇದೇ 19 ರಂದು ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರನ್ನು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಕರೆದೊಯ್ಯಲು ಸಜ್ಜಾಗಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ಸ್ಪಷ್ಟಪಡಿಸಿದೆ.

ಜೂನ್ 11 ರಂದು ಉಡಾವಣೆಯಾಗಬೇಕಿದ್ದ ಶುಕ್ಲಾ ಬಾಹ್ಯಾಕಾಶ ಯಾನವನ್ನು ಹಲವು ಬಾರಿ ಮುಂದೂಡಲಾಗಿತ್ತು, ಆದರೆ ಐಎಸ್‌ಎಸ್ ನ ಜ್ವೆಜ್ಡಾ ಮಾಡ್ಯೂಲ್ಗೆ ಸಂಬಂಧಿಸಿದ ತಾಂತ್ರಿಕ ಸಮಸ್ಯೆಗಳಿಂದಾಗಿ 2 ಬಾರಿ ಮುಂದೂಡಲಾಗಿತ್ತು.

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಜ್ವೆಜ್ಡಾ ಸೇವಾ ಮಾಡ್ಯೂಲ್‌ನಲ್ಲಿನ ಒತ್ತಡದ ಅಸಂಗತತೆಯನ್ನು ನಿರ್ಣಯಿಸಲು ಆಕ್ಸಿಯಮ್ ಸ್ಪೇಸ್ ನಾಸಾದೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಇಸ್ರೋ ತಿಳಿಸಿದೆ.

"ಇಸ್ರೋ, ಆಕ್ಸಿಯಮ್ ಸ್ಪೇಸ್ ಮತ್ತು ಸ್ಪೇಸ್‌ಎಕ್ಸ್ ನಡುವಿನ ಅನುಸರಣಾ ಸಮನ್ವಯ ಸಭೆಯಲ್ಲಿ, ಫಾಲ್ಕನ್ 9 ಉಡಾವಣಾ ವಾಹನದಲ್ಲಿ ಕಂಡುಬರುವ ದ್ರವ ಆಮ್ಲಜನಕ ಸೋರಿಕೆಯನ್ನು ಯಶಸ್ವಿಯಾಗಿ ಪರಿಹರಿಸಲಾಗಿದೆ ಎಂದು ಇಸ್ರೋ ದೃಢಪಡಿಸಿದೆ" ಎಂದು ತನ್ನ ಹೇಳಿಕೆಯಲ್ಲಿ ತಿಳಿಸಿದೆ.

# ಕೈಗಾರಿಕೆಯಲ್ಲಿ ಸಾಕಷ್ಟು ಬದಲಾವಣೆ: ಎಂ.ಬಿ.ಪಾಟೀಲ್



**ಬೆಂಗಳೂರು, ಜೂ.14:** ಕರ್ನಾಟಕ ಸರ್ಕಾರಕ್ಕೆ ಎರಡು ವರ್ಷ ಪೂರ್ಣವಾಗಿದೆ. ಈ ಅವಧಿಯಲ್ಲಿ ಕರ್ನಾಟಕ ಕೈಗಾರಿಕೆಯಲ್ಲಿ ಸಾಕಷ್ಟು ಬದಲಾವಣೆ ಆಗಿದೆ. ಸಾಕಷ್ಟು ಯೋಜನೆ, ಒಪ್ಪಂದ, ಹೂಡಿಕೆಗಳ ಆಕರ್ಷಣೆಗೆ ಶ್ರಮಿಸಿದೆ. ರಾಜ್ಯದಲ್ಲಿ 6,57,660 ಕೋಟಿ ಮೊತ್ತದ ಬಂಡವಾಳ ಹೂಡಿಕೆಗೆ 115 ಒಪ್ಪಂದ ಮಾಡಿಕೊಳ್ಳಲಾಗಿದೆ. ಇದರಿಂದ 2,32,771 ಲಕ್ಷ ಉದ್ಯೋಗ ಸೃಷ್ಟಿಯಾಗಲಿವೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕೈಗಾರಿಕೆ ಹಾಗೂ ಮೂಲಸೌಲಭ್ಯ ಇಲಾಖೆಗಳಲ್ಲಿನ 2 ವರ್ಷಗಳ ಸಾಧನೆ ಕುರಿತ ಪ್ರಗತಿ ಪಥದ ಮುಂದಣ ಹೆಜ್ಜೆ ಕೈಪಿಡಿ ಅನಾವರಣಗೊಳಿಸಿ ಅವರು ಮಾತನಾಡಿದರು. ರ್ನಾಟಕದ ಸಿದ್ಧಪಡಿಸಿರುವ ಹೊಸ ಕೈಗಾರಿಕಾ ನೀತಿ 2025–30–ಯು ರಾಜ್ಯದಲ್ಲಿ ಮುಂದಿನ 5 ವರ್ಷಗಳಲ್ಲಿ 7.50 ಲಕ್ಷ ಕೋಟಿ ಹೂಡಿಕೆ ಆಕರ್ಷಿಸಲಿದೆ. ಒಟ್ಟು 20 ಲಕ್ಷ ಜನರಿಗೆ ಉದ್ಯೋಗ ಸೃಷ್ಟಿ ನಿರೀಕ್ಷೆ ಇದೆ.'ದೇಶ ವಿದೇಶಗಳ ಪ್ರಮುಖ ಕೈಗಾರಿಕೆಗಳು, ಬಹುರಾಷ್ಟ್ರೀಯ ಕಂಪನಿಗಳು ಹಾಗೂ ಉದ್ಯಮ ದಿಗ್ಗಜರಿಂದ ಬಂಡವಾಳ ಹೂಡಿಕೆ ಆಕರ್ಷಿಸುವಲ್ಲಿ ರಾಜ್ಯವು ತನ್ನ ಮುಂಚೂಣಿ ಸ್ಥಾನ ಉಳಿಸಿಕೊಂಡಿದೆ.

ಫೆಬ್ರುವರಿಯಲ್ಲಿ ನಡೆದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ 'ಇನ್ವೆಸ್ಟ್ ಕರ್ನಾಟಕ'ದಲ್ಲಿ ಒಟ್ಟು 98 ಕಂಪನಿಗಳ ಜೊತೆಗೆ 6,23,970 ಕೋಟಿ ಹೂಡಿಕೆಯ ಒಪ್ಪಂದ ಮಾಡಿಕೊಳ್ಳಲಾಗಿದೆ. 4,03,533 ಕೋಟಿ ಹೂಡಿಕೆ ಮಾಡಲು 1,101 ಕಂಪನಿಗಳು ವಿವಿಧ ಸಮಿತಿಗಳಿಂದ ಅನುಮೋದನೆ ಪಡೆದಿವೆ. ಈ ಎಲ್ಲ ಯೋಜನೆಗಳಿಂದ ರಾಜ್ಯದಲ್ಲಿ 6 ಲಕ್ಷದಷ್ಟು ಉದ್ಯೋಗಗಳು ಸೃಷ್ಟಿಯಾಗುವ ನಿರೀಕ್ಷೆ ಎಂದು ವಿವರಿಸಿದರು.ಪ್ರಾದೇಶಿಕ ಸಮತೋಲನದ ಕೈಗಾರಿಕಾ ಅಭಿವೃದ್ಧಿ ಖಚಿತಪಡಿಸಿಕೊಳ್ಳಲು ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಇಲಾಖೆಯು ಕಳೆದ ಎರಡು ವರ್ಷಗಳಲ್ಲಿ ಕೈಗಾರಿಕ ಕ್ಷೇತ್ರದಲ್ಲಿ ಹಿಂದುಳಿದ ಜಿಲ್ಲೆಗಳು/ ತಾಲ್ಲೂಕುಗಳಲ್ಲಿ ಹೂಡಿಕೆ ಮಾಡಲು ಹೆಚ್ಚಿನ ಉತ್ತೇಜನೆಗಳನ್ನು ನೀಡುತ್ತಿದೆ. ಇದೇ ಕಾರಣಕ್ಕೆ ಉದ್ಯೋಗ ಸೃಷ್ಟಿಯಲ್ಲಿ ಶೇಕಡ 75ರಷ್ಟು ಬೆಂಗಳೂರಿನ ಆಚೆಗೆ ಹಾಗೂ ಶೇ 45 ರಷ್ಟು ಉತ್ತರ ಕರ್ನಾಟಕದ ಭಾಗದಲ್ಲಿ ಇರಲಿವೆ ಎಂದರು.



ಅಹಮದಾಬಾದ್‌ನಲ್ಲಿ ಶನಿವಾರ ಅಪಘಾತಕ್ಕೀಡಾದ ಏರ್ ಇಂಡಿಯಾ ವಿಮಾನದ ಬಾಲ ಸಿಲುಕಿಕೊಂಡ ಸ್ಥಳದಲ್ಲಿ ತನಿಖಾ ಸಂಸ್ಥೆ ತನಿಖೆ ನಡೆಸುತ್ತಿದೆ ಮತ್ತು ವೈದ್ಯಕೀಯ ತಂಡವು ಮೃತ ದೇಹಗಳನ್ನು ವಿಮಾನದ ಬಾಲದಿಂದ ಹೊರತೆಗೆದಿದೆ.

# ಹೆಸರಾಂತ ಸಾಹಿತಿ ರಾ.ಸಿ.ವಾಡೇದ ಅವರಿಗೆ ಉಳವೀಶ ಹುಲೆಪ್ಪನವರಮಠ ಮಕ್ಕಳ ಕಾವ್ಯಪ್ರಶಸ್ತಿ



**ವಿಜಯಪುರ,ಜೂ.14 :** ವಿಜಯಪುರಜಿಲ್ಲೆಯ ಸಿಂದಗಿಯ ರಾ.ಸಿ. ವಾಡೇದ ಸಾಹಿತ್ಯರಂಗದಲ್ಲಿತಮ್ಮನ್ನೆತಾವು ತೊಡಗಿಸಿಕೊಂಡು ಸಮಾಜಕ್ಕೆಉತ್ತಮ ಲೇಖನಗಳನ್ನು ನೀಡಿದ ಅವರಿಗೆ ಕವಿ ಉಳವೀಶ ಹುಲೆಪ್ಪನವರಮಠ ಸ್ಮಾರಕ ಪ್ರತಿಷ್ಠಾನದಿಂದ ಮಕ್ಕಳ ಕಾವ್ಯ ಪ್ರಶಸ್ತಿಯು ಮುಡಿಗೇರಿದೆ.

ಇದೇ 19 ರಂದು ಬೆಳಗಾವಿಯ ಚೆನ್ನಮ್ಮ ವೃತ್ತದ ಹತ್ತಿರದಕನ್ನಡ ಸಾಹಿತ್ಯ ಭವನದಲ್ಲಿಜರಗುವ ಕವಿ ಎಸ್.ಡಿ.ಇಂಚಲ ಮತ್ತು ಕವಿ ಉಳವೀಶ ಹುಲೆಪ್ಪನವರಮಠ ಸ್ಮಾರಕ ಪ್ರತಿಷ್ಠಾನವು ಸ್ಮಾರಕಉಪನ್ಯಾಸ ಹಾಗೂಕಾವ್ಯ ಪ್ರಶಸ್ತಿಪ್ರದಾನ ಸಮಾರಂಭದಲ್ಲಿ ಮಕ್ಕಳ ಕಾವ್ಯಪ್ರಶಸ್ತಿಯನ್ನು ಇವರ ?ಎತ್ತಿನ ಬಂಡಿ? ಕಾವ್ಯಕೃತಿಗೆ ಪ್ರಧಾನ ಮಾಡಲಾಗುವುದು ಹಾಗೂ ಎಸ್.ಡಿ.ಇಂಚಲ ಕಾವ್ಯ ಪ್ರಶಸ್ತಿಯನ್ನು ರನ್ನ ಬೆಳಗಲಿಯ ಸುರೇಶರಾಜಮಾನೆಅವರು ರಚಿಸಿದ ರಾಜಿಯಾಗದರಕ್ತದಕಣ ಎಂಬ ಕಾವ್ಯಕೃತಿಗೆ ಪ್ರದಾನ ಮಾಡಲಾಗುವುದುಎಂದು ಪ್ರತಿಷ್ಠಾನದ ಪ್ರಧಾನ ಕಾರ್ಯದರ್ಶಿ ಡಾ. ಮಹೇಶ ಗುರನಗೌಡರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕವಿ ಎಸ್.ಡಿ.ಇಂಚಲ ಮತ್ತು ಕವಿಉಳವೀಶ ಹುಲೆಪ್ಪನವರಮಠ ಸ್ಮಾರಕ ಪ್ರತಿಷ್ಠಾನವು ಸ್ಮಾರಕಉಪನ್ಯಾಸ ಹಾಗೂಕಾವ್ಯ ಪ್ರಶಸ್ತಿಪ್ರದಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ರಾಣಿಚೆನ್ನಮ್ಮ ವಿಶ್ವ ವಿದ್ಯಾಲಯದ ಉಪಕುಲಪತಿ ಪ್ರೊ. ಸಿ.ಎಂ.ತ್ಯಾಗರಾಜ ಅವರು ಭಾಗವಹಿಸಲಿದ್ದು, ಹಂಪಿ ಕನ್ನಡ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕಡಾ.ವೆಂಕಟಗಿರಿ ದಳವಾಯಿ ಅವರು ಸ್ಮಾರಕಉಪನ್ಯಾಸ ಮಾಡಲಿದ್ದು, ಅತಿಥಿಗಳಾಗಿ ಸಾಹಿತಿಗಳಾದ ಡಾ. ಸರಜೂಕಾಟ್ಕರ್, ಡಾ. ಬಸವರಾಜಜಗಜಂಪಿ ಅವರು ಭಾಗವಹಿಸಲಿದ್ದು, ಸಮಾರಂಭ ದಅಧ್ಯಕ್ಷತೆಯನ್ನುಎಸ್.ಡಿ.ಇಂಚಲ ಮತ್ತು ಕವಿ ಉಳವೀಶ ಹುಲೆಪ್ಪನವರಮಠ ಸ್ಮಾರಕ ಪ್ರತಿಷ್ಠಾನದ ಅಧ್ಯಕ್ಷೈಡಾ. ಗುರುದೇವಿ ಹುಲೆಪ್ಪ ನವರ ಮಠಅವರು ವಹಿಸಲಿದ್ದಾರೆ.

ಕವಿ ಉಳವೀಶರು ಬೈಲಹೊಂಗಲ ತಾಲೂಕಿನ ಹಿರೇನಂದಿ ಹಳ್ಳಿಯಲ್ಲಿ 1926 ನೇ ಮಾರ್ಚ 31 ರಂದು ವೀರಯ್ಯ ಮತ್ತು ವೀರಮ್ಮನವರ ಪುಣ್ಯಗರ್ಭದಿಂದ ಜನಿಸಿದರು. ಬಿ.ಎ ಬಿ.ಎಡ್ ಪದವೀಧರರಾಗಿ ಪ್ರಾಥಮಿಕ ಶಾಲೆಯ ಅಧ್ಯಾಪಕರಾಗಿ, ಶಾಲಾ ತಪಾಸಣಾಧಿಕಾರಿಯಾಗಿ ಆದರ್ಶ ಶಿಕ್ಷಕರೆಂದು ರಾಜ್ಯ ಹಾಗೂ ರಾಷ್ಟ್ರ ಪ್ರಶಸ್ತಿ ಪಡೆದ ಹೆಮ್ಮೆ ಅವರದು. ನಾಡಿನ ಧೀಮಂತಕವಿಯಾಗಿದ್ದ ಉಳುವೀಶರು ಜೀವನಜೋಕಾಲಿ, ಶುಭವಾಣಿ, ಭಕ್ತಿಯ ಬೆಳಕು, ಗೊಂಬು, ಬಾಲತಪಸ್ವಿ, ಸವಿಜೇನು, ಮಕ್ಕಳ ಮಂದಿರ ಶಿಶುಕವನ ಸಂಕಲನಗಳನ್ನು ಪ್ರಕಟಿಸಿ ಮಕ್ಕಳಲ್ಲಿ ಕಾವ್ಯಾಸಕ್ತಿ ಮೂಡಿಸಿದರು. ಶ್ರಾವಣದ ಸಿರಿ, ಚೌಪದಿ ಚೆಲುವು, ಸರ್ವಜ್ಞಕವಿ, ಹಾಲುಹಣ್ಣು (ಕವಿ ಸತ್ಯಾರ್ಥಿಯೊಂದಿಗೆ), ಹವಳ ಮುತ್ತು (ಶ್ರೀ ಗುರುಪಾದ ಸ್ವಾಮಿಯವರೊಂದಿಗೆ) ಮುಂತಾದ 50 ಕ್ಕೂ ಅಧಿಕ ಕಾವ್ಯಕೃತಿಗಳನ್ನು ರಚನೆ ಮಾಡಿಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದರು. ಉಳುವೀಶರು ಮಕ್ಕಳ ಸಾಹಿತ್ಯಕ್ಕಾಗಿ ಅನೇಕ ರಾಷ್ಟ್ರೀಯ ಬಹುಮಾನಗಳನ್ನು ಪಡೆದಿರುವರು. ಮೋತಿಲಾಲ ನೆಹರು ಶತಮಾನೋತ್ಸವ ನಿಮಿತ್ತ ಏರ್ಪಡಿಸಿದ್ದ ಕವನ ರಚನಾ ಸ್ಪರ್ಧೆಯಲ್ಲಿ ಅವರ 'ಭಾವೈಕ್ಯ' ಕವನವು ಪ್ರಥಮ ಬಹುಮಾನ ಪಡೆದಾಗ ಕವಿ ಎಸ್. ಡಿ. ಇಂಚಲ ಅವರ ಆತಿಥ್ಯದಲ್ಲಿ ಸ್ವಾತಂತ್ರ್ಯಯೋಧ , ಗಾಂಧೀವಾದಿ ವೆಂಕರೆಡ್ಡಿ ಹೂಲಿ ಅವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ಅದ್ದೂರಿ ಸನ್ಮಾನಏರ್ಪಟ್ಟಿದ್ದು ವಿಶೇಷ.

ಅವರ ಸಂಸ್ಮರಣೆಯಲ್ಲಿ ಕವಿ ಎಸ್.ಡಿ.ಇಂಚಲ ಮತ್ತು ಕವಿ ಉಳುವೀಶ ಹುಲೆಪ್ಪನವರಮಠ ಸ್ಮಾರಕ ಪ್ರತಿಷ್ಠಾನದ ವತಿಯಿಂದ ಪ್ರಸ್ತುತ ವರ್ಷದಿಂದಉತ್ತಮ ಮಕ್ಕಳ ಸಾಹಿತ್ಯಕೃತಿಗೆ ರಾಜ್ಯಮಟ್ಟದ ಶಿಶು ಕಾವ್ಯ ಪುರಸ್ಕಾರವನ್ನು ನೀಡಲಾಗುತ್ತಿದೆ. ಇದೀಗ 2024 ನೇ ವರ್ಷದ ಉಳುವೀಶ ಹುಲೆಪ್ಪನವರಮಠ ರಾಜ್ಯಮಟ್ಟದ ಮಕ್ಕಳ ಕಾವ್ಯಪ್ರಶಸ್ತಿಗೆ ವಿಜಯಪುರಜಿಲ್ಲೆ ಸಿಂದಗಿಯ ಪ್ರೊ. ರಾ.ಶಿ.ವಾಡೇದ ಅವರ ಕಾವ್ಯಕೃತಿ 'ಎತ್ತಿನ ಬಂಡಿ' ಆಯ್ಕೆಯಾಗಿದೆ. ಅವರಿಗೆ 5000 ರೂಪಾಯಿ ನಗದು ಹಾಗೂ ಪ್ರಶಸ್ತಿ ಫಲಕ ನೀಡಿಗೌರವಿಸಲಾಗುತ್ತಿದೆ.

ಪ್ರೊ. ರಾ.ಶಿ.ವಾಡೇದಅವರು ಸಾಹಿತ್ಯರಂಗದಲ್ಲಿಯೇಅಜರಾಮರವಾಗಿರುವರಚನೆಚುಟುಕು ಸಾಹಿತ್ಯಗ್ರಂಥ ಲೇಖನ ಮಾಡಿದ ಸಾಧನೆಗಳು ಅಪಾರ. ಮಕ್ಕಳ ಸಾಹಿತ್ಯ ಕೃತಿಗಳಾದ ಸುಂದರಚಂದಿರ, ಮಾಯದಕುದುರೆ ನಾಟಕಗಳು, ಕೈತೋಟ, ಚಿನ್ನರ ಆಟ, ಬೆಳಕು, ದಡಂದುಡುಕಿ,ತುತ್ತೂರಿ, ಸ್ನೇಹ ಸಿರಿ, ಅಜ್ಜಿಯ ಆಸೆ ಕಥೆ, ಫೈಬರಗುಬ್ಬಿ, ಟಂ.ಟಂಗಾಡಿಚಿನ್ನರ ನೂರೆಂಟು ಕವನಗಳು ಭಾಗ–1 ಹಾಗೂ 2 ಅಲ್ಲದೇ ಮಿಂಚು ಚುಟುಕು, ವಚನ ತರಂಗಆಧುನಿಕ ವಚನ, ಅತಿಥಿ ಫಜಿತಿ, ವಚನ ಸಿಂಚನ, ಮಕ್ಕಳ ಚಂದಿರ ಬದುಕು ಬರಹ, ಶರಣ ಸಂಗಾತಿ, ಕೊರಡುಕೊನರು, ಭೀಮಾಶಿರಿ, ಕರುಣಾಮಯಿ, ಶಾಂತ ಪ್ರಭೆಇವರ ರಚನೆಗಳು, ಸುಧಾ ಸರೋಜ, ಬೆಳ್ಳಕಿ ಕವನಗಳು,ಸಿಂದಗಿ ತಾಲೂಕ 6ನೇ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷಗೌರವ,ಕಸಾಪದ 79ನೇ ಸಂಪಾನೆಗಳಿಗೆ ಸಮಿತಿ ಸದಸ್ಯ ಹಾಗೂ ಕರ್ನಾಟಕರಾಜ್ಯ ಪಠ್ಯ ಪುಸ್ತಕ ರಚನಾ ಸಮಿತಿ ಸದಸ್ಯರಾಗಿಯಯೂ ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರೊ. ರಾ. ಶಿ. ವಾಡೇದಅವರಿಗೆ 2014 ರಲ್ಲಿ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ಸಾಹಿತ್ಯರತ್ನ, ಸುವರ್ಣಕರ್ನಾಟಕ ಸೇವಾ ಪ್ರಶಸ್ತಿ, ಕರ್ನಾಟಕ ಭೂಷಣ, ಹಾಸ್ಯರಾಜ, ಸರಸ್ವತಿ ಶ್ರೀ, ಇವರ ಸಾಹಿತ್ಯ ಸಾಧನೆಗೆ ಅಂದಿನ ರಾಜ್ಯಪಾಲ ಹಂಸರಾಜ ಭಾರದ್ವಾಜ ಅವರಿಂದ ರಾಜಭವನದಲ್ಲಿ ಸನ್ಮಾನ ಹಾಗೂ ಸಾಹಿತ್ಯ ಶ್ರೀ ಪ್ರಶಸ್ತಿಗಳು ಇವರ ಮುಡಿಗೇರಿವೆ. ಇವರ ಸಾಧನೆಗೆ ಮಿತಿಯೇ ಇಲ್ಲ. ಇಂತಹ ಸಾಹಿತ್ಯ ಧೀಮಂತನಿಗೆರಾಜ್ಯರಾಜ್ಯೋತ್ಸವ ಪ್ರಶಸ್ತಿ ಸಿಗುವದಲ್ಲಿ ತಪ್ಪೇನಿಲ್ಲ ಬೇಗನೆ ಸಿಗಲಿ ಎಂಬುದೇ ಸಾಹಿತ್ಯ ಪ್ರೇಮಿಗಳ ಆಶಯವಾಗಿದೆ.

# ಟ್ರಂಪ್ ಹೇಳಿಕೆಯ ಬಗ್ಗೆ ಮೋದಿ ಏಕೆ ಮೌನ



**ನವದೆಹಲಿ, ಜೂ.14:** ದೇಶದಲ್ಲಿ ಒಂದೆಡೆ ವಿಮಾನ ಅಪಘಾತದ ಘಟನೆಯ ಚರ್ಚೆಯಾದರೆ ಇನ್ನೊಂದೆಡೆ ಕಾಂಗ್ರೆಸ್ ನಿಲ್ಲಿಸುವಲ್ಲಿ ತನ್ನ ಪಾತ್ರವಿದೆ ಎಂದು ಟ್ರಂಪ್ಪದೇ ಪದೇ ಹೇಳುತ್ತಿರುವ ಬಗ್ಗೆ ಪ್ರಧಾನಿ ಮೋದಿಯ ಮೌನವನ್ನ ಪ್ರಶ್ನೆ ಮಾಡುತ್ತಿದೆ. ತಮ್ಮ ಎಕ್ಸ್ ಖಾತೆಯಲ್ಲಿ ಸರಣಿ ಹೇಳಿಕೆಗಳನ್ನು ಹಾಕಿರುವ ಪ್ರಧಾನಿ ಮೋದಿಗೆ ಪ್ರಶ್ನೆಗಳ ಸುರಿಮಳೆ ಸುರಿಸಿದ್ದಾರೆ. ಭಾರತ ಮತ್ತು ಪಾಕಿಸ್ತಾನದ ನಡುವಿನ ಯುದ್ಧ ನಿಲ್ಲಿಸುವಂತೆ ಒತ್ತಡ ಹೇರಲು ಟ್ರಂಪ್ ವ್ಯಾಪಾರ ಒಪ್ಪಂದ ಬಳಸಿಕೊಂಡಿದ್ದಾರೆ. ಈ ಬಗ್ಗೆ ನೀವೇಕೆ ಮಾತನಾಡುತ್ತಿಲ್ಲ ಎಂದು ಜೈರಾಮ್ ರಮೇಶ್ ಪ್ರಶ್ನೆ ಮಾಡಿದ್ದಾರೆ. 11 ಬಾರಿ ಟ್ರಂಪ್ ಈ ರೀತಿ ಹೇಳಿಕೆ ನೀಡಿದ್ದು, ಹಂಚಿಕೊಂಡಿರುವ ಜೈರಾಮ್ ರಮೇಶ್, ಟ್ರಂಪ್ ಸುಳ್ಳು ಹೇಳುತ್ತಿದ್ದಾರಾ ಅಥವಾ ಕೇವಲ ಒಂದು ಭಾಗವನ್ನು ಮಾತ್ರ ಹೇಳುತ್ತಿದ್ದಾರಾ ಈ ಬಗ್ಗೆ ಪ್ರಧಾನಿ ಮೋದಿ ಮಾತನಾಡಬೇಕು ಹಾಗೂ ಸ್ಪಷ್ಟನೆ ಕೊಡಬೇಕು ಎಂದು ಒತ್ತಾಯಿಸಿದ್ದಾರೆ. ವ್ಯಾಪಾರ ಒಪ್ಪಂದ ಬಳಸಿಕೊಂಡರೆ ಟ್ರಂಪ್

ಇತ್ತೀಚಿನ ದಿನಗಳಲ್ಲಿ ಬಹಳ ಹರಿದಾಡುತ್ತಿರುವ ಸುದ್ದಿ ಎಂದರೆ ಟ್ರಂಪ್ 2 ದೇಶಗಳ ಯುದ್ಧವನ್ನ ನಿಲ್ಲಿಸಲು ವ್ಯಾಪಾರ ಒಪ್ಪಂದಗಳನ್ನ ರದ್ದು ಮಾಡುವ ಬೆದರಿಕೆ ಹಾಕಿದ್ದಾರೆ ಎನ್ನುವುದು. ಅಧ್ಯಕ್ಷ ಟ್ರಂಪ್ ಅವರ ವಾಣಿಜ್ಯ ಕಾರ್ಯದರ್ಶಿ ಮೇ 23 ರಂದು ನ್ಯೂಯಾರ್ಕ್ ಮೂಲದ ಅಂತಾರಾಷ್ಟ್ರೀಯ ವಾಣಿಜ್ಯ ನ್ಯಾಯಾಲಯಕ್ಕೆ ಸಲ್ಲಿಸಿದ ದಾಖಲೆಯಲ್ಲಿ ಸಹ ಇದೇ ರೀತಿಯ ಹೇಳಿಕೆಗಳನ್ನು ನೀಡಿದ್ದಾರೆ. ಆದರೆ ಡೊನಾಲ್ಡ್ ಭಾಯ್ ಅವರ ಸ್ನೇಹಿತ ಮೋದಿ ಅವರು ಮಾತ್ರ ಈ ಬಗ್ಗೆ ಸಂಪೂರ್ಣ ಮೌನವಹಿಸಿದ್ದು, ಇದು ಜಾಣ ನಿರ್ಲಕ್ಷ್ಯತನ ಎಂದು ಕಿಡಿಕಾರಿದ್ದಾರೆ. ಇನ್ನು ಇದಕ್ಕೆ ಪುಷ್ಠಿ ನೀಡುವಂತೆ ವಾಷಿಂಗ್ಟನ್ನಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಮಿಲಿಟರಿ ಸಂಘರ್ಷಕ್ಕಿಂತ ವ್ಯಾಪಾರದ ಮೂಲಕ ಶಾಂತಿಯನ್ನು ಸಾಧಿಸುವ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದರು, ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಉದ್ವಿಗ್ನತೆ ಹೆಚ್ಚಾದ ಸಮಯದಲ್ಲಿ ಭಾರತ– ಪಾಕಿಸ್ತಾನ ಕದನ ವಿರಾಮ ಘೋಷಿಸುವಲ್ಲಿ ಯುಎಸ್ ಪಾತ್ರದ ಬಗ್ಗೆ ಹೇಳಿಕೆ ನೀಡಿದ್ದು, ಕಾಂಗ್ರೆಸ್ ಪ್ರಧಾನಿ ಮೋದಿ ಯಾವಾಗ ಮಾತನಾಡಲಿದ್ದೀರಿ ಎಂದು ಪ್ರಶ್ನೆಗಳ ಮೇಲೆ ಪ್ರಶ್ನೆಗಳನ್ನು ಹಾಕುತ್ತಿದೆ.

# ಜಾಗತಿಕ ಲಿಂಗ ಅಂತರ ಸೂಚ್ಯಂಕ: ಭಾರತಕ್ಕೆ 131ನೇ ಸ್ಥಾನ

**ನವದೆಹಲಿ, ಜೂ. 14:** ವಿಶ್ವ ಆರ್ಥಿಕ ವೇದಿಕೆಯು ಜಾಗತಿಕ ಲಿಂಗ ಅಂತರ ವರದಿ–2025 ಅನ್ನು ಬಿಡುಗಡೆ ಮಾಡಿದ್ದು, ಕೇವಲ 64.1% ಅಂತರದ ಅಂಕಗಳೊಂದಿಗೆ ಭಾರತವನ್ನು 148 ದೇಶಗಳಲ್ಲಿ 131ನೇ ಸ್ಥಾನದಲ್ಲಿದೆ. ಗುರುವಾರ ಬಿಡುಗಡೆಯಾದ ವರದಿಯು ಭಾರತವನ್ನು ದಕ್ಷಿಣ ಏಷ್ಯಾದಲ್ಲಿ ಅತ್ಯಂತ ಕಡಿಮೆ ಶ್ರೇಯಾಂಕಿತ ದೇಶಗಳಲ್ಲಿ ಇರಿಸಿದೆ. ಕಳೆದ ವರ್ಷ 146 ದೇಶಗಳಲ್ಲಿ ಭಾರತವು 129ನೇ ಸ್ಥಾನದಲ್ಲಿತ್ತು.

ಜಾಗತಿಕ ಲಿಂಗ ಅಂತರ 68.8%ಕ್ಕೆ ಇಳಿದಿದೆ. ಇದು ಕೋವಿಡ್ ಸಾಂಕ್ರಾಮಿಕದ ನಂತರದ ಬಿಕ್ಕಟ್ಟಾಗಿದ್ದು, ಈ ಲಿಂತ ಅಂತರದ ಪೂರ್ಣ ಸಮಾನತೆ ಸಾಧಿಸಲು 123 ವರ್ಷಗಳಷ್ಟು ಬೇಕು ಎಂದು ವರದಿ ಹೇಳಿದೆ. ಐಸ್‌ಲ್ಯಾಂಡ್ 16ನೇ ವರ್ಷವೂ ಶ್ರೇಯಾಂಕದಲ್ಲಿ ಮುಂಚೂಣಿಯಲ್ಲಿದೆ. ನಂತರ ಫಿನ್ಲೆಂಡ್, ನಾರ್ವೆ, ಬ್ರಿಟನ್ ಮತ್ತು ನ್ಯೂಜಿಲೆಂಡ್ ದೇಶಗಳು ಇವೆ. ಬಾಂಗ್ಲಾದೇಶವು ದಕ್ಷಿಣ ಏಷ್ಯಾದಲ್ಲಿ ರಾಜಕೀಯ ಸಬಲೀಕರಣ ಮತ್ತು ಆರ್ಥಿಕ ಭಾಗವಹಿಸುವಿಕೆಯಲ್ಲಿ ಗಮನಾರ್ಹ ಲಾಭಗಳೊಂದಿಗೆ 75 ಸ್ಥಾನಗಳ ಜಿಗಿತದೊಂದಿಗೆ ಜಾಗತಿಕವಾಗಿ 24ನೇ ಸ್ಥಾನಕ್ಕೆ ತಲುಪಿದೆ.

ಜಾಗತಿಕ ಲಿಂಗ ಅಂತರ ಸೂಚ್ಯಂಕವು ನಾಲ್ಕು ಪ್ರಮುಖ ಆಯಾಮಗಳಲ್ಲಿ ಲಿಂಗ ಸಮಾನತೆಯನ್ನು ಅಳೆಯುತ್ತದೆ. ಆರ್ಥಿಕ ಭಾಗವಹಿಸುವಿಕೆ ಮತ್ತು ಅವಕಾಶ; ಶೈಕ್ಷಣಿಕ ಸಾಧನೆ; ಆರೋಗ್ಯ ಮತ್ತು ಬದುಕುಳಿಯುವಿಕೆ ಮತ್ತು ರಾಜಕೀಯ ಸಬಲೀಕರಣ. ಭಾರತೀಯ ಆರ್ಥಿಕತೆಯ ಒಟ್ಟಾರೆ ಕಾರ್ಯಕ್ಷಮತೆಯು ಸಂಪೂರ್ಣ ಪರಿಭಾಷೆಯಲ್ಲಿ 0.3 ಅಂಕಗಳಿಂದ ಸುಧಾರಿಸಿದೆ. ಕಾರ್ಮಿಕ ಬಲ ಭಾಗವಹಿಸುವಿಕೆಯ ದರದಲ್ಲಿ ಭಾರತದ ಕಾರ್ಯಕ್ಷಮತೆಯು ಕಳೆದ ವರ್ಷದಂತೆಯೇ (45.9%) ಉಳಿದಿದೆ. ಶೈಕ್ಷಣಿಕ ಸಾಧನೆಯಲ್ಲಿ ಭಾರತವು 97.1% ಗಳಿಸಿದೆ ಎಂದು ವರದಿ ಹೇಳಿದೆ.




ಇದು ಸಾಕ್ಷರತೆ ಮತ್ತು ತೃತೀಯ ಶಿಕ್ಷಣ ದಾಖಲಾತಿಯಲ್ಲಿ ಮಹಿಳೆಯರ ಪಾಲುಗಳಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ಪ್ರತಿಬಿಂಬಿಸುತ್ತದೆ. ಇದು ಒಟ್ಟಾರೆಯಾಗಿ ಉಪಸೂಚ್ಯಂಕಕ್ಕೆ ಸಕಾರಾತ್ಮಕ ಅಂಕ ಸುಧಾರಣೆಗಳಿಗೆ ಕಾರಣವಾಗಿದೆ. ಜನನದ ಸಮಯದಲ್ಲಿ ಲಿಂಗ ಅನುಪಾತ ಮತ್ತು ಆರೋಗ್ಯಕರ ಜೀವನ ನಿರೀಕ್ಷೆಯಲ್ಲಿ ಸುಧಾರಿತ ಅಂಕಗಳಿಂದಾಗಿ ಭಾರತವು ಆರೋಗ್ಯ ಮತ್ತು ಬದುಕುಳಿಯುವಿಕೆಯಲ್ಲಿ ಹೆಚ್ಚಿನ ಸಮಾನತೆಯನ್ನು ದಾಖಲಿಸಿದೆ ಎಂದು ಅದು ಹೇಳಿದೆ. ಆದಾಗ್ಯೂ, ಇತರ ದೇಶಗಳಂತೆ, ಪುರುಷರು ಮತ್ತು ಮಹಿಳೆಯರ ಜೀವಿತಾವಧಿಯಲ್ಲಿ ಒಟ್ಟಾರೆಯಾಗಿ ಕಡಿತದ ಹೊರತಾಗಿಯೂ ಆರೋಗ್ಯಕರ ಜೀವಿತಾವಧಿಯಲ್ಲಿ ಸಮಾನತೆಯನ್ನು ಪಡೆಯಲಾಗಿದೆ ಎಂದು ವರದಿ ಹೇಳಿದೆ.

ಸಂಸತ್ತಿನಲ್ಲಿ ಮಹಿಳಾ ಪ್ರಾತಿನಿಧ್ಯವು 14.7%ರಿಂದ 13.8%ಕ್ಕೆ ಇಳಿದಿದ್ದು, ಭಾರತವು ಸತತ ಎರಡನೇ ವರ್ಷ ರಾಜಕೀಯ ಸಬಲೀಕರಣದಲ್ಲಿ ಸಮಾನತೆಯಲ್ಲಿ ಕುಸಿತವನ್ನು ದಾಖಲಿಸಿದೆ. ಅದೇ ರೀತಿ, ಸಚಿವ ಸ್ಥಾನಗಳಲ್ಲಿ ಮಹಿಳೆಯರ ಪಾಲು 6.5% ರಿಂದ 5.6%ಕ್ಕೆ ಇಳಿದಿದೆ/ ಈ ವರ್ಷ ಸೂಚಕ ಅಂಕವನ್ನು (5.9%) ಅದರ ಅತ್ಯುನ್ನತ ಮಟ್ಟದಿಂದ (2019 ರಲ್ಲಿ 30%) ಮತ್ತಷ್ಟು ದೂರಕ್ಕೆ ತಳ್ಳಿದೆ. ನೇಪಾಳ 125, ಶ್ರೀಲಂಕಾ 130, ಭೂತಾನ್ 119, ಮಾಲ್ಡೀವ್ಸ್ 138 ಮತ್ತು ಪಾಕಿಸ್ತಾನ 148 ಸ್ಥಾನಗಳೊಂದಿಗೆ ಕೊನೆಯ ಸ್ಥಾನದಲ್ಲಿವೆ.

2025ರಲ್ಲಿ ದಕ್ಷಿಣ ಏಷ್ಯಾ 7ನೇ ಸ್ಥಾನದಲ್ಲಿದೆ. ಇದರ ಲಿಂಗಾನುಪಾತ ಶೇಕಡಾ 64.6 ಆಗಿದೆ. ಪ್ರಾದೇಶಿಕ ಬ್ಲಾಕ್ ಅನ್ನು ರೂಪಿಸುವ ಏಳು ಆರ್ಥಿಕತೆಗಳಲ್ಲಿ ಬಾಂಗ್ಲಾದೇಶ (24ನೇ, ಶೇಕಡಾ 77.5) ಮಾತ್ರ ಅಗ್ರ 50ರಲ್ಲಿ ಸ್ಥಾನ ಪಡೆದಿದೆ ಎಂದು ವರದಿ ಹೇಳಿದೆ. ಆರ್ಥಿಕ ಭಾಗವಹಿಸುವಿಕೆ ಮತ್ತು ಅವಕಾಶದಲ್ಲಿ ಈ ಪ್ರದೇಶವು ಶೇಕಡಾ 40.6 ಅಂಕಗಳನ್ನು ಗಳಿಸಿದೆ. ಕಾಲಾನಂತರದಲ್ಲಿ ದಕ್ಷಿಣ ಏಷ್ಯಾವು ಹಿರಿಯ ಕಾರ್ಮಿಕರಿಗೆ (+9.1 ಶೇಕಡಾ–ತಾಜ್ ಅಂಕಗಳು) ಮತ್ತು ವೃತ್ತಿಪರ ಮತ್ತು ತಾಂತ್ರಿಕ ಕೆಲಸಗಾರರಿಗೆ (+17.2 ಶೇಕಡಾ ಅಂಕಗಳು) ಆರ್ಥಿಕ ಪ್ರಾತಿನಿಧ್ಯಕ್ಕಾಗಿ ತನ್ನ ಸಮಾನತೆಯ ಸ್ಕೋರ್ ಅನ್ನು ಹೆಚ್ಚಿಸಿದೆ. ಆದಾಗ್ಯೂ ಅಂದಾಜು ಗಳಿಸಿದ ಆದಾಯದಲ್ಲಿ ಸಮಾನತೆಯ ಸ್ಕೋರ್ ಶೇ.7.8 ಅಂಕಗಳಿಂದ ಕುಸಿದಿದೆ.

ಶೇಕಡಾ 95.4ರೊಂದಿಗೆ ಆರನೇ ಸ್ಥಾನದಲ್ಲಿದೆ. ಆರ್ಥಿಕತೆಗಳು ಸಾಕ್ಷರತಾ ಸಮಾನತೆಯಲ್ಲಿ ಹೆಚ್ಚಿನ ಮಟ್ಟದ ವ್ಯತ್ಯಾಸವನ್ನು ತೋರಿಸುತ್ತವೆ: ನೇಪಾಳ ಮತ್ತು ಪಾಕಿಸ್ತಾನದಲ್ಲಿ ಸಾಕ್ಷರತಾ ಸಮಾನತೆಯ ಅಂಕವು ಶೇಕಡಾ 75 ಕ್ಕಿಂತ ಕಡಿಮೆಯಿದ್ದರೆ, ಮಾಲ್ಡೀವ್ಸ್‌ನಲ್ಲಿ ಪೂರ್ಣ ಸಮಾನತೆಯನ್ನು ಗಮನಿಸಲಾಗಿದೆ. ದಕ್ಷಿಣ ಏಷ್ಯಾದ ಆರೋಗ್ಯ ಮತ್ತು ಬದುಕುಳಿಯುವಿಕೆಯ ಅಂಕವು ಶೇಕಡಾ 95.5 ಆಗಿದೆ. ಕಾಲಾನಂತರದಲ್ಲಿ ಆರೋಗ್ಯಕರ ಜೀವಿತಾವಧಿಯಲ್ಲಿ (+0.9 ಶೇಕಡಾ ಅಂಕಗಳು) ವಿರಳವಾದ ಪ್ರಗತಿಯನ್ನು ಜನನದ ಸಮಯದಲ್ಲಿ ಲಿಂಗ ಅನುಪಾತದಲ್ಲಿನ ಸಮಾನತೆಯ ನಷ್ಟದಿಂದ (–1 ಶೇಕಡಾ ಅಂಕಗಳು) ಎದುರಿಸಲಾಗುತ್ತದೆ.

ರಾಜಕೀಯ ಸಬಲೀಕರಣದಲ್ಲಿ ದಕ್ಷಿಣ ಏಷ್ಯಾವು ಶೇಕಡಾ 26.8ರಷ್ಟು ಅಂಕಗಳೊಂದಿಗೆ ನಾಲ್ಕನೇ ಸ್ಥಾನದಲ್ಲಿದೆ. 2006ರಲ್ಲಿ ಈ ಪ್ರದೇಶವು ಎಲ್ಲಾ ಪ್ರದೇಶಗಳಿಗಿಂತ ಅತ್ಯಧಿಕ ಬೇಸ್ಲೈನ್ (2006) ಅಂಕವನ್ನು ಹೊಂದಿದ್ದು, ಶೇಕಡಾ 21.9ರಷ್ಟಿದೆ. ಅಂದಿನಿಂದ ಇದು ಶೇಕಡಾ 4.9ರಷ್ಟು ರಾಜಕೀಯ ಸಮಾನತೆಯನ್ನು ಹೆಚ್ಚಿಸಿದೆ. ಈ ಬ್ಲಾಕ್ನಲ್ಲಿರುವ ಏಳು ಆರ್ಥಿಕತೆಗಳಲ್ಲಿ ಬಾಂಗ್ಲಾದೇಶ ಮಾತ್ರ ರಾಷ್ಟ್ರದ ಮುಖ್ಯಸ್ಥರ ಮಟ್ಟದಲ್ಲಿ ರಾಜಕೀಯ ಸಮಾನತೆಯನ್ನು ಸಾಧಿಸಿದೆ. ಸಂಸದೀಯ ಮಟ್ಟದಲ್ಲಿ ಭೂತಾನ್ ಮತ್ತು ಮಾಲ್ಡೀವ್ಸ್ ಶೇಕಡಾ 5ಕ್ಕಿಂತ ಕಡಿಮೆ ಸಮಾನತೆಯ ಅಂಕಗಳನ್ನು ಹೊಂದಿರುವ ಎರಡು ಆರ್ಥಿಕತೆಗಳಾಗಿವೆ. ಆದಾಗ್ಯೂ, ಜಾಗತಿಕ ಕಾರ್ಯಪಡೆಯ ಶೇ. 41.2ರಷ್ಟು ಮಹಿಳೆಯರು ಪ್ರತಿನಿಧಿಸುತ್ತಿದ್ದರೂ, ಉನ್ನತ ನಾಯಕತ್ವದ ಹುದ್ದೆಗಳಲ್ಲಿ ಮಹಿಳೆಯರು ಕೇವಲ ಶೇ. 28.8ರಷ್ಟು ಮಾತ್ರ ಹೊಂದಿರುವುದರಿಂದ ನಾಯಕತ್ವದ ಅಂತರವು ತೀವ್ರವಾಗಿದೆ ಎಂದು ವರದಿ ತಿಳಿಸಿದೆ.




ಆಸ್ಟ್ರೇಲಿಯಾ ವಿರುದ್ಧ ನಡೆದ ವಿಶ್ವ ಕ್ರಿಕೆಟ್ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ನಲ್ಲಿ ಜಯಗಳಿಸಿದ ನಂತರ ದಕ್ಷಿಣ ಆಫ್ರಿಕಾದ ನಾಯಕಿ ಟೆಂಬಾ ಬವುಮಾ ಮತ್ತು ತಂಡದ ಸದಸ್ಯರು ಟ್ರೋಫಿಯೊಂದಿಗೆ ಸಂಭ್ರಮಾಚರಣೆ.

# ಜಿ7 ಶೃಂಗಸಭೆಯಲ್ಲಿ ಪ್ರಧಾನಿ ಭಾಗಿ

**ನವದೆಹಲಿ,ಜೂ.14:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಭಾನುವಾರ ಇಲ್ಲಿಂದ ನಾಲ್ಕು ದಿನಗಳ ಮೂರು ರಾಷ್ಟ್ರಗಳ ಸೈಪ್ರಸ್, ಕೆನಡಾ ಮತ್ತು ಕ್ರೊವೇಷಿಯಾ ಭೇಟಿಗೆ ತೆರಳಲಿದ್ದಾರೆ, ಪ್ರಾಥಮಿಕವಾಗಿ ಜೂನ್ 16–17 ರಂದು ಕೆನಡಾದ ಕನನಾಸ್ಕಿಸ್‌ನಲ್ಲಿ ನಡೆಯಲಿರುವ 51 ನೇ ಜಿ–7 ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದು ಜಿ–7 ಶೃಂಗಸಭೆಯಲ್ಲಿ ಪ್ರಧಾನಿ ಮೋದಿ ಅವರ ಸತತ 6ನೇ ಭಾಗವಹಿಸುವಿಕೆಯಾಗಿದೆ. ತಮ್ಮ ಪ್ರವಾಸದ ಮೊದಲ ಹಂತದಲ್ಲಿ, ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋಡೌಲೈಡ್ಸ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ಜೂನ್ 15–16 ರಂದು ಸೈಪ್ರಸ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಎರಡು ದಶಕಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ಸೈಪ್ರಸ್‌ಗೆ ಭೇಟಿ ನೀಡುತ್ತಿರುವುದು ಇದೇ ಮೊದಲು. ತಮ್ಮ ಭೇಟಿಯ ಎರಡನೇ ಹಂತದಲ್ಲಿ, ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಅವರ ಆಹ್ವಾನದ ಮೇರೆಗೆ, ಮೋದಿ ಜೂ.16–17ರಂದು ಜಿ–7 ಶೃಂಗಸಭೆಯಲ್ಲಿ ಭಾಗವಹಿಸಲು ಕನನಾಸಿಸ್‌ಗೆ ಪ್ರಯಾಣಿಸಲಿದ್ದಾರೆ. ಶೃಂಗಸಭೆಯಲ್ಲಿ, ಪ್ರಧಾನ ಮಂತ್ರಿಯವರು ಉ–7 ದೇಶಗಳ ನಾಯಕರು, ಇತರ ಆಹ್ವಾನಿತ ಸಂಪರ್ಕ ರಾಷ್ಟ್ರಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಇಂಧನ ಭದ್ರತೆ, ತಂತ್ರಜ್ಞಾನ ಮತ್ತು ನಾವೀನ್ಯತೆ, ವಿಶೇಷವಾಗಿ AI– ಇಂಧನ ಸಂಬಂಧ ಮತ್ತು ಕ್ವಾಂಟಮ್–ಸಂಬಂಧಿತ ವಿಷಯಗಳಂತಹ ನಿರ್ಣಾಯಕ ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಶೃಂಗಸಭೆಯ ಹೊರತಾಗಿ ಪ್ರಧಾನಿ ಮೋದಿ ಹಲವಾರು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ.

ವಿಶೇಷ ಆಹ್ವಾನಿತರಲ್ಲಿ ಪ್ರಧಾನಿ ನರೇಂದ್ರ ಮೋದಿ, ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್, ಬ್ರೆಜಿಲ್ ಅಧ್ಯಕ್ಷ ಲುಲಾ ಡ ಸಿಲ್ವಾ ಮತ್ತು ಮೆಕ್ಸಿಕೋ ಅಧ್ಯಕ್ಷರು, ಕ್ಲೌಡಿಯಾ ಶೀನ್ಬಾಮ್, ದಕ್ಷಿಣ ಕೊರಿಯಾ ಲೀ ಜೇ–ಮ್ಯುಂಗ್, ದಕ್ಷಿಣ ಆಫ್ರಿಕಾ, ಸಿರಿಲ್ ರಾಮಾಫೋಸಾ, ಉಕ್ರೇನ್‌ನ ವೊಲೊಡಿಮಿರ್ ಝೆಲೆನ್ಸ್ಕಿ ಮತ್ತು ಯುಎಇ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಸೇರಿದ್ದಾರೆ.

ಮಂಗಳೂರು ವಿಶ್ವವಿದ್ಯಾನಿಲಯದ ಸಂಭ್ರಮ । ಜಾದೂಗಾರ ಕುದ್ರೋಳಿ ಗಣೇಶ್ ಚಾಲನೆ

# ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಉಪನ್ಯಾಸಕರೂ ಜಾದೂಗಾರರೇ: ಪ್ರೊ.ಪಿ.ಎಲ್ ಧರ್ಮ ಅಭಿಮತ

**ಮುಂಬಯಿ, ಜೂ.14:** ಮಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿದ್ಯಾರ್ಥಿ ಪರಿಷತ್ ಸಂಘಟಿಸಿದ ಸಂಭ್ರಮ – 2025 ಅಂತರ್ ವಿಭಾಗೀಯ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಯನ್ನು ಪ್ರಖ್ಯಾತ ಜಾದೂಗಾರ ಕುದ್ರೋಳಿ ಗಣೇಶ್ ಉದ್ಘಾಟಿಸಿದರು. ಮಂಗಳೂರು ಕೋಣಾಜೆಯಲ್ಲಿನ ಮಂಗಳ ಗಂಗೋತ್ರಿ ಮಂಗಳಾ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ದೀಪ ಬೆಳಗಿಸಿ ಮಾತನಾಡಿದ ಕುದ್ರೋಳಿ ಗಣೇಶ್ ವಿದ್ಯಾರ್ಥಿಗಳಿಗೆ ಓದಿನ ಜೊತೆ ಜೊತೆಗೆ ವಿವಿಧ ಕಲೆಗಳ ಅಭಿವ್ಯಕ್ತಿಗೆ ಅವಕಾಶ ನೀಡುವ ವಿಶ್ವವಿದ್ಯಾಲಯದ ಕ್ರಮ ಶ್ಲಾಘನೀಯವಾದದ್ದು ಎಂದರು. ಕಲೆ ಮತ್ತು ಕಲಾಭಿರುಚಿ ಉತ್ತಮ ನಾಗರಿಕರನ್ನು ಬೆಳೆಸುತ್ತದೆ, ಕಲೆಯಲ್ಲಿ ತೊಡಗಿಸಿಕೊಂಡಿರುವ ವಿದ್ಯಾರ್ಥಿಗಳು ಮುಂದೆ ತಾವು ಮಾಡಬೇಕಾಗಿರುವ ಉದ್ಯೋಗ – ವ್ಯಾಪಾರಗಳಲ್ಲಿ ಉನ್ನತಿಯಲ್ಲಿ ಸಾಧಿಸುತ್ತಾರೆ ಎಂದು ಅಭಿಪ್ರಾಯ ಪಟ್ಟರು.



ಮಂಗಳೂರು ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ। ಪಿ.ಎಲ್ ಧರ್ಮ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳಿಗೆ ಭೋಧಿಸುವ ಉಪನ್ಯಾಸಕರು ಒಂದು ರೀತಿಯಿಂದ ಜಾದೂಗಾರರಿದ್ದಂತೆ. ತಮ್ಮ ಜ್ಞಾನದಿಂದ ಅವರು ವಿದ್ಯಾರ್ಥಿಗಳ ವ್ಯಕ್ತಿತ್ವ ಬೆಳೆಸುವ ಜಾದೂ ಮಾಡುತ್ತಾರೆ. ಜ್ಞಾನದ ಕೇಂದ್ರವಾದ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳು ಖುಷಿಖುಷಿಯಾಗಿರಿ. ಸಂಭ್ರಮದಂತಹ ಸಾಂಸ್ಕೃತಿಕ ಸ್ಪರ್ಧೆಗಳಿಂದ ಮತ್ತಷ್ಟು ಪ್ರತಿಭಾವಂತರಾಗಿ ಎಂದು ಕರೆನೀಡಿದರು.

ಮುಖ್ಯ ಅತಿಥಿಗಳಾಗಿದ್ದ ಗೌರವಾನ್ವಿತ ಕುಲಸಚಿವ ಕೆ.ರಾಜು ಮೊಗವೀರ ಕೆ.ಎ.ಎಸ್ ಮಾತನಾಡಿ ತಮ್ಮ ಬದ್ಧತೆ ಮತ್ತು ವೃತ್ತಿಪರತೆಯಿಂದ ಜಾದೂ ಕಲೆಯಲ್ಲಿ ಶ್ರೇಷ್ಠತೆಯನ್ನು ಸಾಧಿಸಿರುವ ಕುದ್ರೋಳಿ ಗಣೇಶ್ ವಿದ್ಯಾರ್ಥಿಗಳಿಗೆ ಆದರ್ಶಪ್ರಾಯರು, ತಾವು ಮಾಡುವ ಕೆಲಸವನ್ನು ಅತ್ಯುತ್ತಮವಾಗಿ ಮಾಡುತ್ತೇವೆ ಅನ್ನುವ ಸಂಕಲ್ಪ ವಿದ್ಯಾರ್ಥಿಗಳದ್ದಾಗಿರಲಿ ಎಂದು ಹೇಳಿದರು.

ಕುದ್ರೋಳಿ ಗಣೇಶ್ ಹಾಗೂ ರಂಜಿತಾ ಗಣೇಶ್ ದಂಪತಿಗೆ ಸನ್ಮಾನ ನೀಡಲಾಯಿತು. ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಮದನ್ ಕುಮಾರ್ ಹಾಗೂ ಪದಾಧಿಕಾರಿಗಳಾದ ಕಾರ್ತಿಕ್ ವಿ, ರಾಮಪ್ರಸಾದ್ ಪಿ.ಟಿ,ಕು। ಜಿ.ಎನ್ ಪಾವನ, ಮಹೇಶ್ ಕೂಡಗಿ, ಬಿ.ಮೀರಜ್ ಉಪಸ್ಥಿತರಿದ್ದರು. ಮಂಗಳೂರು ವಿವಿ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲದ ನಿರ್ದೇಶಕ ಪ್ರೊ। ಪ್ರಶಾಂತ್ ನಾಯ್ಕ ಸ್ವಾಗತಿಸಿ ವಂದಿಸಿದರು.

# ಇಸ್ರೇಲ್ ರಕ್ಷಿಸುವ ರಾಷ್ಟ್ರಗಳ ಮೇಲೆ ದಾಳಿ: ಇರಾನ್

**ನವದೆಹಲಿ, ಜೂ. 14:** ಇಸ್ರೇಲ್ ಅನ್ನು ರಕ್ಷಿಸಲು ಪ್ರಯತ್ನಿಸುವ ದೇಶಗಳ ಪ್ರಾದೇಶಿಕ ನೆಲೆಗಳನ್ನು ಇರಾನ್ ಗುರಿಯಾಗಿಸುತ್ತದೆ ಎಂದು ಇರಾನಿನ ಅಧಿಕಾರಿಯೊಬ್ಬರು ಹೇಳಿರುವುದಾಗಿ ಅಮೆರಿಕದ ಮಾಧ್ಯಮ ಸಿಎನ್‌ಎನ್ ಅನ್ನು ಉಲ್ಲೇಖಿಸಿ ಅಲ್ ಜಝೀರಾ ವರದಿ ಮಾಡಿದೆ. ಈ ಮೂಲಕ, ಇಸ್ರೇಲ್ ಅನ್ನು ರಕ್ಷಿಸಲು ಮುಂದಾಗುವ ರಾಷ್ಟ್ರಗಳಿಗೆ ಇರಾನ್ ಶುಕ್ರವಾರ ತೀಕ್ಷ್ಣ ಎಚ್ಚರಿಕೆ ನೀಡಿದೆ.

ಇಸ್ರೇಲ್‌ಗೆ ನಿರ್ಣಾಯಕವಾಗಿ ಪ್ರತಿಕ್ರಿಯಿಸುವ ಹಕ್ಕನ್ನು ಇರಾನ್ ಅಂತರರಾಷ್ಟ್ರೀಯ ಕಾನೂನಿನಡಿಯಲ್ಲಿ ಕಾಯ್ದಿರಿಸಿದೆ ಎಂದು ಇರಾನ್‌ನ ಅಧಿಕಾರಿ ಹೇಳಿದ್ದು, ಇರಾನ್‌ನ ಕಾರ್ಯಾಚರಣೆಗಳ ವಿರುದ್ಧ ಇಸ್ರೇಲ್‌ನ ಆಡಳಿತವನ್ನು ರಕ್ಷಿಸಲು ಪ್ರಯತ್ನಿಸುವ ಯಾವುದೇ ದೇಶವು ಪ್ರತಿಯಾಗಿ, ಅದರ ಪ್ರಾದೇಶಿಕ ನೆಲೆಗಳು ಮತ್ತು ಸ್ಥಾನಗಳು ಹೊಸ ಗುರಿಗಳಾಗುತ್ತವೆ ಎಂದು ಅಧಿಕಾರಿ ಹೇಳಿದ್ದಾರೆ.

ಇಸ್ರೇಲ್ ತನ್ನ ಇತಿಹಾಸದಲ್ಲಿಯೇ ಅತ್ಯಂತ ಶ್ರೇಷ್ಠ ಮಿಲಿಟರಿ ಕಾರ್ಯಾಚರಣೆ ಎಂದು ಕರೆದ ಆಪರೇಷನ್ ರೈಸಿಂಗ್ ಲಯನ್ ಇರಾನ್ನ ಪರಮಾಣು ಮತ್ತು ಮಿಲಿಟರಿ ಕೇಂದ್ರಗಳನ್ನು ಗುರಿಯಾಗಿಸಿಕೊಂಡು ಪ್ರಾರಂಭಿಸಿದ ನಂತರ ಇರಾನ್ ಈ ಘೋಷಣೆ ಮಾಡಿದೆ. ಇಸ್ರೇಲ್‌ನ ದಾಳಿಗೆ ಪ್ರತಿಕ್ರಿಯೆಯಾಗಿ, ಇರಾನ್ ಶುಕ್ರವಾರ ರಾತ್ರಿ ಮತ್ತು ಶನಿವಾರ ಮುಂಜಾನೆ ರಾಜಧಾನಿ ಟೆಲ್ ಅವೀವ್ ಸೇರಿದಂತೆ ಮಧ್ಯ ಇಸ್ರೇಲಿ ನಗರಗಳನ್ನು ಗುರಿಯಾಗಿಸಿಕೊಂಡು ಖಂಡಾಂತರ ಕ್ಷಿಪಣಿಗಳ ದಾಳಿ ನಡೆಸಿತು.



ಇರಾನ್ ದಾಳಿಯ ನಂತರ ದೇಶಾದ್ಯಂತ ವಾಯುದಾಳಿಯ ಸೈರನ್ ಮೊಳಗುತ್ತಿದ್ದಂತೆ ಸ್ಫೋಟಗಳು ನಡೆದಿವೆ. ಇಸ್ರೇಲಿ ಸೇನೆಯು ಅನೇಕ ಕ್ಷಿಪಣಿಗಳನ್ನು ತಡೆಹಿಡಿದಿರುವುದಾಗಿ ಹೇಳಿಕೊಂಡರೂ, ಕೆಲವು ಪರಿಣಾಮ ಬೀರಿವೆ ಎಂದು ಅದು ಒಪ್ಪಿಕೊಂಡಿದೆ. ಅದೇ ನಿಲುವನ್ನು ಪ್ರತಿಧ್ವನಿಸಿರುವ ಇರಾನ್‌ನ ಮಿಲಿಟರಿ ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ, ಎರಡು ವರ್ಷಗಳ ಪ್ಯಾಲೆಸ್ತೀನಿ ಹತ್ಯಾಕಾಂಡಗಳು ಮತ್ತು ನಿನ್ನೆ ರಾತ್ರಿ ಇರಾನ್ ಮೇಲಿನ ದಾಳಿಯ ಸಮಯದಲ್ಲಿ ನೀವು ಮೌನವಾಗಿದ್ದರೆ, ಈಗ ಸಂಯಮಕ್ಕೆ ಕರೆ ನೀಡಬೇಡಿ. ಸುಮ್ಮನಿರಿ. ಎಂದು ಹೇಳಿದೆ.

ಆಪರೇಷನ್ ರೈಸಿಂಗ್ ಲಯನ್ ಮೂಲಕ ಇಸ್ರೇಲ್ ಕ್ಷಿಪಣಿ ತಾಣಗಳು, ಪರಮಾಣು ಕೇಂದ್ರಗಳು ಮತ್ತು ಮಿಲಿಟರಿ ಕಮಾಂಡ್ ಕೇಂದ್ರಗಳನ್ನು ಗುರಿಯಾಗಿಸಿಕೊಂಡಿತ್ತು. ಇರಾನಿನ ವರದಿಗಳ ಪ್ರಕಾರ, ಹಲವಾರು ಉನ್ನತ ಶ್ರೇಣಿಯ ಪರಮಾಣು ವಿಜ್ಞಾನಿಗಳು ಮತ್ತು ಉನ್ನತ ಮಿಲಿಟರಿ ಕಮಾಂಡರ್‌ಗಳು ಕೊಲ್ಲಲ್ಪಟ್ಟರು. ದಾಳಿಗೆ ಇರಾನ್ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಶನಿವಾರದಂದು ಉಗ್ರ ಭಾಷಣದೊಂದಿಗೆ ಪ್ರತಿಕ್ರಿಯಿಸಿದ್ದು, ಅವರು ಮಾಡಿರುವ ಈ ಭಾರಿ ತಪ್ಪಿನ ಪರಿಣಾಮಗಳಿಂದ ತಪ್ಪಿಸಿಕೊಳ್ಳಲು ನಾವು ಅವರಿಗೆ ಅವಕಾಶ ನೀಡುವುದಿಲ್ಲ ಎಂದು ಅವರು ಸಾರ್ವಜನಿಕರಿಗೆ ನೀಡಿದ ಸಂದೇಶದಲ್ಲಿ ಹೇಳಿದ್ದಾರೆ.

ಅವರು ದಾಳಿ ಮಾಡಿದರು ಮತ್ತು ಅದು ಮುಗಿದಿದೆ ಎಂದು ಭಾವಿಸಬೇಡಿ. ಇಲ್ಲ, ಅವರು ಕ್ರಮಗಳನ್ನು ಪ್ರಾರಂಭಿಸಿದರು ಮತ್ತು ಸಂಘರ್ಷವನ್ನು ಪ್ರಾರಂಭಿಸಿದರು ಎಂದು ಅವರು ಹೇಳಿದ್ದು, ಇರಾನ್‌ನ ಮಿಲಿಟರಿ ಪ್ರತಿಕ್ರಿಯಿಸಲು ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಹೇಳಿದ್ದರು.

# ನಗುಮೊಗದ ಗಗನಸಖಿ ಮನೀಷಾ ಥಾಪಾ ದುರಂತ ಅಂತ್ಯ

**ಅಹಮದಾಬಾದ್, ಜೂ.14:** ಏರ್ ಇಂಡಿಯಾ ವಿಮಾನ ಅಪಘಾತದಲ್ಲಿ ನಗುಮೊಗದ ಗಗನಸಖಿ ಮನೀಷಾ ಥಾಪಾ (27) ದುರಂತ ಅಂತ್ಯ ಕಂಡಿದ್ದಾರೆ. ಮನೀಷಾ ಥಾಪಾ ನೇಪಾಳ ಮೂಲದವರಾದರೂ, ಹುಟ್ಟಿ ಬೆಳೆದಿದ್ದೆಲ್ಲಾ ಪಟಾಣದಲ್ಲಿ. ಮೊದಲು ಇಂಡಿಗೋದಲ್ಲಿ ಗ್ರೌಂಡ್ ಸ್ಟಾಫ್ ಆಗಿ ವೃತ್ತಿಜೀವನ ಆರಂಭಿಸಿದ ಅವರು ಬಳಿಕ ಆಕಾಶ್ ಏರ್, ನಂತರ ಏರ್ ಇಂಡಿಯಾ ಸೇರಿದಲ್ಲಿ ಗಗನಸಖಿಯಾಗಿದ್ದರು. ಏರ್ ಇಂಡಿಯಾ ಸೇರಿದ ಬಳಿಕ ಹೆಚ್ಚಾಗಿ ಲಂಡನ್, ಆಸ್ಟ್ರೇಲಿಯಾ ಮಾರ್ಗದಲ್ಲಿ ಕೆಲಸ ಮಾಡುತ್ತಿದ್ದರು.



ಏರ್ ಇಂಡಿಯಾ ಗಗನಸಖಿಯಾಗಿದ್ದ ಮನೀಷಾ ಸದಾ ಹಸನ್ಮುಖಿಯಾಗಿದ್ದರು. ಮನೀಷಾ ಕೋಪ ಮಾಡ್ಕೊಂಡಿದ್ದನ್ನು ನೋಡೇ ಇಲ್ಲ. ಎಲ್ಲದಕ್ಕೂ ನಗುವಿನ ಮೂಲಕವೇ ಉತ್ತರಿಸುತ್ತಿದ್ದಳು. ಅಲ್ಲದೇ ಕಲಿಕೆಯಲ್ಲಿಯೂ ಸದಾ ಮುಂದಿದ್ದರು ಎಂದು ಅವರ ಸ್ನೇಹಿತರು ಆಕೆಯನ್ನು ನೆನೆದು ಕಣ್ಣೀರು ಹಾಕಿದ್ದಾರೆ. ಇದೀಗ ಮನೀಷಾ ಸಾವಿನ ವಿಚಾರ ಕೇಳಿ, ಆಕೆ ತಾಯಿಯ ಆರೋಗ್ಯದಲ್ಲಿ ಏರುಪೇರಾಗಿದ್ದು, ಸದ್ಯ ವೈದ್ಯರ ಆರೈಕೆಯಲ್ಲಿದ್ದಾರೆ. ಸದಾ ಆಗಸದಲ್ಲಿ ಹಾರಬೇಕೆಂದು ಕನಸುಕಂಡಿದ್ದ 10 ಗಗನಸಖಿರು ವಿಮಾನ ದುರಂತದಲ್ಲಿ ಬದುಕು ಅಂತ್ಯಗೊಳಿಸಿರುವುದು ಹೃದಯವಿದ್ರಾವಕ ಸಂಗತಿಯಾಗಿದೆ.

**ಏನಿದು ಘಟನೆ?:** ಅಹಮದಾಬಾದ್ ಸರ್ದಾರ್ ವಲ್ಲಭಬಾಯಿ ಪಟೇಲ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಲಂಡನ್‌ಗೆ ಹೊರಟ ಏರ್‌ಇಂಡಿಯಾ ವಿಮಾನ ಟೇಕ್ ಆಫ್ ಆದ ಕೆಲವೇ ಕ್ಷಣಗಳಲ್ಲಿ ಪತನಗೊಂಡಿತು. ಪರಿಣಾಮ ಅಹಮದಾಬಾದ್ ಸಮೀಪದ ಮೇಘನಿ ನಗರದ ಬಿಜೆ ಎಂಬಿಬಿಎಸ್ ಕಾಲೇಜು ಸಂಕೀರ್ಣಕ್ಕೆ ಡಿಕ್ಕಿ ಹೊಡೆದಿತ್ತು. ವಿಮಾನದಲ್ಲಿ ಪೈಲಟ್, ಸಿಬ್ಬಂದಿ ಸೇರಿ ಒಟ್ಟು 242 ಪ್ರಯಾಣಿಕರಿದ್ದರು. ಈ ಪೈಕಿ 241 ಜನ ಸಾವನ್ನಪ್ಪಿದ್ದು, ಓರ್ವ ಪ್ರಯಾಣಿಕ ಪವಾಡ ಸದೃಶವಾಗಿ ಪಾರಾಗಿದ್ದಾರೆ.

# ಜಾತಿ, ಧರ್ಮದ ಪ್ರಮಾಣಪತ್ರ ನೀಡಲು ಅವಕಾಶ ಕೊಡಿ: ಕೋರ್ಟ್

**ಮದ್ರಾಸ್, ಜೂ. 14:** ಅರ್ಜಿದಾರರಿಗೆ ಜಾತಿ ಇಲ್ಲ, ಧರ್ಮ ಇಲ್ಲ ಎಂಬ ಪ್ರಮಾಣಪತ್ರಗಳನ್ನು ನೀಡಲು ಕಂದಾಯ ಅಧಿಕಾರಿಗಳಿಗೆ ಅಧಿಕಾರ ನೀಡುವ ಆದೇಶಗಳನ್ನು ಹೊರಡಿಸುವಂತೆ ಮದ್ರಾಸ್ ಹೈಕೋರ್ಟ್ ತಮಿಳುನಾಡು ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಅರ್ಜಿದಾರರ ಈ ನಿರ್ಧಾರವು ಜಾತಿ ಆಧಾರಿತ ತಾರತಮ್ಯದ ನಿಷೇಧವನ್ನು ಉತ್ತೇಜಿಸುತ್ತದೆ ಎಂದು ಕೋರ್ಟ್ ಹೇಳಿದೆ.



ನ್ಯಾಯಮೂರ್ತಿಗಳಾದ ಎಂ.ಎಸ್. ರಮೇಶ್ ಮತ್ತು ಎನ್. ಸೆಂಥಿಲ್‌ಕುಮಾರ್ ಅವರ ಪೀಠವು ಮಂಗಳವಾರ ಹೊರಡಿಸಿದ ಆದೇಶದಲ್ಲಿ, ಧಾರ್ಮಿಕ ಮತ್ತು ಜಾತಿ ಆಧಾರಿತ ಗುರುತನ್ನು ತ್ಯಜಿಸುವ ವ್ಯಕ್ತಿಯ ಉದ್ದೇಶವು ಶ್ಲಾಘನೀಯ ಎಂದು ಹೇಳಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಫೆಬ್ರವರಿ 2024 ರಲ್ಲಿ ಏಕ ನ್ಯಾಯಾಧೀಶರ ಆದೇಶದ ವಿರುದ್ಧದ ಮೇಲ್ಮನವಿಯನ್ನು ನ್ಯಾಯಾಲಯ ವಿಚಾರಣೆ ನಡೆಸುತ್ತಿತ್ತು. ತಾನು ಮತ್ತು ತನ್ನ ಕುಟುಂಬವು ಯಾವುದೇ ಧರ್ಮ ಅಥವಾ ಜಾತಿಗೆ ಸೇರಿದವರಲ್ಲ ಎಂದು ಹೇಳುವ ಸರ್ಕಾರಿ ಪ್ರಮಾಣಪತ್ರವನ್ನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಏಕ ನ್ಯಾಯಾಧೀಶರು ವಜಾಗೊಳಿಸಿದ್ದರು ಎಂದು ಲೈವ್ ಲಾ ವರದಿ ಮಾಡಿದೆ.

ಆ ವ್ಯಕ್ತಿಯ ವಿನಂತಿಯನ್ನು ಅವರು ಒಪ್ಪಿಕೊಂಡರೂ, ಸರ್ಕಾರವು ತಹಶೀಲ್ದಾರ್‌ಗಳಿಗೆ ಅಂತಹ ಪ್ರಮಾಣಪತ್ರವನ್ನು ನೀಡಲು ಅಧಿಕಾರ ನೀಡಿಲ್ಲ ಎಂದು ನ್ಯಾಯಾಧೀಶರು ಈ ವೇಳೆ ಹೇಳಿದ್ದರು. ಮಂಗಳವಾರ ಈ ಆದೇಶದ ವಿರುದ್ಧ ರಿಟ್ ಮೇಲ್ಮನವಿ ಸಲ್ಲಿಸಲು ಅನುಮತಿ ನೀಡಿದ ಹೈಕೋರ್ಟ್, ಕಂದಾಯ ಅಧಿಕಾರಿಗಳಿಗೆ ಜಾತಿ ಇಲ್ಲ, ಧರ್ಮ ಇಲ್ಲ ಎಂಬ ಪ್ರಮಾಣಪತ್ರಗಳನ್ನು ನೀಡುವ ಅಧಿಕಾರವಿಲ್ಲ ಎಂಬ ಹೆಚ್ಚುವರಿ ಸರ್ಕಾರಿ ವಕೀಲರ ವಾದದಿಂದ ಏಕ ನ್ಯಾಯಾಧೀಶರು ತಪ್ಪುದಾರಿ ಹಿಡಿದಂತೆ ಕಾಣುತ್ತದೆ ಎಂದು ದಿ ಹಿಂದೂ ವರದಿ ಮಾಡಿದೆ.

ಇಲ್ಲದಿದ್ದರೂ ಸಹ, ಸಂವಿಧಾನದ 25ನೇ ವಿಧಿಯ ಅಡಿಯಲ್ಲಿ ಸಾಂವಿಧಾನಿಕ ಆದೇಶವಿದ್ದಾಗ, ಕಂದಾಯ ಅಧಿಕಾರಿಗಳು ಆ ಪರಿಣಾಮಕ್ಕೆ ಯಾವುದೇ ನಿಯಮ ಅಥವಾ ಸರ್ಕಾರಿ ಆದೇಶ ಇಲ್ಲದಿರುವುದನ್ನು ಉಲ್ಲೇಖಿಸುವ ಮೂಲಕ ಈ ಸಾಂವಿಧಾನಿಕ ಬಾಧ್ಯತೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಸುಪ್ರೀಂಕೋರ್ಟ್ ಪೀಠವು ಹೇಳಿದೆ. 25ನೇ ವಿಧಿಯು ಆತ್ಮಸಾಕ್ಷಿಯ ಸ್ವಾತಂತ್ರ್ಯ ಮತ್ತು ಮುಕ್ತ ವೃತ್ತಿ, ಆಚರಣೆ ಮತ್ತು ಧರ್ಮದ ಪ್ರಚಾರವನ್ನು ಖಾತರಿಪಡಿಸುತ್ತದೆ. ನ್ಯಾಯಾಲಯವು ತಿರುಪತ್ತೂರು ಕಲೆಕ್ಟರ್ ಮತ್ತು ತಹಶೀಲ್ದಾರ್ಗೆ ಮೇಲ್ಮನವಿದಾರರಿಗೆ ಒಂದು ತಿಂಗಳೊಳಗೆ ಪ್ರಮಾಣಪತ್ರವನ್ನು ನೀಡುವಂತೆ ನಿರ್ದೇಶಿಸಿತು.

ಭಾರತದಲ್ಲಿ, ಧರ್ಮ ಮತ್ತು ಜಾತಿ ವೈಯಕ್ತಿಕ ಗುರುತಾಗಿದ್ದು, ಇದು ರಾಜಕೀಯ ಮತ್ತು ಸಾಮಾಜಿಕ ಸಂವಹನ ಸೇರಿದಂತೆ ಜೀವನದ ಹಲವಾರು ಅಂಶಗಳ ಮೇಲೆ ಪ್ರಭಾವ ಬೀರುವ ಎರಡು ಸಾಮಾಜಿಕ ಗುರುತಿಸುವಿಕೆಗಳಾಗಿವೆ ಎಂದು ನ್ಯಾಯಮೂರ್ತಿ ಎಂ.ಎಸ್. ರಮೇಶ್ ಹೇಳಿದ್ದಾರೆ. ಸಂವಿಧಾನವು ಜಾತಿ ಆಧಾರಿತ ತಾರತಮ್ಯವನ್ನು ನಿಷೇಧಿಸಿದರೂ, ಜಾತಿ ಮತ್ತು ಧರ್ಮವು ಮೀಸಲಾತಿ ನೀತಿಗಳ ಮೂಲಕ ಸಾಮಾಜಿಕ ಜೀವನ, ರಾಜಕೀಯ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಇನ್ನೂ ಮಹತ್ವದ ಪಾತ್ರವನ್ನು ವಹಿಸುತ್ತದೆ ಎಂದು ಅವರು ಹೇಳಿದ್ದಾರೆ. ಜಾತಿ ಮತ್ತು ಧರ್ಮವನ್ನು ದೂರವಿಡುವ ಮೇಲ್ಮನವಿದಾರರ ಬಯಕೆಯು ಸಮಾನ ಮನಸ್ಕ ನಾಗರಿಕರ ಕಣ್ಣು ತೆರೆಸುತ್ತದೆ ಎಂದಿದ್ದಾರೆ.



### ಪತ್ರಿಕೋದ್ಯಮ ಜನಪರ ಕೆಲಸ ಮಾಡುವುದು ಮುಖ್ಯ: ಬಸವರಾಜ ಬೊಮ್ಮಾಯಿ

# ಖಾದ್ರಿ ಶಾಮಣ್ಣ ಪ್ರಭಾವಶಾಲಿ ಪತ್ರಕರ್ತ: ಬಸವರಾಜ ಬೊಮ್ಮಾಯಿ



**ಬೆಂಗಳೂರು, ಜೂ.14–** ಪತ್ರಿಕೋದ್ಯಮ ಬಹಳ ಪ್ರಭಾವಶಾಲಿ ಉದ್ಯಮ, ಪ್ರಜಾಪ್ರಭುತ್ವದಲ್ಲಿ ಜಾಗೃತವಾಗಿ ಇರುವುದು ಎಷ್ಟು ಮುಖ್ಯವೋ ಜನ ಸಮುದಾಯದ ಪರ ಕೆಲಸ ಮಾಡುವುದು ಅಷ್ಟೇ ಮುಖ್ಯ. ಅದನ್ನು ಪತ್ರಿಕೋದ್ಯಮ ಮಾಡುತ್ತದೆ ಎನ್ನುವ ವಿಶ್ವಾಸ ಇದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟರು.

ಶೇಷಾದ್ರಿಪುರಂ ಕಾಲೇಜಿನಲ್ಲಿ ಖಾದ್ರಿ ಶಾಮಣ್ಣ ಸ್ಮಾರಕ ಟ್ರಸ್ಟ್ ಏರ್ಪಡಿಸಿದ್ದ ಡಾ. ಕೂಡ್ಲಿ ಗುರುರಾಜ ಅವರಿಗೆ ಖಾದ್ರಿ ಶಾಮಣ್ಣ ಪತ್ರಿಕೋದ್ಯಮ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ನನ್ನ ಆತ್ಮೀಯ ಸ್ನೇಹಿತನಿಗೆ ಈ ಪ್ರಶಸ್ತಿ ಸಿಕ್ಕಿರುವುದಕ್ಕೆ ನನಗೆ ಸಂತೋಷವಾಗಿದೆ. ನಾನು ಖಾದ್ರಿ ಶಾಮಣ್ಣ ಅವರನ್ನು 1978 ರಲ್ಲಿ ನೋಡಿದ್ದೆ ಆಗ ತುರ್ತುಪರಿಸ್ಥಿತಿ ಮುಗಿದಿತ್ತು. ಇಡಿ ವಿಶ್ವದಲ್ಲಿ ವೈಎನ್‌ಕೆ ಅವರ ಹೆಸರಿತ್ತು. ಕರ್ನಾಟಕದಲ್ಲಿ ಎಮರ್ಜೆನ್ಸಿ ವಿರುದ್ದ ಸಿಡಿದೆದ್ದ ವ್ಯಕ್ತಿ ಖಾದ್ರಿ ಶಾಮಣ್ಣ ಅವರು, ಪತ್ರಿಕೋದ್ಯಮ ಬಹಳ ಪ್ರಭಾವಶಾಲಿ ಉದ್ಯಮ, ಪ್ರಜಾಪ್ರಭುತ್ವದಲ್ಲಿ ಜಾಗೃತವಾಗಿ ಇರುವುದು ಎಷ್ಟು ಮುಖ್ಯವೋ ಜನ ಸಮುದಾಯದ ಪರ ಇರುವ ಕೆಲಸ ಮಾಡುವುದು ಅಷ್ಟೇ ಮುಖ್ಯ. ಅದನ್ನು ಪತ್ರಿಕೋದ್ಯಮ ಮಾಡುತ್ತದೆ ಎನ್ನುವ ವಿಶ್ವಾಸ ಎಂದು ಹೇಳಿದರು.

ಖಾದ್ರಿ ಶಾಮಣ್ಣ ಅವರು ಬಹಳ ಪ್ರಭಾವಶಾಲಿ ಆಗಿದ್ದರು. ಅವರು ಬದುಕಿದ್ದಾಗ ಮುಂದೆ ಬರುವ ಸರ್ಕಾರಗಳು ಅವರ ಅಭಿಪ್ರಾಯ ಪಡೆದು ತೀರ್ಮಾನ ತೆಗೆದು ಕೊಳ್ಳುತ್ತಿದ್ದರು. ಪತ್ರಿಕೋದ್ಯಮ ಬಹಳ ಕ್ಲೀಷ್ಟವಾಗಿರುತ್ತದೆ ಕೆಲವು ಸಾರಿ ಪರ ಮತ್ತು ವಿರೋಧ ಅಭಿಪ್ರಾಯಗಳು ಬಂದಾಗ ಸತ್ಯದ ಮೇಲೆ ನಿಲುವು ತೆಗೆದುಕೊಂಡಾಗ ಅದಕ್ಕೆ ಮಹತ್ವ ಬರುತ್ತದೆ. ಕೆಲವು ಸಾರಿ ತಾವು ತೆಗೆದುಕೊಂಡ ನಿಲುವಿನ ವಿರುದ್ಧ ತೆಗೆದುಕೊಳ್ಳುವ ಸಂದರ್ಭ ಬರಬಹುದು ಆಗ ಸ್ಪಷ್ಟವಾಗಿ ಗಟ್ಟಿಯಾಗಿ ನಿಲುವು ತೆಗೆದುಕೊಳ್ಳಬೇಕು. ಖಾದ್ರಿ ಶಾಮಣ್ಣ ಅಂತಹ ಸ್ಪಷ್ಟ ನಿಲುವು ತೆಗೆದು ಕೊಳ್ಳುತ್ತಿದ್ದರು. ಅಂತಹವರ ಗರಡಿಯಲ್ಲಿ ಕೂಡ್ಲಿ ಗುರುರಾಜ್ ಬೆಳೆದಿದ್ದಾರೆ.

ಹುಬ್ಬಳ್ಳಿಯಲ್ಲಿ ಕನ್ನಡ ಪ್ರಭದಲ್ಲಿ ಇವರು ಇದ್ದಾಗ ಅವರ ಲೇಖನಗಳನ್ನು ಓದಿದ್ದೆ. 1998 ರಲ್ಲಿ ನಾನು ಸ್ಥಳಿಯ ಸಂಸ್ಥೆಯಿಂದ ಚುನಾವಣೆ ನಿಂತಿದ್ದೆ, ನಮ್ಮ ಪಕ್ಷದಲ್ಲಿ ಬಂಡಾಯ ಅಭ್ಯರ್ಥಿ ನಿಂತಿದ್ದರು. ಆಗ ಎಲ್ಲ ಪತ್ರಿಕೆಯವರು 24 ದಿನ ನನ್ನ ವಿರುದ್ದ ಬರೆದಿದ್ದರು. ಒಬ್ಬರು ಪತ್ರಕರ್ತೆ ಸನ್ ಆಸ್ ಗೋಯಿಂಗ್ ಟು ಸೆಟ್ ಅಂತ ಬರೆದಿದ್ದರು. ಆದರೆ, ನಾನು ಅತಿ ಹೆಚ್ಚು ಮತಗಳಿಂದ ಗೆಲುವು ಸಾಧಿಸಿದ್ದೆ ಎಂದು ನೆನಪಿಸಿ ಕೊಂಡರು.


ಪತ್ರಕರ್ತರು ಮತ್ತು ರಾಜಕಾರಣಿಗಳ ನಡುವೆ ಅವಿನಾಭಾವ ಸಂಬಂಧ. ರಾಜಕೀಯ ಸುದ್ದಿ ಇಲ್ಲದೆ ಇದ್ದರೆ ಪತ್ರಿಕೆ ಆಕರ್ಷಣೆ ಇರುವುದಿಲ್ಲ. ಅದೇ ರೀತಿ ರಾಜಕಾರಣಿಯ ಸುದ್ದಿಗಳು ಪತ್ರಿಕೆಯಲ್ಲಿ ಬರದಿದ್ದರೇ ಆ ರಾಜಕಾರಣಿಗೆ ಅಸ್ತಿತ್ವವೇ ಇಲ್ಲ.

ನನಗೆ ಮದನ ಮೋಹನ್ ಅವರು ಮಾರ್ಗದರ್ಶನ ಮಾಡಿದ್ದರು. ಅವರ ಮಾರ್ಗದರ್ಶನದಿಂದ ವಿಧಾನಸಭೆ, ವಿಧಾನ ಪರಿಷತ್ತಿನಲ್ಲಿ ಚರ್ಚೆ ಮಾಡಿದ್ದೆ. ರಾಮಕೃಷ್ಣ ಹೆಗಡೆ ಅವರು ಮದನ ಮೋಹನ್ ಅವರು ಪತ್ರಿಕಾಗೋಷ್ಠಿಯಲ್ಲಿ ಇದ್ದಾರಾ ಅಂತ ಕೇಳುತ್ತಿದ್ದರು. ಅವರ ಬಗ್ಗೆ ರಾಜಕಾರಣಿಗಳಿಗೆ ಭಯ ಇತ್ತು ಎಂದರು.

ರಾಜಕಾರಣಿಗಳನ್ನು ಹುರುದುಂಬಿಸುವ ಕೆಲಸವನ್ನು ಪತ್ರಕರ್ತರು ಮಾಡುತ್ತಾರೆ. ನಮ್ಮ ಸರ್ಕಾರ ಬದಲಾಗುವ ಬಗ್ಗೆ ಚರ್ಚೆ ನಡೆಯುತ್ತಿತ್ತು.

ಆಗ ನಾನು ದೆಹಲಿಯಲ್ಲಿ ಕೇಂದ್ರದಿಂದ ಏಳು ನೀರಾವರಿ ಯೋಜನೆಗಳಿಗೆ ಅನುಮತಿ ಪಡೆದಿದ್ದೆ, ಅದನ್ನು ಉಮಾಪತಿಯವರು ಸರ್ಕಾರ ಬೀಳುವ ಸಂದರ್ಭದಲ್ಲಿಯೂ ಈ ಸಚಿವರು ನೀರಾವರಿ ಯೋಜನೆಗಳಿಗೆ ಅನುಮತಿ ಪಡೆದಿದ್ದಾರೆ ಎಂದು ವಿಶ್ಲೇಷಣಾತ್ಮಕ ಲೇಖನ ಬರೆದಿದ್ದರು. ಒಳ್ಳೆಯ ಕೆಲಸ ಮಾಡಿದರೆ ಪತ್ರಿಕೆಯವರು ಗುರುತಿಸುತ್ತಾರೆ ಎಂದು ಅನಿಸಿತು. ತುಂಗಭದ್ರ ಯೋಜನೆ ಕುರಿತು ವಿಜಯ ಕರ್ನಾಟಕ ಒಂದು ಲೇಖನ ಬರೆದಿತ್ತು. ಅದು ನನಗೆ ಸ್ಫೂರ್ತಿಯಾಯಿತು. ಅದರಿಂದ ತುಂಗಭದ್ರಾ ಕಾಲುವೆ ಯೋಜನೆ ಜಾರಿಗೊಳಿಸಲು ಅನುಕೂಲವಾಯಿತು ಎಂದು ಹೇಳಿದರು.

**ಯೋಗ್ಯರಿಗೆ ಪ್ರಶಸ್ತಿ:** ಗುರುರಾಜ್ ಅವರು ಉತ್ತರ ಕರ್ನಾಟಕದ ಬಗ್ಗೆ ಸಾಕಷ್ಟು ಲೇಖನಗಳನ್ನು ಬರೆದಿದ್ದಾರೆ. ಅವರು ಎಲ್ಲಿಯೂ ಹೇಳಿಕೊಳ್ಳುವುದಿಲ್ಲ. ಅವರ ನಿಷ್ಠೆ ಮತ್ತು ಪ್ರಾಮಾಣಿಕತೆಗೆ ಯೋಗ್ಯ ಪ್ರಶಸ್ತಿ ದೊರೆತಿದೆ. ಅವರಿಗೆ ಅಭಿನಂದನೆ. ಅವರು ನನ್ನಿಂದ ಪ್ರಶಸ್ತಿ ಸ್ವೀಕರಿಸುವ ಆಸೆ ವ್ಯಕ್ತಪಡಿಸಿರುವುದು ನನ್ನ ಮನದಲ್ಲಿ ಯಾವಾಗಲೂ ಉಳಿಯುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗಾಂಧಿ ಭವನದ ಅಧ್ಯಕ್ಷರಾದ ವೂಡೇ ಪಿ. ಕೃಷ್ಣ, ಆಸ್ಸಾಂ ಕೇಂದ್ರಿಯ ವಿವಿ ನಿವೃತ್ತ ಸಮ ಕುಲಪತಿ ಪ್ರೊ. ಕೆ.ವಿ. ನಾಗರಾಜ, ಜಾನಪದ ವಿದ್ವಾಂಸ ಮೀರಾಸಾಬಿಹಳ್ಳಿ ಶಿವಣ್ಣ, ಕೂಡ್ಲಿ ಗುರುರಾಜ್ ಹಾಗೂ ಖಾದ್ರಿ ಶಾಮಣ್ಣ ಸ್ಮಾರಕ ಟ್ರಸ್ಟ್‌ನ ಅಧ್ಯಕ್ಷ ಎಚ್. ಆರ್. ಶ್ರೀಶ ಹಾಗೂ ವಿವಿಧ ಹಿರಿಯ ಪತ್ರಕರ್ತರು ಹಾಜರಿದ್ದರು.



ನೀಟ್ ಯುಜಿ 2025 ಫಲಿತಾಂಶ: ಮಂಗಳೂರಿನ ಎಕ್ಸ್‌ಪರ್ಟ್ ಪಿಯು ಕಾಲೇಜಿನ ವಿದ್ಯಾರ್ಥಿ ನಿಖಿಲ್ ಸೊನ್ನದ ಅಖಿಲ ಭಾರತ ಮಟ್ಟದಲ್ಲಿ 17 ನೇ ರ್‍ಯಾಂಕ್ ಮತ್ತು ರಾಜ್ಯದಲ್ಲಿ ಪ್ರಥಮ ರ್‍ಯಾಂಕ್‌ಗಳಿಸಿದ್ದಾರೆ. ಉತ್ತರ ಕರ್ನಾಟಕದ ವಿಜಯಪುರದ ವೈದ್ಯ ದಂಪತಿಗಳ ಪುತ್ರ ನಿಖಿಲ್ 99.99% ಅಂಕಗಳನ್ನು ಗಳಿಸಿದ್ದಾರೆ.

## ಪ್ರತ್ಯೇಕ ಜಾತಿಗಣತಿ ಬೇಡ, ಕೆಲ ಜಾತಿಗಳನ್ನು ತುಳಿಯುವ ಕೆಲಸ ಮಾಡುತ್ತಿದೆ: ನಿಖಿಲ್ ಕುಮಾರಸ್ವಾಮಿ




**ಬೆಂಗಳೂರು, ಜೂ.14–** ಕೇಂದ್ರ ಸರ್ಕಾರ ಜಾತಿಗಣತಿ ಸಮೀಕ್ಷೆ ಮಾಡುವುದಾಗಿ ಘೋಷಣೆ ಮಾಡಿದ್ದು, ಹೀಗಿರುವಾಗ ರಾಜ್ಯ ಸರ್ಕಾರ ಯಾಕೆ ಜಾತಿಗಣತಿ ಮಾಡಬೇಕು. ತಮ್ಮ ಲಾಭಕ್ಕಾಗಿ ಸರ್ಕಾರ ಜಾತಿಗಣತಿ ಮಾಡಲು ಮುಂದಾಗಿದೆ ಮತ್ತೊಂದು ಜಾತಿಗಣತಿ ಮಾಡುವ ಅವಶ್ಯಕತೆ ಇಲ್ಲ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು ; ಜಾತಿ ಗಣತಿಗೆ 180 ಕೋಟಿ ರೂ. ಖರ್ಚು ಮಾಡಲಾಗಿದೆ. ಮತ್ತೆ ಜಾತಿಗಣತಿ ಮಾಡಿದರೆ ಮತ್ತೆ ಜನರ ತೆರಿಗೆ ಹಣ ಖರ್ಚು ಆಗುತ್ತದೆ. ಎಷ್ಟೇ ಹಣ ಖರ್ಚು ಮಾಡಿದರೂ ಜಾತಿಗಣತಿಯನ್ನು ಸರಿಯಾದ ರೀತಿಯಲ್ಲಿ ಮಾಡುವುದಿಲ್ಲ ಎಂದರು.

ನಿಮ್ಮ ರಾಜಕೀಯ ಲಾಭಕ್ಕಾಗಿ ಜಾತಿಗಣತಿ ಘೋಷಣೆ ಇದು. ಕೆಲ ಸಮುದಾಯಗಳನ್ನು ಎತ್ತಿ ಕಟ್ಟಿ ಕೆಲವು ಜಾತಿಗಳನ್ನು ಕೆಳಗೆ ತುಳಿಯೋ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿದೆ. ಜಾತಿಗಣತಿ ಮಾಡೋದು ಬೇಡ. ಇಲ್ಲಿ ಯಾರದ್ದು ಸಾಮಾಜಿಕ, ಆರ್ಥಿಕ ಅಭಿವೃದ್ಧಿ ಆಗುತ್ತಿಲ್ಲ. ಇಲ್ಲಿ ಆಗುತ್ತಿರುವುದು ರಾಜಕೀಯ. 1971 ರಲ್ಲಿ ಜಾತಿಗಣತಿ ಆಯ್ತು, ಅಲ್ಲಿಂದ ಇಲ್ಲಿಯವರೆಗೆ ಮಾಡಿಲ್ಲ. ಕೇಂದ್ರ ಸರ್ಕಾರ ಈಗ ಮಾಡುತ್ತಿದೆ. 10 ವರ್ಷಗಳ ಹಿಂದೆ ಮಾಡಿರುವ ಕಾಂತರಾಜು ವರದಿ ಮೇಲೆ ಜನರಿಗೆ ವಿಶ್ವಾಸ ಇದೆ. ಕೇಂದ್ರ ನಾಯಕರಿಗೆ ಮತ್ತು ರಾಹುಲ್ ಗಾಂಧಿಗೆ ಕಾಂತರಾಜು ವರದಿ ಮೇಲೆ ನಂಬಿಕೆ ಇಲ್ಲ. ಈ ಬಗ್ಗೆ ಚರ್ಚೆ ಮಾಡಿದಾಗ ರಾಹುಲ್ ಗಾಂಧಿ ಹೇಳಿದ ಮೇಲೆ ರಾಜ್ಯ ಸರ್ಕಾರ ಉಲ್ಟಾ ಹೊಡೆದಿದೆ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು.

ಜಾತಿ ಗಣತಿ ಯಿಂದ ಸಾಮಾಜಿಕ ಆರ್ಥಿಕ, ಶೈಕ್ಷಣಿಕವಾಗಿ ಅವರನ್ನ ಮೇಲೆ ಎತ್ತುವ ಕೆಲಸ ಆಗಬೇಕು. ಒಳ್ಳೆಯದು ಉದ್ದೇಶದಿಂದ ಮಾಡಬೇಕು. ವೈಜ್ಞಾನಿಕ ಸರ್ವೇ ಮಾಡುವ ಅವಕಾಶ ಇದೆ ಎಂದು ಅವರು ತಿಳಿಸಿದರು.

ರಾಜ್ಯಕ್ಕೆ ಅನುದಾನ ಕೊರತೆಯಾಗಿದ್ದರೆ ಸಿಎಂ ಸಿದ್ದರಾಮಯ್ಯ ಅವರು ಪ್ರಧಾನಿಗಳ ಬಳಿ ಕೂತು ಚರ್ಚೆ ಮಾಡಲಿ ಎಂದು ನಿಖಿಲ್ ಕುಮಾರಸ್ವಾಮಿ ಸಲಹೆ ನೀಡಿದರು.

## ಜಿವಿಕೆ ಸಂಸ್ಥೆಯಿಂದ ಕುಟುಂಬ ಕಲ್ಯಾಣ ಇಲಾಖೆಯ ತೆಕ್ಕೆಗೆ ಆರೋಗ್ಯ ಕವಚ ಸೇವೆ: ದಿನೇಶ್ ಗುಂಡೂರಾವ್



**ಬೆಂಗಳೂರು, ಜೂ.14–** 108 ಆರೋಗ್ಯ ಕವಚ ಸೇವೆಯನ್ನು ಜಿವಿಕೆ ಸಂಸ್ಥೆಯಿಂದ ಹಿಂಪಡೆದು ರಾಜ್ಯ ಸರ್ಕಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತೆಕ್ಕೆಗೆ ನೀಡಿದೆ. ಇನ್ಮುಂದೆ 108 ಅಂಬುಲೆನ್ಸ್ ಸೇವೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನಿರ್ವಹಿಸಲಿದೆ. ರಾಜ್ಯದಲ್ಲಿ 108 ಅಂಬುಲೆನ್ಸ್ ಸೇವೆಯನ್ನು ಉತ್ತಮಗೊಳಿಸುವ ಉದ್ದೇಶದಿಂದ ಈ ಸೇವೆಯನ್ನು ನಿಯಂತ್ರಿಸುವ ಕಮಾಂಡ್ ಕಂಟ್ರೋಲ್ ಕೇಂದ್ರವನ್ನು ಆರೋಗ್ಯ ಇಲಾಖೆಯ ಅಧೀನಕ್ಕೆ ವಹಿಸಲಾಗಿದೆ.

ರಾಜ್ಯದಲ್ಲಿ 108 ಅಂಬುಲೆನ್ಸ್ ಅನ್ನು ಆರೋಗ್ಯ ಇಲಾಖೆಯೇ ನಿರ್ವಹಣೆ ಮಾಡುವುದರಿಂದ ರಾಜ್ಯ ಸರ್ಕಾರದ ಬೊಕ್ಕಸಕ್ಕೆ 250 ಕೋಟಿ ರೂ. ಉಳಿತಾಯವಾಗಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಅಂಬುಲೆನ್ಸ್ ಸೇವೆಯನ್ನು ಖಾಸಗಿ ಹಿಡಿತದಿಂದ ಮುಕ್ತಗೊಳಿಸಿ ಇದನ್ನು ನಿಯಂತ್ರಿಸುವ ಕಮಾಂಡ್ ಕಂಟ್ರೋಲ್ ಕೇಂದ್ರವನ್ನು ಇಲಾಖೆಯ ಅಧೀನಕ್ಕೆ ಒಳಪಡಿಸುವ ಪ್ರಸ್ತಾವನೆಗೆ ಸರ್ಕಾರ ಅನುಮೋದನೆ ನೀಡಿದೆ. ಈ ಕ್ರಮದಿಂದ 108 ಆರೋಗ್ಯ ಕವಚ ಸೇವೆಯಲ್ಲಿ ಸಾಕಷ್ಟು ಸುಧಾರಣೆ ಆಗುವ ವಿಶ್ವಾಸವಿದೆ ಎಂದು ಗುಂಡೂರಾವ್ ತಿಳಿಸಿದ್ದಾರೆ.

## ಬಸ್‌ಚಾಲಕನನ್ನು ಥಳಿಸಿದ ಸಾಫ್ಟ್‌ವೇರ್ ಇಂಜಿನಿಯರ್

**ಬೆಂಗಳೂರು, ಜೂ.14–** ಬಸ್ ಚಾಲಕ ತನ್ನ ಕಚೇರಿ ಬಳಿ ಬಸ್ ನಿಲ್ಲಿಸಿಲ್ಲ ಎಂಬ ಕಾರಣಕ್ಕೆ ಕೋಪಗೊಂಡ ಮಹಿಳೆ ಚಪ್ಪಲಿಯಿಂದ ಬಸ್‌ಚಾಲಕನನ್ನು ಥಳಿಸಿದ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಟಿನ್ ಫ್ಯಾಕ್ಟರಿಯಿಂದ ಎಲೆಕ್ಟ್ರಾನಿಕ್ ಸಿಟಿಗೆ ಬಸ್ ತೆರಳುತ್ತಿತ್ತು. ಬಸ್ ಸರ್ಜಾಪುರ ರಸ್ತೆಯ ಕೈಕೊಂಡರಹಳ್ಳಿ ಬಳಿ ತಲುಪಿದಾಗ ಖಾಸಗಿ ಕಂಪನಿಯಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದ ಮಹಿಳಾ ಪ್ರಯಾಣಿಕಿ ಕಾವ್ಯಾ, ಬಸ್ ನಿಲುಗಡೆ ಇಲ್ಲದಿದ್ದರೂ ತನ್ನ ಕಚೇರಿ ಬಳಿ ಬಸ್ ನಿಲ್ಲಿಸುವಂತೆ ಹೇಳಿದ್ದಾರೆ. ಆದರೆ ಟ್ರಾಫಿಕ್‌ನಿಂದಾಗಿ ಬಸ್ ಚಾಲಕ ಅಲ್ಲಿ ಬಸ್ ನಿಲ್ಲಿಸದೇ ಮುಂದೆ ಹೋಗಿದ್ದಾರೆ. ಇಷ್ಟಕ್ಕೆ ಕಿರುಚಾಡಿ, ಗಲಾಟೆ ಮಾಡಿದ ಮಹಿಳೆ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ತನ್ನ ಚಪ್ಪಲಿ ತೆಗೆದು ಚಾಲಕನಿಗೆ ಬಾರಿಸಿದ್ದಾರೆಂಬ ಆರೋಪ ಜೂನ್ 11ರಂದು ಬೆಳಿಗ್ಗೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಈ ಬಗ್ಗೆ ಚಾಲಕ ಬೆಳ್ಳಂದೂರು ಠಾಣೆಯಲ್ಲಿ ದೂರು ನೀಡಿದ್ದಾರೆ.

## ತುಮಕೂರಿಗೆ ಬೆಂಗಳೂರು ಉತ್ತರ ಮರು ನಾಮಕರಣಕ್ಕೆ ವಿರೋಧ: ಸುರೇಶ್ ಗೌಡ



**ಬೆಂಗಳೂರು ಜೂ.14–** ಇತ್ತೀಚೆಗೆ ರಾಮನಗರ ಜಿಲ್ಲೆಗೆ ಬೆಂಗಳೂರು ದಕ್ಷಿಣ ಅಂತ ಮರುನಾಮಕರಣ ಮಾಡಲಾಯಿತು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರಾಮನಗರಕ್ಕೆ ಬೆಂಗಳೂರು ದಕ್ಷಿಣ ಮರುನಾಮಕರ ಮಾಡಿದ್ದಾರೆ. ಈ ಬೆನ್ನಲ್ಲೇ ಗೃಹ ಸಚಿವ ಜಿ. ಪರಮೇಶ್ವರ್ ಅವರು ತಮಕೂರಿಗೆ ಬೆಂಗಳೂರು ಉತ್ತರ ಎಂದು ಮರುನಾಮಕರಣ ಮಾಡಲು ಮುಂದಾಗಿದ್ದಾರೆ. ಆದರೆ, ತುಮಕೂರಿಗೆ ಬೆಂಗಳೂರು ಉತ್ತರ ಮರುನಾಮಕರಣಕ್ಕೆ ವಿರೋಧ ವ್ಯಕ್ತವಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ಕಲ್ಪತರು ನಾಡು ತುಮಕೂರಿಗೆ ಬೆಂಗಳೂರು ಉತ್ತರ ಎಂದು ಮರುನಾಮಕರಣ ಮಾಡಬೇಕೆಂದು ಮಾಧ್ಯಮಗಳ ಮುಂದೆ ಹೇಳಿದ್ದರು. ಗೃಹ ಸಚಿವರ ಹೇಳಿಕೆಗೆ ವಿರೋಧ ವ್ಯಕ್ತವಾಗಿದ್ದು, ಇದು ರಿಯಲ್ ಎಸ್ಟೇಟ್ ಮಾಫಿಯಾ ಮಾಡುವ ಕೆಲಸ ಅಂತ ತುಮಕೂರು ಗ್ರಾಮಾಂತರ ಶಾಸಕ ಸುರೇಶ್ ಗೌಡ ಆರೋಪಿಸಿದ್ದಾರೆ. ತುಮಕೂರಿಗೆ ಬೆಂಗಳೂರು ಉತ್ತರ ಎಂದು ಮರುನಾಮಕರಣ ಮಾಡಲು ನಾವು ಬಿಡುವುದಿಲ್ಲ ಎಂದು ಸುರೇಶ್ ಗೌಡ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ತುಮಕೂರಿಗೆ ಅದರದ್ದೇ ಆದ ಇತಿಹಾಸವಿದೆ. ತಮಕೂರಿಗೆ ಬೆಂಗಳೂರು ಉತ್ತರ ಅಂತ ಮರುನಾಮಕರಣ ಮಾಡುವುದು ಸರಿಯಲ್ಲ. ಇಲ್ಲಿ ಭೂಮಿ ನೀಡದ ಕಾರಣ ಕೈಗಾರಿಕೆಗಳು ನೆರೆ ರಾಜ್ಯಗಳಿಗೆ ಹೊಗುತ್ತಿವೆ. ಈ ನಡುವೆ ಬೆಂಗಳೂರು ಉತ್ತರ ಅಂದ ತಕ್ಷಣ ಇಲ್ಲಿ ಬಂದು ಹೂಡಿಕೆ ಮಾಡಲು ಜನ ಮೂರ್ಖರಲ್ಲ. ಜೊತೆಗೆ ತುಮಕೂರಿನ ಕೆಲ ಹೊರಾಟಗಾರರು ಸಹ ಈ ಪ್ರಸ್ತಾಪಕ್ಕೆ ವಿರೋಧ ವ್ಯಕ್ತಪಡಿಸಿದ್ದು, ಬ್ರ್ಯಾಂಡ್ ಬೆಂಗಳೂರಿಗೆ ತುಮಕೂರು ಸೇರಿಸುವ ಬದಲು ತುಮಕೂರನ್ನೇ ಬ್ರ್ಯಾಂಡ್ ಮಾಡಿ. ಯಾವುದೇ ಕಾರಣಕ್ಕೂ ಈ ನಿರ್ಧಾರ ಒಪ್ಪುವಂತದಲ್ಲ. ಇದಕ್ಕೆ ವಿರೋಧವಿದೆ ಎಂದರು. ಇನ್ನು ವಿದೇಶದಲ್ಲಿರುವವರಿಗೆ ತುಮಕೂರು ಬದಲಿಗೆ ಬೆಂಗಳೂರು ಉತ್ತರ ಎಂದರೆ ತುಂಬಾ ವ್ಯತ್ಯಾಸವಿರುತ್ತೆ ಎಂಬ ಗೃಹ ಸಚಿವರ ಹೇಳಿಕೆಗೆ ತಿರುಗೇಟು ಕೊಟ್ಟ ಶಾಸಕ ಸುರೇಶ್, ಇಡೀ ಕರ್ನಾಟಕವನ್ನೇ ಬೆಂಗಳೂರು ಎಂದು ನಾಮಕರಣ ಮಾಡಿ ಘೋಷಿಸಿ. ಕರ್ನಾಟಕ ಹೆಸರೇ ಬದಲಾಯಿಸಿಬಿಟ್ಟರೆ ಎಲ್ಲವೂ ಬೆಂಗಳೂರೆಂದೇ ಆಗಿಬಿಡತ್ತೆ ಅಂತ ಕೌಂಟರ್ ಕೊಟ್ಟರು.

## ಮುಂಗಾರು ಮಳೆ ಆರ್ಭಟ ಹೆಚ್ಚಳ

**ಬೆಂಗಳೂರು, ಜೂ.14–** ರಾಜ್ಯದಲ್ಲಿ ಮುಂಗಾರು ಮಳೆ ಆರ್ಭಟ ಮುಂದುವರಿದಿದೆ. ನೈಋತ್ಯ ಮುಂಗಾರಿನ ಆರ್ಭಟ ಇಂದಿನಿಂದ ಮುಂದಿನ ಮೂರು ದಿನಗಳ ಕಾಲ ಮುಂದುವರಿಯಲಿದೆ. ಗರಿಷ್ಠ 200 ಮಿಲಿ ಮೀಟರ್‌ಗೂ ಹೆಚ್ಚಿನ ಮಳೆ ನೀರಿಕೆ ಇದೆ ಎಂದು ಮುನ್ಸೂಚನೆ ನೀಡಿರುವ ಭಾರತೀಯ ಹವಾಮಾನ ಇಲಾಖೆ ಬೆಂಗಳೂರು ಕೇಂದ್ರವು 09 ಜಿಲ್ಲೆಗಳಿಗೆ ಭಾರೀ ಮಳೆ ಪ್ರಯುಕ್ತ 'ರೆಡ್ ಅಲರ್ಟ್' ಘೋಷಿಸಿದೆ.

ಚಂಡಮಾರುತ ಪ್ರಸರಣ, ವಾಯುಭಾರ ಕುಸಿತದ ಪ್ರಭಾವಗಳಿಂದ ಕಳೆದ ಐದಾರು ದಿನಗಳಿಂದ ಕರ್ನಾಟಕದ ನಾನಾ ಕಡೆಗಳಲ್ಲಿ ಸಾಧಾರಣದಿಂದ ಭಾರೀ ಮಳೆ ಆಗುತ್ತಿದೆ. ಕರಾವಳಿ ಹಾಗೂ ಕಲ್ಯಾಣ ಕರ್ನಾಟಕ, ಉತ್ತರ ಕರ್ನಾಟಕದ ಭಾಗದಲ್ಲಿ ರಣಭೀಕರ ಮಳೆಗೆ ಪ್ರವಾಹ ಸ್ಥಿತಿ ಉಂಟಾಗಿದೆ. ಮುನ್ಸೂಚನೆ ನೋಡಿದರೆ ಈ ಪ್ರವಾಹ ಸ್ಥಿತಿ ಇನ್ನು ಮೂರು ದಿನ ಮುಂದುವರಿಯುವ ಸಾಧ್ಯತೆ ಇದೆ. ಏಕೆಂದರೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ರಣಭೀಕರ ಮಳೆ ಮೂರು ದಿನ ಮುಂದುವರಿಯಲಿದೆ. ಮೈಸೂರಿಗೆ ಒಂದು ದಿನ ಭಾರೀ ಮಳೆ ಹಿನ್ನೆಲೆ 'ಆರೆಂಜ್ ಅಲರ್ಟ್' ಘೋಷಣೆ ಆಗಿದೆ ಎಂದು ಐಎಂಡಿ ಹವಾಮಾನ ತಜ್ಞರು ಮಾಹಿತಿ ನೀಡಿದ್ದಾರೆ.

ಸದ್ಯ ವಾಯುಭಾರ ಕುಸಿತವು ನೈಋತ್ಯ ತೆಲಂಗಾಣ ಹಾಗೂ ಅದರ ನೆರೆಹೊರೆಗಳಲ್ಲಿ, ಉತ್ತರ ಒಳನಾಡು ಕರ್ನಾಟಕ ಮತ್ತು ಪಕ್ಕದ ತೆಲಂಗಾಣ ಮತ್ತು ರಾಯಲಸೀಮಾ ಮೇಲಿದೆ. ಅದು ಸಮುದ್ರ ಮಟ್ಟದಿಂದ 5.8 ಕಿ.ಮೀ. ಎತ್ತರದಲ್ಲಿದೆ.* ಮಧ್ಯ ಅರಬ್ಬಿ ಸಮುದ್ರದಿಂದ ದಕ್ಷಿಣ ಕರಾವಳಿ ಒಡಿಶಾದವರೆಗೆ ತೆಲಂಗಾಣ ಮತ್ತು ರಾಯಲಸೀಮಾಕ್ಕವರೆಗೆ ಉತ್ತರ ಒಳನಾಡು ಕರ್ನಾಟಕದ ಮೇಲೆ ಮತ್ತು ಸಮುದ್ರ ಮಟ್ಟದಿಂದ 3.1 ಕಿ.ಮೀ. ಎತ್ತರದಲ್ಲಿ ಮೇಲ್ಮಟ್ಟದಲ್ಲಿ ವಾಯುಭಾರ ಕುಸಿತ ಏರ್ಪಟ್ಟಿದೆ. ಈ ಕಾರಣದಿಂದಾಗಿ ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಮಳೆ ಆರ್ಭಟಿಸುತ್ತಿದೆ ಎಂದು ಹವಾಮಾನ ಕೇಂದ್ರ ಬುಲೆಟಿನ್‌ನಲ್ಲಿ ತಿಳಿಸಿದೆ.

### ಕುವೆಂಪು-ಪುಷ್ಕಿನ್ ಸಾಹಿತ್ಯೋತ್ಸವದೊಂದಿಗೆ

## ಬೆಂಗಳೂರು ಸಿಟಿ ಯೂನಿವರ್ಸಿಟಿಯಲ್ಲಿ ರಷ್ಯನ್ ಭಾಷಾ ಕೇಂದ್ರ ಉದ್ಘಾಟನೆ



**ಬೆಂಗಳೂರು, ಜೂ.14–** ಬೆಂಗಳೂರು ನಗರ ವಿಶ್ವವಿದ್ಯಾಲಯ ಜಾಗತಿಕ ಭಾಷೆಗಳ ಕೇಂದ್ರವು ವಿಶ್ವವಿದ್ಯಾನಿಲಯದ ಹೊಸ ಅಕಾಡೆಮಿಕ್ ಬ್ಲಾಕ್‌ನಲ್ಲಿ ರಷ್ಯನ್ ಭಾಷಾ ಕೇಂದ್ರದ ಉದ್ಘಾಟನೆಯನ್ನು ಮಾಡಲಾಯಿತು.

ಈ ಕಾರ್ಯಕ್ರಮವು ಜಾಗತಿಕ ಭಾಷೆಗಳ ಕೇಂದ್ರದ 40ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದು ಕುವೆಂಪು ಪುಷ್ಕಿನ್ ಸಾಹಿತ್ಯೋತ್ಸವದ ಮೂಲಕ ಆಚರಿಸಲಾಯಿತು.

ವಿಶ್ವವಿದ್ಯಾಲಯದ ಕುಲ ಸಚಿವರಾದ ಪ್ರೊ. ರಮೇಶ್ ಅವರು ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದರು. ಅವರು ವಿದೇಶಿ ಭಾಷಾ ಶಿಕ್ಷಣದ, ವಿಶೇಷವಾಗಿ ರಷ್ಯನ್ ಭಾಷೆಯ ಮಹತ್ವದ ಬಗ್ಗೆ ಮಾತನಾಡುತ್ತಾ, ಅದು ಸಾಂಸ್ಕೃತಿಕ ಅರ್ಥವಂತಿಕೆಯನ್ನು ನೀಡು ವುದು,ವ್ಯಾಪಾರ ಸಂಬಂಧ ಗಳನ್ನು ಬಲಪಡಿಸುವುದು ಮತ್ತು ಸಾಹಿತ್ಯದ ಬೆಳವಣಿಗೆಗೆ ಸಹಕಾರಿ ಯಾಗುವುದು ಎಂದು ಒತ್ತಿ ಹೇಳಿದರು.

ರಷ್ಯನ್ ಹೌಸ್ ನವದೆಹಲಿಯ ನಿರ್ದೇಶಕಿ ಡಾ. ಈ. ಎಸ್. ರೆಮಿಜೋವಾ ಅವರು ಮಾತನಾಡುತ್ತಾ, ರಷ್ಯನ್ ಕೌನ್ಸಿಲ್ ಭಾರತದಲ್ಲಿ ತನ್ನ 60ನೇ ವರ್ಷವನ್ನು ಆಚರಿಸುತ್ತಿದೆ ಎಂದು ತಿಳಿಸಿದ್ದಾರೆ. ಅವರು ಬೆಂಗಳೂರು ಸಿಟಿ ಯೂನಿವರ್ಸಿಟಿಯ ರಷ್ಯನ್ ಭಾಷಾ ಕೇಂದ್ರವು ದಕ್ಷಿಣ ಭಾರತದ ಏಕೈಕ ಕೇಂದ್ರವಾಗಿದೆ.

ಈ ಕೇಂದ್ರವು ಪ್ರದರ್ಶನಗಳು, ಚಲನಚಿತ್ರ ಪ್ರದರ್ಶನ ಗಳು ಮತ್ತು ಶೈಕ್ಷಣಿಕ ಸಹಭಾಗಿತ್ವಗಳ ಮೂಲಕ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ವಿನಿಮಯದ ಕೇಂದ್ರವಾಗಿ ಕಾರ್ಯ ನಿರ್ವಹಿಸುವ ಉದ್ದೇಶ ಹೊಂದಿದೆ ಎಂದು ಹೇಳಿದರು.

ವಿಶೇಷ ಅತಿಥಿಗಳಾಗಿ ಉಪಸ್ಥಿತರಿದ್ದ ಐಟಿ ಹಬ್‌ನ ಮುಖ್ಯಸ್ಥರಾದ ಶ್ರೀ ಎಸ್. ಶೆರ್ಚನ್ಕೋ ಅವರು ಡಿಜಿಟಲ್ ಬ್ಯಾಂಕಿಂಗ್ನ ಪ್ರಾಮುಖ್ಯತೆ ಮತ್ತು ರಷ್ಯನ್ ಭಾಷೆಯ ಅಧ್ಯಯನವು ದ್ವೈಪಕ್ಷಿಕ ವೃತ್ತಿಪರ ಅವಕಾಶಗಳನ್ನು ಹೆಚ್ಚಿಸುವಲ್ಲಿ ಹೇಗೆ ಸಹಾಯಕವಾಗ 'ಬಹುದು ಎಂಬ ಬಗ್ಗೆ ಮಾತನಾಡಿದರು. ಡ್ಮಿಟ್ರಿ ಮೆಂಡೆಲೀಯೆವ್ ರಸಾಯನಿಕ ತಂತ್ರಜ್ಞಾನ ವಿಶ್ವವಿದ್ಯಾಲಯದ ಹಳೆಯ ವಿದ್ಯಾರ್ಥಿ ಡಾ. ಶಿವಕುಮಾರ್ ಆರ್ ಅವರು ರಷ್ಯಾದಲ್ಲಿ ತಮ್ಮ ಶಿಕ್ಷಣದ ಅನುಭವವನ್ನು ಹಂಚಿ ಕೊಂಡರು. ಸ್ಬೆರ್ಬ್ಯಾಂಕ್ನ ಡೆಪ್ಯೂಟಿ ಹೆಡ್ ಮ್ಮಿ. ಎಸ್. ಸಹಾ ಕೂಡಾ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಜಾಗತಿಕ ಭಾಷೆಗಳ ಕೇಂದ್ರದ ನಿರ್ದೇಶಕಿ ಹಾಗೂ ಕಲಾ ವಿಭಾಗದ ಡೀನ್ ಡಾ. ಜ್ಯೋತಿ ವೆಂಕಟೇಶ್ ಸ್ವಾಗತ ಭಾಷಣ ಮಾಡಿದರು. ಸಮಾರಂಭದ ಕೊನೆಯಲ್ಲಿ ಇಂಗ್ಲಿಷ್ ವಿಭಾಗದ ಮುಖ್ಯಸ್ಥರು ಡಾ. ತಾಂಡವ್ ಗೌಡ ವಂದನಾರ್ಪಣೆಯನ್ನು ಮಾಡಿದರು. ಈ ಸಂದರ್ಭದಲ್ಲಿಯೇ ಜಾಗತಿಕ ಭಾಷೆಗಳ ಕೇಂದ್ರದ ಮಾಜಿ ಅಧ್ಯಕ್ಷ ಪ್ರೊ. (ನಿವೃತ್ತ) ಇರಾಸಿ ಮತ್ತು ಇತಿಹಾಸ ವಿಭಾಗದ ನಿವೃತ್ತ ಪ್ರೊ. ಜಮುನಾ ಅವರು ಉಪಸ್ಥಿತರಿದ್ದರು.

ಉದ್ಘಾಟನೆಯ ನಂತರ, ಪ್ಯಾನಲ್ ಚರ್ಚೆ ನಡೆಯಿತು. ಇದರಲ್ಲಿ ಬೆಂಗಳೂರು ವಿಶ್ವ ವಿದ್ಯಾನಿಲಯದ ಇಂಗ್ಲಿಷ್ ವಿಭಾಗದ ಪ್ರೊ. ಸಿಂಧು ಜೆ., ಹಂಪಿಯ ಕನ್ನಡ ವಿಶ್ವವಿದ್ಯಾನಿಲಯದ ನಿವೃತ್ತ ಪ್ರೊ. ಕೆ.ಸಿ. ಶಿವರೆಡ್ಡಿ ಹಾಗೂ ರಷ್ಯನ್ ಹೌಸ್ ನವದೆಹಲಿಯ ರಷ್ಯನ್ ಭಾಷಾ ಕೇಂದ್ರದ ಮುಖ್ಯಸ್ಥೆ ಮಿಸ್ ಎಕಟರಿನಾ ದಿನ್ಯಾಕ್ ಭಾಗವಹಿಸಿದ್ದರು.

ಅವರು ಕುವೆಂಪು ಮತ್ತು ಪುಷ್ಕಿನ್ ಅವರ ಸಾಹಿತ್ಯ ಪರಂಪರೆಯ ಕುರಿತು ಚರ್ಚಿಸಿದರು. ಈ ಕವಿಗಳು ಕಾಲ ಹಾಗೂ ಭೌಗೋಳಿಕವಾಗಿ ದೂರವಿದ್ದರೂ ಸಹ ಮಾನವತಾವಾದ ಮತ್ತು ಸಮಾಜ ಸುಧಾರಣೆಗೆ ನೀಡಿದ ಅವರ ಕೊಡುಗೆ, ಮತ್ತು ಭಾರತೀಯ ಚಿಂತನೆ ಹಾಗೂ ವಿದ್ವಾಂಸರ ಮೇಲೆ ರಷ್ಯನ್ ಸಾಹಿತ್ಯದ ಪ್ರಭಾವವನ್ನು ಅವರು ಗುರುತಿಸಿದರು.

ಕಾರ್ಯಕ್ರಮದ ಅಂತ್ಯದಲ್ಲಿ ರಷ್ಯನ್ ವಿದ್ಯಾರ್ಥಿಗಳು ಹಾಗೂ ಕನ್ನಡ ಮತ್ತು ಇಂಗ್ಲಿಷ್ ವಿಭಾಗದ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವು ನಡೆಯಿತು. ಇದು ಭಾರತ–

# ವಿಶ್ವ ಪವನ ದಿನ– ಕ್ರೆಡಲ್‌ನಿಂದ ರನ್ ವಿತ್ ದಿ ವಿಂಡ್ ಮ್ಯಾರಥಾನ್




**ಬೆಂಗಳೂರು, ಜೂ.14–** ವಿಶ್ವ ಪವನ ದಿನ (ಜೂನ್ 15)ಕ್ಕೆ ಪೂರ್ವಭಾವಿಯಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮವು ಭಾರತೀಯ ಪವನ ಶಕ್ತಿ ಸಂಘದ (ಐಡಬ್ಲ್ಯುಪಿಎ) ಮತ್ತು ಕೇಂದ್ರದ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಸಹಯೋಗದೊಂದಿಗೆ ಆಯೋಜಿಸಿದ್ದ 'ರನ್ ವಿತ್ ದಿ ವಿಂಡ್' ಮ್ಯಾರಥಾನ್ ನಗರದಲ್ಲಿಂದು ನಡೆಯಿತು. ಪವನ ಶಕ್ತಿಯ ಅಗಾಧ ಸಾಮರ್ಥ್ಯ ಮತ್ತು ಸುಸ್ಥಿರ ಭವಿಷ್ಯ ರೂಪಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಲು ಆಯೋಜಿಸಿದ್ದ 'ರನ್ ವಿತ್ ದಿ ವಿಂಡ್' ಮ್ಯಾರಥಾನ್‌ಗೆ ನಾಗರ ಬಾವಿಯ ಕ್ರೆಡಲ್ ಕಚೇರಿಯ ಆವರಣದಲ್ಲಿ ಆಯೋಜಿಸಲಾಗಿತ್ತು.

ಹಸಿರು, ಸುಸ್ಥಿರ ಕರ್ನಾಟಕದತ್ತ ಸಾಮೂಹಿಕ ಹೆಜ್ಜೆಯ ದ್ಯೋತಕವಾಗಿದ್ದ 2ಕೆ ಮತ್ತು 5ಕೆ ವಿಭಾಗಗಳ ಓಟದಲ್ಲಿ ಶಾಲಾ, ಕಾಲೇಜು ವಿದ್ಯಾರ್ಥಿಗಳು, ವೃತ್ತಿಪರರು, ಸರ್ಕಾರಿ ಅಧಿಕಾರಿಗಳು ಸೇರಿದಂತೆ 500ಕ್ಕೂ ಹೆಚ್ಚು ಓಟಗಾರರು ಉತ್ಸಾಹದಿಂದ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಕ್ರೆಡಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ.ರುದ್ರಪ್ಪಯ್ಯ, "ನವೀಕರಿಸಬಹುದಾದ ಇಂಧನ ವಲಯವನ್ನು ಮುನ್ನಡೆಸುವಲ್ಲಿ ಪವನ ಶಕ್ತಿ ಪ್ರಮುಖ ಪಾತ್ರ ವಹಿಸುತ್ತದೆ. ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ನಾಯಕತ್ವ ಮತ್ತು ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಅವರ ಮಾರ್ಗದರ್ಶನದಲ್ಲಿ ರಾಜ್ಯವು ಶುದ್ಧ ಇಂಧನದ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದೆ. ನವೀಕರಿಸಬಹುದಾದ ಇಂಧನ ವಲಯದಲ್ಲಿ ಕರ್ನಾಟಕವನ್ನು ದೇಶದಲ್ಲಿಯೇ ನಂಬರ್ ಒನ್ ರಾಜ್ಯವನ್ನಾಗಿಸುವ ಗುರಿ ಹೊಂದಿದ್ದೇವೆ" ಎಂದರು.

'2024–25ರ ಹಣಕಾಸು ವರ್ಷದಲ್ಲಿ ರಾಜ್ಯ ದಾಖಲೆಯ 1,332 ಮೆಗಾವ್ಯಾಟ್ ಪವನ ಸಾಮರ್ಥ್ಯವನ್ನು ಸೇರ್ಪಡೆಗೊಳಿಸಿದ್ದು, ಇದು ದೇಶದಲ್ಲಿಯೇ ಅತಿ ಹೆಚ್ಚು. ಈ ಮೂಲಕ ಗುಜರಾತ್ ಮತ್ತು ತಮಿಳುನಾಡನ್ನು ನಾವು ಹಿಂದಿಕ್ಕಿದ್ದೇವೆ. ಒಟ್ಟು 7,351 ಮೆಗಾವ್ಯಾಟ್ ಸ್ಥಾಪಿತ ಪವನ ಸಾಮರ್ಥ್ಯದೊಂದಿಗೆ, ರಾಜ್ಯವು ದೇಶದ ಪವನ ವಿದ್ಯುತ್ ವಲಯದಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದೆ' ಎಂದು ಅವರು ಹೇಳಿದರು.

ಐಡಬ್ಲ್ಯುಪಿಎ ಉಪಾಧ್ಯಕ್ಷರಾದ ಯು.ಬಿ. ರೆಡ್ಡಿ ಮಾತನಾಡಿ, 'ಪವನ ಶಕ್ತಿಯ ಸಾಮರ್ಥ್ಯ ಹೆಚ್ಚಳಕ್ಕೆ ಒತ್ತು ನೀಡುವ ಮೂಲಕ 2070ರ ವೇಳೆಗೆ ಇಂಗಾಲದ ನಿವ್ವಳ ಶೂನ್ಯ ಹೊರಸೂಸುವಿಕೆಯ ಗುರಿ ತಲುಪಬಹುದಾಗಿದೆ. ಈ ನಿಟ್ಟಿನಲ್ಲಿ ಕೆಲಸ ಮಾಡಲು ಐಡಬ್ಲ್ಯುಪಿಎ ಬದ್ಧವಾಗಿದೆ,"ಎಂದರು.

ಎಂಎನ್‌ಆರ್‌ಇ ನಿರ್ದೇಶಕ ಪಿ.ಕೆ. ದಾಶ್, ಎನ್‌ಐಡಬ್ಲ್ಯುಇನ ಪ್ರಧಾನ ನಿರ್ದೇಶಕ ರಾಜೇಶ್ ಕತ್ಯಾಲ್, ಕೆಎಸ್ಪಿಡಿಸಿಎಲ್ನ ಸಿಇಓ ಟಿ.ಎಂ. ಶಿವಪ್ರಕಾಶ್, ಕೆಎಸ್ಪಿಡಿಸಿಎಲ್ ಪ್ರಧಾನ ವ್ಯವಸ್ಥಾಪಕ ಅಮರನಾಥ್ ಮತ್ತಿತರರು ಉಪಸ್ಥಿತರಿದ್ದರು.




ಕೊಡಗಿನಲ್ಲಿ ಭಾರಿ ಮಳೆಯಿಂದಾಗಿ ಅಣೆಕಟ್ಟಿನ ಒಳಹರಿವು ಹೆಚ್ಚಾದ ಕಾರಣ, ಶನಿವಾರ ಹಾರಂಗಿ ಅಣೆಕಟ್ಟಿನಿಂದ 4,000 ಕ್ಯೂಸೆಕ್ ನೀರನ್ನು ಅಧಿಕಾರಿಗಳು ಬಿಡುಗಡೆ ಮಾಡಿದ್ದಾರೆ. ಪ್ರವಾಹದ ಅಪಾಯಗಳನ್ನು ಕಡಿಮೆ ಮಾಡಲು ಕೆಳಭಾಗದ ನಿವಾಸಿಗಳು ಜಾಗರೂಕರಾಗಿರಿ, ತಮ್ಮ ವಸ್ತುಗಳನ್ನು ರಕ್ಷಿಸಿಕೊಳ್ಳಿ, ಜಾನುವಾರುಗಳನ್ನು ಸ್ಥಳಾಂತರಿಸಿ ಮತ್ತು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಗೊಳ್ಳುವಂತೆ ಸೂಚಿಸಲಾಗಿದೆ.

# ಠಾಣೆಗಳ ವ್ಯಾಪ್ತಿಯಲ್ಲಿ ಪ್ರತಿಯೊಂದು ಮನೆಯ ದತ್ತಾಂಶ ಸಂಗ್ರಹಿಸಿ: ಪೊಲೀಸರಿಗೆ ಪರಮೇಶ್ವರ್ ಸೂಚನೆ

**ಮಂಗಳೂರು, ಜೂ.14–** ಪೊಲೀಸ್ ಠಾಣೆಗಳಲ್ಲಿ ಆಯಾ ವ್ಯಾಪ್ತಿಯ ಗ್ರಾಮಗಳ ಅಥವಾ ನಗರಗಳ ಪ್ರತಿಯೊಂದು ಮನೆಯ ದತ್ತಾಂಶವನ್ನು ಸಂಗ್ರಹಿಸಿಟ್ಟುಕೊಳ್ಳುವಂತಹ ವ್ಯವಸ್ಥೆಯನ್ನು ರೂಪಿಸಬೇಕು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಸೂಚಿಸಿದ್ದಾರೆ.

ಉಡುಪಿ ಜಿಲ್ಲಾ ಪ್ರವಾಸದಲ್ಲಿರುವ ಅವರು ಕೋಟಾ ಪೊಲೀಸ್ ಠಾಣೆಗೆ ಭೇಟಿ ನೀಡಿದ್ದರು. ಅಲ್ಲಿ ಹಿರಿಯ ಅಧಿಕಾರಿಗಳ ಜೊತೆ ಸಮಾ ಲೋಚನೆ ನಡೆಸಿ ಪೊಲೀಸ್ ಸಿಬ್ಬಂದಿಗಳ ಕಾರ್ಯವೈಖರಿಯನ್ನು ಪರಿಶೀಲಿಸಿದರು. ಪಶ್ಚಿಮ ವಲಯ ಐಜಿಪಿ ಅಮಿತ್ ಸಿಂಗ್, ಉಡುಪಿ ಜಿಲ್ಲಾ ವರಿಷ್ಠಾಧಿಕಾರಿ ಹರಿರಾಂ ಶಂಕರ್ ಮತ್ತಿತರರು ಉಪಸ್ಥಿತರಿದ್ದರು.

ಈ ವೇಳೆ ಪೊಲೀಸ್ ಠಾಣೆಯಲ್ಲಿ ತಮ ವ್ಯಾಪ್ತಿಯಲ್ಲಿರುವ ಪ್ರದೇಶದ ಪ್ರತಿ ಕುಟುಂಬದ ದತ್ತಾಂಶ ಲಭ್ಯವಿದೆಯೇ ಎಂದು ಗೃಹಸಚಿವರು ಪ್ರಶ್ನಿಸಿದರು. ಅಧಿಕಾರಿಗಳು ಇಲ್ಲ ಎಂದಾಗ ಈ ರೀತಿಯ ಒಂದು ಕ್ರಮ ತೆಗೆದುಕೊಳ್ಳಬೇಕು. ಒಂದು ಪೊಲೀಸ್ ಠಾಣಾ ವ್ಯಾಪ್ತಿಗೆ 30 ಗ್ರಾಮಗಳು ಬರುತ್ತವೆ ಎಂದಾದರೆ ಆಯಾ ಗ್ರಾಮಗಳಲ್ಲಿರುವ ಪ್ರತಿಯೊಂದು ಮನೆಯ ಮುಖ್ಯಸ್ಥ ಯಾರು, ಎಷ್ಟು ಜನ ಇದ್ದಾರೆ, ಅವರ ಉದ್ಯೋಗ ಮತ್ತು ಹಿನ್ನೆಲೆ ಏನು ಎಂಬ ಬಗ್ಗೆ ಮಾಹಿತಿ ಸಂಗ್ರಹಿಸಿಟ್ಟುಕೊಳ್ಳಬೇಕು ಎಂದು ಸೂಚಿಸಿದರು. ಈ ಮೊದಲು ನಕ್ಸಲ್ ನಿಗ್ರಹ ದಳ ಈ ರೀತಿಯ ದತ್ತಾಂಶ ಸಂಗ್ರಹಿಸಿತ್ತು ಎಂದು ಅಧಿಕಾರಿಗಳು ತಿಳಿಸಿದಾಗ ಅದನ್ನೇ ಬಳಸಿಕೊಂಡು ಖಚಿತಪಡಿಸಿಕೊಳ್ಳುವಂತೆ ಸಚಿವರು ಸೂಚಿಸಿದರು.




ಈ ವೇಳೆ ಠಾಣೆಗೆ ಭೇಟಿ ನೀಡಿದವರ ಮತ್ತು ದೂರು ಕೊಟ್ಟವರ ಮಾಹಿತಿಯ ಪುಸ್ತಕವನ್ನು ಖುದ್ದು ಸಚಿವ ಪರಮೇಶ್ವರ್ ಪರಿಶೀಲಿಸಿದರು. ಅದರಲ್ಲಿ 2 ವ್ಯಕ್ತಿಗಳನ್ನು ತಾವೇ ಆಯ್ಕೆ ಮಾಡಿಕೊಂಡು ಠಾಣೆಯ ಸಿಬ್ಬಂದಿಗಳ ಮೊಬೈಲ್‌ಗೆ ಕರೆ ಮಾಡಿ ಮಾತನಾಡಿದರು.

ಕೃಷ್ಣಮೂರ್ತಿ ಎಂಬುವವರ ಜೊತೆ ಸಚಿವರು ಮಾತನಾಡಿದ ವೇಳೆ, ತಾವು ಆಟೋದಲ್ಲಿ ಪ್ರಯಾಣಿಸಿದ್ದು ಚಾಲಕ ಮೀಟರ್ ಹಾಕಿರಲಿಲ್ಲ. 80 ರೂ. ಹಣ ಕೇಳಿದ್ದ. ಅದನ್ನು ಪ್ರಶ್ನೆ ಮಾಡಿದಾಗ 20 ಜನರನ್ನು ಕರೆತಂದು ತಮಗೆ ಧಮ್ಕಿ ಹಾಕಿದ್ದಾನೆಂದು ಸಚಿವರಲ್ಲಿ ಕೃಷ್ಣಮೂರ್ತಿ ದೂರು ಹೇಳಿದರು. ಇಂತಹ ಪ್ರಕರಣಗಳನ್ನು ಪೊಲೀಸರು ನಿರ್ಲಕ್ಷಿಸಬಾರದು. 20 ಜನರ ಗುಂಪಿನಲ್ಲಿದ್ದ ಪ್ರಮುಖರನ್ನು ಕರೆತಂದು ಎಚ್ಚರಿಕೆ ಕೊಡಬೇಕು. ಇಲ್ಲವಾದರೆ ಈ ಸಣ್ಣ ಘಟನೆ ಮುಂದೆ ದ್ವೇಷಕ್ಕೆ ಕಾರಣವಾಗುತ್ತದೆ. ಕೊಲೆ, ಗುಂಪು ಗಲಭೆಗೆ ಪ್ರಚೋದನೆ ನೀಡುತ್ತದೆ ಎಂದು ಎಚ್ಚರಿಸಿದರು.

ದೂರು ನೀಡಿದ ಮತ್ತೊಬ್ಬ ಮಹಿಳೆಯ ಜೊತೆಯಲ್ಲೂ ಸಚಿವರು ಈ ವೇಳೆ ಮಾತನಾಡಿದರು.ತಮ ಕೌಟುಂಬಿಕ ಸಮಸ್ಯೆಗಳ ಬಗ್ಗೆ ಹೇಳಿಕೊಂಡ ಅಕೆ ಗಂಡ ಮನೆಗೆ ಬಂದು ಮಗುವನ್ನು ತೆಗೆದುಕೊಂಡು ಹೋಗಲು ಗಲಾಟೆ ಮಾಡುತ್ತಿದ್ದು, ಆತನಿಂದ ತಾವು ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದೇನೆ. ಆತನಿಂದಾಗುತ್ತಿರುವ ಕಿರುಕುಳವನ್ನು ತಪ್ಪಿಸಿ ಎಂದು ಮಹಿಳೆ ಮನವಿ ಮಾಡಿದ್ದಾರೆ.ಈ ಕುರಿತು ಸಿಬ್ಬಂದಿಗಳಿಗೆ ಸೂಚನೆ ನೀಡಿದ ಸಚಿವರು, ಕೌಟುಂಬಿಕ ದೌರ್ಜನ್ಯವನ್ನು ನಿರ್ಲಕ್ಷಿಸಬಾರದು. ದೂರುದಾರರಿಂದ ಸ್ಪಷ್ಟ ಮಾಹಿತಿ ಪಡೆದು ಗಸ್ತು ಸಿಬ್ಬಂದಿಗಳು 2–3 ದಿನ ಈ ಪ್ರಕರಣದ ಮೇಲೆ ನಿಗಾ ವಹಿಸಬೇಕು. ಆಕೆಯ ಗಂಡ ಮತ್ತೆ ಬಂದು ದೌರ್ಜನ್ಯ ಮಾಡುವುದು, ಹೊಡೆಯುವುದು, ಬೆದರಿಕೆ ಹಾಕುವುದು ಕಂಡುಬಂದರೆ ಕಾನೂನು ರೀತಿಯ ಕ್ರಮ ಕೈಗೊಳ್ಳಬೇಕು. ನಿರ್ಲಕ್ಷ್ಯ ಮಾಡಿದರೆ ಇದು ವಿಪರೀತಕ್ಕೆ ಹೋಗುವ, ಕೊಲೆಯಂತಹ ಸಾಧ್ಯತೆಗಳನ್ನೂ ಸೃಷ್ಟಿಸಬಹುದು ಎಂದು ಸಚಿವರು ಎಚ್ಚರಿಕೆ ನೀಡಿದರು.ಪೊಲೀಸ್ ಸಿಬ್ಬಂದಿಗಳ ಜೊತೆ ಚರ್ಚೆ ನಡೆಸುವ ವೇಳೆ ಸೇವೆಗೆ ಸೇರಿ ಎಷ್ಟು ದಿನವಾಯಿತು ಎಂದು ಪ್ರಶ್ನಿಸಿದರು.

17 ವರ್ಷಗಳಾಗಿದ್ದಾಗಿ ಕಾನ್ಸ್‌ಸ್ಟೇಬಲ್‌ರೊಬ್ಬರು ಹೇಳಿದಾಗ, ಈವರೆಗೂ ಏಕೆ ಬಡ್ತಿ ಸಿಕ್ಕಿಲ್ಲ ಎಂದು ಸಚಿವರು ಕೇಳಿದರು. ಠಾಣೆಯಲ್ಲಿ ಸಿಬ್ಬಂದಿಗಳು ಉತ್ತಮ ಕೆಲಸ ಮಾಡುತ್ತಿದ್ದಾರೆ. ಮುಂಜಾಗ್ರತಾ ಕ್ರಮಗಳ ಅಗತ್ಯವಿದೆ ಎಂದು ಇದೇ ವೇಳೆ ಸಚಿವರು ಸಿಬ್ಬಂದಿಗಳು ಹಾಗೂ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು.

### ಎಪಿಎಂಸಿಯಲ್ಲಿ ಕೃಷಿಯೇತರ ಅಂಗಡಿಗಳ ತೆರವಿಗೆ ಖರ್ಗೆ ತಡೆ!

# ಕಲಬುರಗಿ ಜಿಲ್ಲಾಧಿಕಾರಿ ಕಚೇರಿ ಮುತ್ತಿಗೆ: ದಲಿತ ಸೇನೆ ಬೆದರಿಕೆ




ಕಲಬುರಗಿ ಪತ್ರಿಕಾ ಭವನದಲ್ಲಿ ದಲಿತ ಸೇನೆ ಜಿಲ್ಲಾಧ್ಯಕ್ಷ ಮಂಜುನಾಥ ಭಂಡಾರಿ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

**ಕಲಬುರಗಿ, ಜೂ.14–** ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಸೂಚನೆಯ ಮೇರೆಗೆ ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಪ್ರದೇಶದಲ್ಲಿ ಇರುವ ಕೃಷಿಯೇತರ ಅನಧಿಕೃತ ಅಂಗಡಿಗಳ ತೆರವಿಗೆ ತಡೆ ನೀಡಿರುವದನ್ನು ವಿರೋಧಿಸಿ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಲಾಗುವುದು ಎಂದು ದಲಿತ ಸೇನೆಯ ಜಿಲ್ಲಾಧ್ಯಕ್ಷ ಮಂಜುನಾಥ ಭಂಡಾರಿ ಅವರು ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿಯೇತರ ಅಂಗಡಿಗಳನ್ನು ತೆರವುಗೊಳಿಸಬೇಕು ಎಂದು ನೋಟಿಸ್ ನೀಡಲಾಗಿದೆ. ರಾಜಸ್ತಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಅನಧಿಕೃತ ಅಂಗಡಿಗಳನ್ನು ಹಾಕಿದ್ದು, ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸದೇ ಅಧಿಕಾರಿಗಳೂ ಸಹ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ಅವರ ವಿರುದ್ಧವೂ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಎಂ.ಎಸ್. ಪಾಟೀಲ್ ನರಿಬೋಳ್ ಅವರ ನೇತೃತ್ವದಲ್ಲಿ 23ನೇ ದಿನಗಳಲ್ಲಿ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಮುಂದುವರಿದರೂ ಸಹ ಕ್ರಮ ಕೈಗೊಳ್ಳದೇ ಇರುವುದರಿಂದ ಉಗ್ರ ಹೋರಾಟ ರೂಪಿಸಲಾಗಿದೆ ಎಂದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಅಲ್ಲಾಭಕ್ಷ ಅವರಿಗೆ ಅನಧಿಕೃತ ಅಂಗಡಿಗಳಿಗೆ ನೋಟಿಸ್ ನೀಡಿ ಸುಮ್ಮನೆ ಕುಳಿತಿರುವ ಕುರಿತು ಪ್ರಶ್ನಿಸಿದರೆ, ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಅವರು ತಕ್ಷಣವೇ ತೆರವುಗೊಳಿಸು ಎಂದು ಹೇಳಿದ್ದಾರೆ. ಆದಾಗ್ಯೂ, ಜಿಲ್ಲಾ ಉಸ್ತುವಾರಿ ಸಚಿವರು ತಂಟೆಗೆ ಹೋಗಬೇಡ ಎಂದಿದ್ದಾರೆ ಎಂದು ಹೇಳಿದ್ದಾಗಿ ಅವರು ವಿವರಿಸಿದರು.

ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೇರೆ, ಬೇರೆ ಜಿಲ್ಲೆ ಹಾಗೂ ರಾಜ್ಯದ ಹಾಗೂ ರಾಷ್ಟ್ರದ ಸಂಬಂಧಪಡದ ವಿಷಯಗಳಿಗೆ ಮೂಗು ತೂರಿಸುತ್ತಾರೆ. ಆದಾಗ್ಯೂ, ತಮ್ಮ ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿನ ಅನಧಿಕೃತ ಅಂಗಡಿಗಳ ತೆರವಿಗೆ ವಿರೋಧಿಸುತ್ತಿದ್ದಾರೆ. ಇದು ಸರಿಯಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಕೂಡಲೇ ಸಚಿವ ಖರ್ಗೆ ಅವರು ತಡೆಯನ್ನು ನಿರ್ಲಕ್ಷಿಸಿ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸದೇ ಹೋದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಅವರು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಹಿಂದೂ ಜಾಗೃತ ಸೇನೆಯ ಕಲ್ಯಾಣ ಕರ್ನಾಟಕದ ಅಧ್ಯಕ್ಷ ಲಕ್ಷ್ಮೀಕಾಂತ್ ಸ್ವಾದಿ, ರಾಮ್ ಸೇನೆ ಜಿಲ್ಲಾಧ್ಯಕ್ಷ ಮಹೇಶ್ ಕೆಂಭಾವಿ, ಕರ್ನಾಟಕ ರೈತ ಸಂಘದ ಜಿಲ್ಲಾಧ್ಯಕ್ಷ ನಾಗೇಂದ್ರಪ್ಪ ತಾಂಬೆ, ಹಿಂದೂ ಜಾಗೃತಿ ಸೇನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದು ವಿ. ಕಂದಗಲ್, ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಪೃಥ್ವಿರಾಜ್ ಎಸ್. ರಾಂಪುರ, ಭಾರತೀಯ ಯುವ ಸೇನೆ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ್ ಚಿಂಚನಸೂರ್, ದಲಿತ ಸೇನೆ ಜಿಲ್ಲಾ ಉಪಾಧ್ಯಕ್ಷ ಶ್ರೀಕಾಂತರೆಡ್ಡಿ ಉಪಸ್ಥಿತರಿದ್ದರು.

## ತಾಂತ್ರಿಕ ಮೇಲ್ವಿಚಾರಣೆ, ನಿರ್ವಹಣೆಯಲ್ಲಿ ಮುನ್ನಡೆಯಬೇಕು: ಹೆಚ್.ಕೆ.ಪಾಟೀಲ್



**ಕಲಬುರಗಿ, ಜೂ.14–** ಗುಜರಾತ್ ವಿಮಾನ ದುರಂತ ಪ್ರಕರಣದಿಂದಾಗಿ ಉಳಿದ ರಾಷ್ಟ್ರಗಳಿಗಿಂತ ತಾಂತ್ರಿಕ ಮೇಲ್ವಿಚಾರಣೆ ಹಾಗೂ ನಿರ್ವಹಣೆಯಲ್ಲಿ ನಾವು ಹಿಂದೆ ಇದ್ದೇವೆ ಅಂತ ಜನ ಮಾತನಾಡುತ್ತಿದ್ದಾರೆ. ನಾವು ಮುಂದುವರಿಯುವ ಅಗತ್ಯ ಇದೆ ಎಂದು ಸಚಿವ ಹೆಚ್.ಕೆ.ಪಾಟೀಲ್ ಹೇಳಿಕೆ ನೀಡಿದ್ದಾರೆ.

ಮಾಧ್ಯಮಗಳೊಂದಿಗೆ, ವಿಮಾನ ದುರಂತ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಪ್ರಧಾನಿ ಮೋದಿ ಅವರು ಇಂತದ್ದರಲ್ಲಾದರೂ ತಕ್ಷಣ ಸ್ಪಂದಿಸಿ ನ್ಯಾಯಾಂಗ ತನಿಖೆಗೆ ಒಪ್ಪಿಬೇಕು. ಮತ್ತೆ ಈ ರೀತಿ ಆಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಬೆಂಗಳೂರಿನಲ್ಲಿ ಆರ್‌ಸಿಬಿ ಸಂಭ್ರಮಾಚರಣೆ ವೇಳೆ ನಡೆದ ಕಾಲ್ತುಳಿತ ದುರಂತದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇಂತಹ ಘಟನೆಗಳು ಮರುಕಳಿಸದಂತೆ ಶೀಘ್ರದಲ್ಲೇ 'ಕ್ರೌಡ್ ಮ್ಯಾನೇಜ್ಮೆಂಟ್' ಕಾಯ್ದೆ ಜಾರಿ ಮಾಡಲು ನಿರ್ಧರಿಸಲಾಗಿದೆ. ಜಾತ್ರೆಗಳು, ಧರ್ಮ ಆಚರಣೆಗಳನ್ನು ಹೊರತುಪಡಿಸಿ ಈ ಕಾಯ್ದೆ ಜಾರಿ ಮಾಡಲಾಗುತ್ತದೆ ಎಂದು ಅವರು ಹೇಳಿದರು.

## ಶ್ರೀ ವೀರಭದ್ರ ಸ್ವಾಮಿ ದೇವಸ್ಥಾನದಲ್ಲಿ ಅಭಿವೃದ್ಧಿ ಕಾಮಗಾರಿ ಆರಂಭ

**ಬಳ್ಳಾರಿ, ಜೂನ್.14–** ಜಿಲ್ಲೆಯಸಿರುಗುಪ್ಪ ತಾಲ್ಲೂಕಿನ ದರೂರು ಗ್ರಾಮದಲ್ಲಿರುವ ಶ್ರೀ ವೀರಭದ್ರಸ್ವಾಮಿ ಪುಣ್ಯ ಕ್ಷೇತ್ರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಪುನಃ ಚಾಲನೆ ನೀಡಲಾಗಿದೆ.

ವೀರಭದ್ರ ಸ್ವರ ಸ್ವಾಮಿ ಸಮಿತಿಯ ಅಧ್ಯಕ್ಷರಾದ ಪುರುಷೋತ್ತಮ ಗೌಡ ಪತ್ರಿಕಾ ಪ್ರಕಟಣೆ ನೀಡಿ, ಶ್ರೀ ವೀರಭದ್ರ ಸ್ವಾಮಿ ದೇವಸ್ಥಾನದಲ್ಲಿ ಆರು ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಾಣ ವಾಗುತ್ತಿರುವ 81 ಅಡಿಗಳ ಎತ್ತರದ ರಾಜಗೋಪುರ, 47 ಅಡಿಗಳ ಎತ್ತರದ ಈಶಾನ್ಯ ಗೋಪುರ ಮತ್ತು 31 ಶಿಲಾ ಮಂಟಪಗಳ ನಿರ್ಮಾಣ ಕಾರ್ಯವು ಕಳೆದ ಎರಡು ವರ್ಷಗಳಿಂದ ನಡೆಯುತ್ತಿದ್ದು,

ಕಳೆದ ವರ್ಷ ಸೆಪ್ಟೆಂಬರ್ತಿಂಗಳ ಅಂತಕ್ಕೆ 1.80 ಕೋಟಿ ರೂ.ಗಳ ಕಾಮಗಾರಿ ಪೂರ್ಣಗೊಂಡಿರುತ್ತದೆ. 2024ರ ಸೆ.1ರಿಂದ ಹಣಕಾಸಿನ ತೊಂದರೆಯಿಂದ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತವಾಗಿದ್ದವು. ಇತ್ತೀಚೆಗೆ ಶ್ರೀ ವೀರಭದ್ರ ಸ್ವಾಮಿಯ ಭಕ್ತಾಧಿಗಳು ನೀಡಿರುವ ಕಾಣಿಕೆ ಯಿಂದ ಸುಮಾರು 32 ಲಕ್ಷ ರೂ.ಗಳ ಮೌಲ್ಯದ ಶಿಲಾಬಂಡೆಗಳನ್ನು ಚಿಕ್ಕ ಬಳ್ಳಾಪುರ ದಿಂದ 8 ಲಾರಿಗಳಲ್ಲಿ ತರಿಸಲಾಗಿತ್ತು.

ಇಂದು(ಜೂ.14ರಂದು) ಶ್ರೀ ವೀರಭದ್ರ ಸ್ವಾಮಿಪುಣ್ಯ ಕ್ಷೇತ್ರದ ವಿವಿಧ ಕಾಮಗಾರಿಗಳ ನಿರ್ಮಾಣದ ಶಿಲ್ಪಿಗಳು ಮುರುಡೇಶ್ವರದಿಂದ ಆಗಮಿಸಿದ್ದು, ದೇವಸ್ಥಾನದ ಕಾಮಗಾರಿಯಲ್ಲಿ ಮಗ್ನರಾಗಿದ್ದಾರೆ.

# ಮುಖ್ಯಮಂತ್ರಿ ಬದಲಾವಣೆ ಮುಂದಿನ ನವೆಂಬರ್‌ನಲ್ಲಿ: ವಿಶ್ವನಾಥ್ ಭವಿಷ್ಯ



**ಮೈಸೂರು, ಜೂ.14–** ರಾಜ್ಯದಲ್ಲಿ ಆಗ್ಗಾಗ್ಗೆ ಕೇಳಿಬರುತ್ತಿರುವ ಸಿಎಂ ಸಿದ್ದರಾಮಯ್ಯ ಅವರ ಬದಲಾವಣೆ ಸಂಬಂಧ ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಎಚ್‌ವಿಶ್ವನಾಥ್ ಭವಿಷ್ಯವಾಣಿ ನುಡಿದಿದ್ದು, ಮುಂಬರುವ ನವೆಂಬರ್‌ನಲ್ಲಿ ಬದಲಾವಣೆಯಾಗಲಿದೆ ಎಂದಿದ್ದಾರೆ.

ಮಾಧ್ಯಮದವರೊಂದಿಗೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಥವಾ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಸ್ಥಾನವನ್ನು ಅಲಂಕರಿಸ ಲಿದ್ದಾರೆ ಎಂದು ಸ್ಪಷ್ಟಪಡಿಸಿದರು.ಇದರಿಂದ ಇಂದು ಪ್ರತಿ ಬಾರಿಯೂ ಕೇಳಿಬರುತ್ತಿರುವ ಸಿಎಂ ಬದಲಾವಣೆ ಮಾತಿಗೆ ಫುಲ್ ಸ್ಟಾಂಪ್ ಬೀಳಲಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹತ್ತು ವರ್ಷಗಳ ಹಿಂದೆಯೇ ಜಾತಿವಾರು ಜನಗಣತಿ ಮಾಡಿಸಿದ್ದರು. ಸುಮಾರು ಒಂದೂವರೆ ಲಕ್ಷ ಶಿಕ್ಷಕರು ಗಣತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಇದಕ್ಕಾಗಿ 170 ಕೋಟಿ ರೂಪಾಯಿ ಹಣ ಖರ್ಚು ಮಾಡಲಾಗಿತ್ತು. ಅಂದಿನಿಂದ ಜಾತಿವಾರು ಜನಗಣತಿ ವರದಿಯನ್ನು ಬಹಿರಂಗಪಡಿಸಲಿಲ್ಲ. ಕುಮಾರಸ್ವಾಮಿ, ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದಾಗ ಇದನ್ನು ಸ್ವೀಕರಿಸಲಿಲ್ಲ ಎಂದು ಆರೋಪ ಹೊರಿಸುತ್ತಲೇ ಬಂದಿದ್ದರು.

ಆದರೆ ಇದೀಗ ಪಕ್ಷದ ಹೈಕಮಾಂಡ್ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಹೆದರಿಕೊಂಡು ಮತ್ತೆ ಜಾತಿಗಣತಿ ಮಾಡಲಾಗುವುದು ಎಂದು ಹೇಳಿಕೆ ಕೊಟ್ಟಿದ್ದಾರೆ. 90 ದಿನಗಳೊಳಗೆ ಇದನ್ನು ಮಾಡುವುದಾಗಿ ಘೋಷಿಸಿದ್ದಾರೆ. ಆದರೆ, ಇದು ಹೇಗೆ ಸಾಧ್ಯ ಎಂದು ವಿಶ್ವನಾಥ್ ಪ್ರಶ್ನಿಸಿದ್ದಾರೆ.

ಈಗಾಗಲೇ ಶಾಲೆ, ಕಾಲೇಜುಗಳು ಆರಂಭವಾಗಿವೆ, ಜಾತಿಗಣತಿ ಮಾಡಲು ಶಿಕ್ಷಕರು ಲಭ್ಯರಿಲ್ಲ, ಆದ್ದರಿಂದ ಹೇಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾತಿಗಣತಿ ಮಾಡಲಿದ್ದಾರೆ ಎಂದು ಪ್ರಶ್ನಿಸಿದ್ದಾರೆ. ಹೈಕಮಾಂಡ್ ಆದೇಶಕ್ಕೆ ಮಣಿದು ಈ ಹೇಳಿಕೆ ಕೊಟ್ಟಿದ್ದಾರೆ, ಆದರೆ, ಇದರ ಕಾರ್ಯಸಾಧ್ಯತೆ ಬಗ್ಗೆ ಅವರು ಯೋಚನೆ ಮಾಡಿಲ್ಲ.

ಮರುಜಾತಿಗಣತಿ ಮಾಡುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳುವುದರ ಮೂಲಕ ಹಿಂದುಳಿದ ವರ್ಗಗಳಿಗೆ ಅನ್ಯಾಯ ಮಾಡಿದ್ದಾರೆ. ಮೂರು ತಿಂಗಳಲ್ಲಿ ಜಾತಿಗಣತಿ ಮಾಡಲು ಸಾಧ್ಯವೇ ಇಲ್ಲ, ನವೆಂಬರ್ ಅವರು ಬದಲಾವಣೆಯಾಗುತ್ತಿರುವ ಹಿನ್ನೆಲೆಯಲ್ಲಿ ಅವರು ಈ ಹೇಳಿಕೆ ನೀಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಾಮಾಣಿಕತೆ ಇಲ್ಲದ ತಾವು ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರಿಗೆ ಹೋಲಿಸಬೇಡಿ, ಅವರ ಹೆಸರನ್ನು ನೀವು ಹೇಳಬೇಡಿ, ಸುಳ್ಳು ಹೇಳುವ ಮುಖ್ಯಮಂತ್ರಿ ಎಂದೇ ಚರಿತ್ರೆಯಲ್ಲಿ ದಾಖಲಾಗಿದ್ದೀರಿ ಎಂದು ಲೇವಡಿ ಮಾಡಿದರಲ್ಲದೆ, 170 ಕೋಟಿ ರೂಪಾಯಿ ಖರ್ಚು ಮಾಡಿ ಮಾಡಿಸಿದ ವರದಿಯನ್ನು ತಿಪ್ಪೆಗೆ ಎಸೆದಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿಜಯೋತ್ಸವ ಸಂದರ್ಭದಲ್ಲಿ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದ ಕಾಲ್ತುಳಿತ ಪ್ರಕರಣ ಹೇಗಾಯಿತು ಎಂದು ಬಹಿರಂಗ ಪಡಿಸಬೇಕು, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಪ್ರತಿಯೊಬ್ಬರನ್ನು ಕೆಡಿಸಿದ ಫಲವಾಗಿ ಈ ಘಟನೆ ನಡೆದಿದೆ ಎಂದು ಆರೋಪಿಸಿದರು.ಆರ್ ಸಿಬಿ ತಂಡದಲ್ಲಿ ಕರ್ನಾಟಕದ ಆಟಗಾರರೇ ಇಲ್ಲ, ಅದರ ಓನರ್ ಕರ್ನಾಟಕದವರೇ ಅಲ್ಲ, ಕರ್ನಾಟಕಕ್ಕೂ ಆರ್ ಸಿಬಿಗೂ ಯಾವುದೇ ರೀತಿಯ ಸಂಬಂಧವಿಲ್ಲ , ಆದರೂ ಕೂಡ ಸಿಎಂ ನೀಡಿರುವ ಹೇಳಿಕೆಗಳು ಸಾಕಷ್ಟು ವೈರುಧ್ಯದಿಂದ ಕೂಡಿದೆ. ರಾಜ್ಯಪಾಲರನ್ನು ಆಹ್ವಾನಿಸಿಲ್ಲ ಎಂದವರು ನಂತರ ನಾನೇ ಆಹ್ವಾನಿಸಿದ್ದು ಎಂದು ಹೇಳಿದ್ದಾರೆ. ತಪ್ಪುಗಳೇ ಇಲ್ಲದಿದ್ದರೇ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಅವರನ್ನು ಆ ಸ್ಥಾನದಿಂದ ತೆಗೆದಿದ್ದು ಯಾಕೆ, ಇದನ್ನು ಬಹಿರಂಗ ಪಡಿಸಬೇಕು ಎಂದು ಒತ್ತಾಯಿಸಿದರು.

## ಭಾರಿ ಮಳೆ ಹಿನ್ನೆಲೆ: ಕೃಷ್ಣಾ ನದಿಪಾತ್ರದ ಜನರಿಗೆ ಕಟ್ಟೆಚ್ಚರ



**ರಾಯಚೂರು, ಜೂನ್. 14–** ಭಾರೀ ಮಳೆ ಹಿನ್ನೆಲೆ ನಾರಾಯಣಪುರ ಜಲಾಶಯಕ್ಕೆ ಒಳಹರಿವು ಹೆಚ್ಚಳ ವಾಗಿದ್ದು, ಹಂತಹಂತವಾಗಿ ಕೃಷ್ಣಾ ನೀರು ಬಿಡುಗಡೆ ಮಾಡಲಾಗುತ್ತಿದೆ. ಜಿಲ್ಲೆಯ ಕೃಷ್ಣಾನದಿ ಪಾತ್ರದ ಜನರಿಗೆ ಅಲರ್ಟ್ ಘೋಷಿಸಲಾಗಿದೆ.

ನದಿ ಪಾತ್ರಕ್ಕೆ ಯಾರೂ ತೆರಳದಂತೆ ಜಿಲ್ಲಾಡಳಿತ ಮುನ್ನೆಚ್ಚರಿಕೆ ನೀಡಿದೆ. ಸದ್ಯ ಜಲಾಶಯದಿಂದ 29,226 ಕ್ಯೂಸೆಕ್ನಷ್ಟು ನೀರನ್ನು 7 ಗೇಟ್‌ಗಳ ಮೂಲಕ ಕೃಷ್ಣಾ ನದಿಗೆ ಬಿಡುಗಡೆ ಮಾಡಲಾಗುತ್ತಿದೆ. ನಾರಾಯಣಪುರ ಜಲಾಶಯಕ್ಕೆ 30,000 ಕ್ಯೂಸೆಕ್ ಒಳಹರಿವು ಇದ್ದು, 85.41%ರಷ್ಟು ಭರ್ತಿಯಾಗಿದೆ. ಗರಿಷ್ಠ ಮಟ್ಟ 492.25 ಮೀಟರ್‌ನಲ್ಲಿ 491.15 ಮೀಟರ್ ತಲುಪಿದೆ. 33.313 ಟಿಎಂಸಿ ಸಾಮರ್ಥ್ಯದ ಜಲಾಶಯದಲ್ಲಿ 28.45 ಟಿಎಂಸಿ ನೀರು ಸಂಗ್ರಹ ವಾಗಿದೆ. ಒಳಹರಿವು ಹೆಚ್ಚಾದಂತೆ ಹೆಚ್ಚು ಪ್ರಮಾಣದ ನೀರು ಕೃಷ್ಣಾ ನದಿಗೆ ಹರಿಸುವ ಸಾಧ್ಯತೆ ಹಿನ್ನೆಲೆ ರಾಯಚೂರು ಜಿಲ್ಲಾಡಳಿತ ಜನ ಜಾನುವಾರುಗಳೊಂದಿಗೆ ನದಿ ಬಳಿ ಹೋಗದಂತೆ ಎಚ್ಚರಿಕೆ ನೀಡಿದೆ.

# ವಸತಿ ನಿಲಯಗಳ ಕಾರ್ಮಿಕರ ಸೇವಾ ಭದ್ರತೆಗೆ ಆಗ್ರಹಿಸಿ ಹೋರಾಟ

**ಕಲಬುರಗಿ, ಜೂ.14–** ಕಾರ್ಮಿಕರ ಹಿತರಕ್ಷಣೆಗಾಗಿ ಬೀದರ್ ಮಾದರಿಯ ಸಹಕಾರ ಸಂಘ ರಚಿಸುವಂತೆ ಹಾಗೂ ಸೇವಾ ಭದ್ರತೆ ಒದಗಿಸುವುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ನಗರದ ಕನ್ನಡ ಭವನದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ವಸತಿ ಶಾಲಾ ಹೊರಗುತ್ತಿಗೆ ನೌಕರರು ಪ್ರತಿಭಟನಾ ಮೆರವಣಿಗೆ ಮಾಡಿದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಹಾಸ್ಟೆಲ್‌ಗಳಲ್ಲಿ ದುಡಿಯುತ್ತಿರುವ ಹೊರಗುತ್ತಿಗೆ ನೌಕರರ ಇಡೀ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಕಳೆದ ಜನವರಿ 25ರಿಂದ ಅನಿರ್ಧಿಷ್ಟ ಧರಣಿ ಸತ್ಯಾಗ್ರಹ ಮಾಡಿದಾಗ ಸರ್ಕಾರವು ಹೋರಾಟಕ್ಕೆ ಸ್ಪಂದಿಸಿ ಪವಾರ್ ಏಜೆನ್ಸಿಗಳ ಹಾವಳಿ ತಪ್ಪಿಸಲು ಬೀದರ್ ಮಾದರಿಯಲ್ಲಿ ಸಹಕಾರ ಸಂಘ ರಚಿಸಿ ವೇತನ ಪಾವತಿಸುವುದಾಗಿ ಕಾರ್ಮಿಕ ಸಚಿವ ಸಂತೋಷ ಲಾಡ್ ಅವರು ಒಪ್ಪಿಕೊಂಡು ಬಹಿರಂಗ ಭರವಸೆ ನೀಡಿದ್ದರು ಎಂದರು.

ಇಲ್ಲಿಯವರೆಗೆ ಬಳ್ಳಾರಿ, ವಿಜಯನಗರ, ವಿಜಯಪುರ, ಕೊಪ್ಪಳ ಜಿಲ್ಲೆಗಳಲ್ಲಿ ಮಾತ್ರ ಅಲ್ಲಿನ ಹಾಸ್ಟೆಲ್ ನೌಕರರನ್ನು ಮಾತ್ರ ಸಹಕಾರ ಸಂಘದ ಸದಸ್ಯತ್ವ ಪಡೆದು ಪ್ರಕ್ರಿಯೆ ಮುಂದುವರೆಸಲು ಸರ್ಕಾರಕ್ಕೆ ಅನುಮೋದನೆ ಕಳಿಸಿದ್ದಾರೆ. ಆದಾಗ್ಯೂ, ಸರ್ಕಾರ ಮ್ಯಾನ್ ಪವಾರ್ ಏಜೆನ್ಸಿಗಳ ರಾಜಕೀಯ ಒತ್ತಡಕ್ಕೆ ಒಳಗಾಗಿ ಸರ್ಕಾರವು ಯಾವುದೇ ಪ್ರಕ್ರಿಯೆ ಜರುಗಿಸದೇ ವಿಳಂಬ ನೀತಿ ಅನುಸರಿಸುತ್ತಿದೆ.




ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಶಾಲಾ ಹೊರಗುತ್ತಿಗೆ ನೌಕರರು ಕಾರ್ಮಿಕರ ಹಿತರಕ್ಷಣೆ, ಸೇವಾ ಭದ್ರತೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು.

ಕಾರಣ ಸರ್ಕಾರ ಒಪ್ಪಿಕೊಂಡಂತೆ ಬೀದರ್ ಮಾದರಿಯಲ್ಲಿ ಸಹಕಾರ ಸಂಘ ರಚಿಸಬೇಕು ಎಂದು ಅವರು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಹಾಸ್ಟೆಲ್ ನೌಕರರು ಕಳೆದ ಜನವರಿ 20ರಿಂದ 27 ದಿನಗಳ ಕಾಲ ನಿರಂತರ ಧರಣಿ ಸತ್ಯಾಗ್ರಹ ಮಾಡಿದಾಗ ಜಿಲ್ಲಾಧಿಕಾರಿಗಳು ಮೂರು ತಿಂಗಳಲ್ಲಿ ಬೇಡಿಕೆ ಈಡೇರಿಸುವುದಾಗಿ ಸಭೆ ಮಾಡಿ ಸರ್ಕಾರಕ್ಕೆ ಅನುಮೋದನೆಗಾಗಿ ಕಳಿಸಿ ನಾಲ್ಕು ತಿಂಗಳಾದರೂ ಯಾವುದೇ ಪ್ರಕ್ರಿಯೆ ಆಗಿಲ್ಲ. ಹೀಗಾಗಿ ಹಾಸ್ಟೆಲ್ ನೌಕರರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ದುಡಿಯುತ್ತಿರುವ ಹೊರಗುತ್ತಿಗೆ ನೌಕರರಿಗೆ ವೇತನ ಪಾವತಿಸಲು ಸರ್ಕಾರದಿಂದ ಅನುದಾನವಿದ್ದರೂ ಕೂಡ ಪವಿತ್ರವಾದ ರಂಜಾನ್ ಹಬ್ಬದಿಂದ ಇಲ್ಲಿಯವರೆಗೆ ನೌಕರರಿಗೆ ಪೂರ್ತಿ ವೇತನ ಆಗಿಲ್ಲ. ನೌಕರರಿಗೆ ಪ್ರತಿ ತಿಂಗಳು ಇಪಿಎಸ್, ಇಎಸ್‌ಐ ಸರಿಯಾಗಿ ಕಟ್ಟದೇ ಮೋಸ ಮಾಡಲಾಗಿದೆ. ಕಳೆದ ಎರಡು ವರ್ಷಗಳಿಂದ ತಾತ್ಕಾಲಿಕ ನೇಮಕಾತಿ ಆದೇಶ ಕೊಟ್ಟಿಲ್ಲ. ಮೈಸೂರಿನ ಶಾರ್ಪ್ (ಸ್ವಿಸ್) ಏಜೆನ್ಸಿಗೆ ಬೆಂಗಳೂರಿನಲ್ಲಿ ಕಂದಾಯ ಇಲಾಖೆಯು ಕಪ್ಪು ಪಟ್ಟಿಗೆ ಸೇರಿಸಿ ಬಹಿರಂಗವಾಗಿ ಪತ್ರ ಹೊರಡಿಸಿದೆ. ಆದಾಗ್ಯೂ, ಕಲಬುರಗಿಯಲ್ಲಿ ಅದೇ ಏಜೆನ್ಸಿಯ ದರಬಾರು ನಡೆದಿದೆ. ಅನೇಕ ಸಲ ಏಜೆನ್ಸಿ ಕುರಿತು ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರೂ ಸಹ ಭ್ರಷ್ಟಾಚಾರ ರಾಜಾರೋಷವಾಗಿ ನಡೆದಿದೆ ಎಂದು ಅವರು ದೂರಿದರು.

ಕೂಡಲೇ ಬೀದರ್ ಮಾದರಿಯಲ್ಲಿ ಸಹಕಾರ ಸಂಘ ರಚಿಸುವಂತೆ, ಸರ್ಕಾರ ನಿಗದಿಪಡಿಸಿದ ಕನಿಷ್ಠ ವೇತನ 25,714ರೂ.ಗಳ ವೇತನ ಜಾರಿ ಮಾಡುವಂತೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಬಾಕಿ ಇರುವ ವೇತನ ಪಾವತಿಸುವಂತೆ, ಸಮಾಜ ಕಲ್ಯಾಣ ಇಲಾಖೆಯಲ್ಲಿ ನಾಲ್ಕು ವರ್ಷ ವೇತನ ಪಾವತಿಸಿದ ಶಾರ್ಪ್ ಏಜೆನ್ಸಿಯಿಂದ ನೌಕರರ ಬಾಕಿ ವೇತನವನ್ನು ಪಾವತಿಸುವಂತೆ, ನೌಕರರ ಹೆಸರಿನಲ್ಲಿ ತುಂಬಲಾರದ ಇಪಿಎಸ್ ಹಣ ಕಟ್ಟಿಸುವಂತೆ, ನೌಕರರಿಗೆ ವಾರಕ್ಕೊಂದು ರಜೆ ಕಡ್ಡಾಯವಾಗಿ ಕೊಡುವಂತೆ ಅವರು ಒತ್ತಾಯಿಸಿದರು. 2014ರ ನಂತರ ಪ್ರಾರಂಭವಾದ ಕ್ರೈಷ ವಸತಿ ನಿಲಯಗಳಲ್ಲಿ ಇನ್ನು ಜನ ಸಿಬ್ಬಂದಿ ಹೆಚ್ಚಿಸುವಂತೆ, ಪ್ರತಿ ತಿಂಗಳು ಐದರೊಳಗೆ ವೇತನ ಪಾವತಿಸುವಂತೆ, ಖಾಯಂ ನೌಕರರು ಒಂದು ವಾರ ಮೇಲ್ಪಟ್ಟು ರಜೆಗೆ ಹೋದಾಗ ಆ ಸ್ಥಳದಲ್ಲಿ ತಾತ್ಕಾಲಿಕವಾಗಿ ಹೊರಗುತ್ತಿಗೆ ನೌಕರರಿಗೆ ನೇಮಿಸುವಂತೆ, ಹೊರಗುತ್ತಿಗೆ ನೌಕರರಿಗೆ ಸೇವಾ ಭದ್ರತೆ ಒದಗಿಸುವಂತೆ ಆಗ್ರಹಿಸಿದರು.

# ಭರತ್ ರೆಡ್ಡಿ ನೇತೃತ್ವದಲ್ಲಿ ಕಾಂಗ್ರೆಸ್‌ಗೆ ಭವಾನಿ ಪ್ರಸಾದ್ ಸೇರ್ಪಡೆ



**ಬಳ್ಳಾರಿ, ಜೂ.15–** ಯಾವುದೇ ಪಕ್ಷವು ಹರಿಯುವ ನದಿಯಿದ್ದಂತೆ, ಹೊಸ ಹೊಸ ಕಾರ್ಯಕರ್ತರ ಸೇರ್ಪಡೆ ಸಹಜ ಪ್ರಕ್ರಿಯೆ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಶನಿವಾರ ನಗರದ 14ನೇ ವಾರ್ಡಿನ ಯುವ ಮುಖಂಡ ಭವಾನಿ ಪ್ರಸಾದ್ ಮತ್ತು ಸ್ನೇಹಿತರು ಬಿಜೆಪಿ ಪಕ್ಷವನ್ನು ತೊರೆದು ನಗರ ಶಾಸಕ ಭರತ್ ರೆಡ್ಡಿ ಮೇಲಿನ ವಿಶ್ವಾಸದಿಂದ ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡು ಸೇರ್ಪಡೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಪಕ್ಷಕ್ಕೆ ಹೊಸಬರು ಸೇರ್ಪಡೆಯಾದರೆ ಬಲ ಹೆಚ್ಚುತ್ತದೆ, ಅವರು ಬೇಡ ಇವರು ಬೇಡ ಎಂದರೆ ರಾಜಕೀಯ ಮಾಡಲಾಗದು ಎಂದು ಅಭಿಪ್ರಾಯಪಟ್ಟರು.

ಭವಾನಿ ಪ್ರಸಾದ್ ಮೂಲತಹ ನನ್ನ ಬೆಂಬಲಿಗರು, ಆದರೆ ಮಧ್ಯದಲ್ಲಿ ಬೇರೆ ದಾರಿ ಹಿಡಿದಿದ್ದರು, ಈಗ ಮತ್ತೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ, ಪಕ್ಷ ಹಾಗೂ ನನ್ನ ಮೇಲೆ ಅವರು ಮತ್ತವರ ಬೆಂಬಲಿಗರು ಇಟ್ಟಿರುವ ಭರವಸೆ ಹುಸಿ ಮಾಡಲಾರೆ, ಅವರೆಲ್ಲರ ಬೆಂಬಲಕ್ಕೆ ನಾನು ಸದಾ ಇರುವೆ ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಕಾಂಗ್ರೆಸ್ ಪಕ್ಷ ಅಲ್ಪಸಂಖ್ಯಾತರ, ಹಿಂದುಳಿದವರ, ದಲಿತರ ಹಾಗೂ ಸರ್ವ ಜನಾಂಗದವರ ಹಿತ ಕಾಪಾಡುವ ಪಕ್ಷ ಎಂದು ಹೇಳಿದ ಅವರು, ಬಳ್ಳಾರಿಯ ಅಭಿವೃದ್ಧಿಯೇ ನನ್ನ ಕನಸು, ಕಾರ್ಯಕರ್ತರನ್ನೆಲ್ಲ ಜೊತೆಗೂಡಿಸಿಕೊಂಡು ಹೋಗುವುದೇ ನನ್ನ ಧ್ಯೇಯ ಎಂದರು.

# ಯೋಗ ದಿನಾಚರಣೆ: ಸಕಲ ಸಿದ್ಧತೆ ಕೈಗೊಳ್ಳಲು ಕಲಬುರಗಿ ಡಿಸಿ ಸೂಚನೆ

**ಕಲಬುರಗಿ, ಜೂ.14–** ಇದೇ ಜೂನ್ 21 ರಂದು ನಡೆಯುವ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಕಾರ್ಯಕ್ರಮ ಆಯೋಜಿಸಲಾಗಿದ್ದು, ಜಿಲ್ಲಾಮಟ್ಟದ ಅಧಿಕಾರಿಗಳು ಸಕಲ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಆಯುಷ್ ಇಲಾಖೆ, ಮಹಾವಿದ್ಯಾಲಯಗಳ ಪ್ರಾಂಶುಪಾಲರು ಮತ್ತು ವಿವಿಧ ಯೋಗ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ನಿರ್ಧರಿಸಲಾಯಿತು. ಜೂನ್ 21 ರಂದು ಬೆಳಿಗ್ಗೆ 7.00 ಗಂಟೆಗೆ ಯೋಗ ಕಾರ್ಯಕ್ರಮ ಅರಂಭವಾಗಲಿದ್ದು, 7.45 ಗಂಟೆಯವರೆಗೆ ನಂತರ ವೇದಿಕೆ ಕಾರ್ಯಕ್ರಮ ಜರುಗಲಿದೆ ಎಂದರು.

ಈ ವರ್ಷದ 'ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದೊಂದಿಗೆ ಆಚರಿಸಲು ಕಾರ್ಯಕ್ರಮವನ್ನು ಯಶ್ವಸಿಗೊಳಿಸಲು ಸೂಚನೆ ನೀಡಿದರು. ಈ ಯೋಗ ದಿನಾಚರಣೆಯಲ್ಲಿ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು,ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು, ವಸತಿನಿಲಯದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಕ್ಕಳಿಗೆ ಕ್ರೀಡಾಂಗಣಕ್ಕೆ ಕರೆ ತರಲು ವಾಹನದ ವ್ಯವಸ್ಥೆ ಮಾಡಲು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸೂರ್ಯಕಾಂತ ಮದಾನೆ ಹಾಗೂ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸೂರೇಶ ಅಕ್ಕಣ್ಣ ಅವರಿಗೆ ಸೂಚನೆ ನೀಡಿದರು.

ಸಾಮಾಜಿಕ ಮಾದ್ಯಮಗಳು ಮತು ವಿಡಿಯೋಗಳ ಮೂಲಕ ಯೋಗ ದಿನಾಚರಣೆಯ ಕುರಿತು ಪ್ರಚಾರವನ್ನು ನೀಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಪ್ರತಿಯೊಬ್ಬ ಅಧಿಕಾರಿಯು ಪ್ರಾಮಾಣಿಕತೆಯಿಂದ ಶ್ರಮವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಹೇಳಿದರು.



ಯೋಗವನ್ನು ಮಾಡುವುದರಿಂದ ವ್ಯಕ್ತಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಡನಾಗುತ್ತಾನೆ. ಹಾಗೂ ವ್ಯಕ್ತಿಯು ಏಕಾಗ್ರತೆಯಿಂದ ಜೀವನದಲ್ಲಿ ಏನಾದರು ಸಾಧನೆಯನ್ನು ಮಾಡಲು ಸಾಧ್ಯವಿದೆ ಎಂದು ಹೇಳಿದರು.

ಅಂದು ನಡೆಯುವ ಕಾರ್ಯಕ್ರಮಕ್ಕೆ ಅಧಿಕಾರಿಗಳು ಅಚ್ಚುಕಟ್ಟಾಗಿ ಕೆಲಸವನ್ನು ನಿರ್ವಹಿಸಬೇಕೆಂದರು. ಕಲಬುರಗಿ ಅಧೀನದಲ್ಲಿ ಬರುವ 8 ಮತ್ತು 9 ನೇ ಹಾಗೂ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಎಲ್ಲಾ ಶಾಲಾ ಕಾಲೇಜುಗಳಿಂದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಅವರಿಗೆ ಕರೆ ತರುವ ಜವಬ್ದಾರಿ ತಮ್ಮದಾಗಿರುತ್ತದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಅಗಮಿಸುವವರಿಗೆ ಲಘು ಉಪಹಾರ ಮತ್ತು ನೀರಿನ ವ್ಯವಸ್ಥೆ ಯೋಗಸನ ಮಾಡಲು ಮ್ಯಾಟ್ ವ್ಯವಸ್ಥೆ ಮತ್ತು ವೇದಿಕೆ ಹಾಗೂ ಧ್ವನಿವರ್ಧಕ ವ್ಯವಸ್ಥೆ ಮತ್ತು ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮಕೈಗೊಳಬೇಕು. ವಿ.ಐ.ಪಿ.ಗಳ ಸಲುವಾಗಿ ಯೋಗ ಮ್ಯಾಟ್ ಹಾಗೂ ಬ್ಯಾನರ್‌ಗಳ ಬಗ್ಗೆ ಕ್ರಮವಹಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಅಮೃತ್ ಅಷ್ಟಗಿ ಅವರಿಗೆ ಸೂಚಿಸಿದರು.

ಪೋಲಿಸ್ ಇಲಾಖೆಗೆ ಸುರಕ್ಷೆ ಒದಗಿಸಲು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಮಗೆ ನೀಡಿದ ಕೆಲಸ ಕಾರ್ಯಗಳ ಬಗ್ಗೆ ಜವಬ್ದಾರಿಯಿಂದ ನಿರ್ವಹಿಸಬೇಕೆಂದರು. ಅಂದು ನಡೆಯುವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕು. ಎಲ್ಲಾ ವಸತಿ ನಿಲಯ ಮತ್ತು ವಸತಿ ಶಾಲೆಯ ವಿದ್ಯಾರ್ಥಿಗಳಿಗೆ, ಅಂಗನವಾಡಿ ಶಿಕ್ಷಕಿಯರು, ಆಶಾ ಕಾರ್ಯಕರ್ತೆಯರು, ಸ್ವಸಹಾಯ ಗುಂಪುಗಳಿಗೆ ಸ್ಕೌಟ್ಸ್ ಆಂಡ್ ಗೈಡ್ಸ್ ಮತ್ತು ಇನ್ನೀತರೆ ಜನರಿಗೆ ಪೂರ್ವಭಾವಿಯಾಗಿ ಯೋಗ ಪ್ರಾತ್ಯಕ್ಷಿತೆ ಮಾಡಲು ಹಾಗೂ ಜಿಲ್ಲೆಯ ವಿವಿಧ ಇಲಾಖೆ ಸಿಬ್ಬಂಧಿಗಳಿಗೂ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ನಿರ್ದೇಶಿಸಿದರು.

ಅದೇ ರೀತಿಯಾಗಿ ಗ್ರಾಮ ಪಂಚಾಯತ್ ಗಳಲ್ಲಿ ಅಂಗನವಾಡಿಗಳಲ್ಲಿ ಎಲ್ಲ ಶಾಲಾ ಕಾಲೇಜ್‌ಗಳಲ್ಲಿ ಯೋಗ ಅಭ್ಯಾಸ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮಾತನಾಡಿ, ಅಂದು ನಡೆಯುವ ಕಾರ್ಯಕ್ರಮ ಸೂಕ್ತ ಪೋಲಿಸ್ ಬಂದೋಬಸ್ತ್ ನಿಯೋಜಿಸಲಾಗುವುದು ಎಂದರು. ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮಾತನಾಡಿ, ಯೋಗ ಧನುಷ್ ಆ್ಯಪ್ ನಲ್ಲಿ ಯೋಗದ ಕುರಿತು ಸಂಪೂರ್ಣ ಮಾಹಿತಿ ತಿಳಿದುಕೊಳ್ಳಲು ಸಹಕರಿಯಾಗಿದೆ. ಎನ್.ಎಸ್.ಎಸ್. ಎನ್.ಸಿ.ಸಿ. ಅಧಿಕಾರಿಗಳು ಸಾರ್ವಜನಿಕರು ಯೋಗ ದಿನಾಚರಣೆಯಲ್ಲಿ ಭಾಗವಹಿಸಿ ಶ್ರಮಧಾನ ಮಾಡುವ ಮೂಲಕ ಸುತ್ತಲಿನ ವಾತವರಣದ ಸ್ವಚ್ಛತೆ ನೈರ್ಮಲ್ಯ ಕಾಪಾಡುವ ಮೂಲಕ ಯೋಗ ದಿನಾಚರಣೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಅವರು ಹೇಳಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿಯುಡಿಸಿ ಯೋಜನಾ ನಿರ್ದೇಶಕ ಮುನ್ನವರ್ ದೌಲಾ, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಪ್ಪ ಕ್ಯಾತನಾಳ, ಅಲ್ಪ ಸಂಖ್ಯಾತರ ಕಲ್ಯಾಣಾಧಿಕಾರಿ ಜಾವೀದ ಕರಂಗಿ, ಜಿಲ್ಲಾ ಆಯುಷ್ ಇಲಾಖೆ ಪ್ರಭಾರಿ ಅಧಿಕಾರಿ ಡಾ.ಕೆ.ಬಿ. ಬಬಲಾದಿ, ಆರ್ಯುವೇಧಿಕ ಯೂನಾನಿ ಹೋಮಿಯೋಪಥಿ ಪ್ರಾಚಾರ್ಯರು. ಯೋಗ ಸಂಘ ಸಂಸ್ಥೆಗಳು ಸೇರಿದಂತೆ ವಿವಿಧ ಶಾಲಾ ಕಾಲೇಜಿನ ಪ್ರಾಂಶುಪಾಲಕರು ವಿವಿಧ ಸಂಘ ಸಂಸ್ಥೆಗಳು, ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

### ಸನಾತನ ಧರ್ಮ ರಾಮ–ಕೃಷ್ಣರಿಗಿಂತಲೂ ಪುರಾತನ

# ಧರ್ಮದ್ರೋಹಿಗಳಿಂದ ಸನಾತನ ಧರ್ಮದ ಅಸ್ಥಿರತೆ ಯತ್ನ: ಪುಷ್ಪೇಂದ್ರ ಕುಲಶ್ರೇಷ್ಠ

**ಬೀದರ್, ಜೂ.14–** ಸನಾತನ ಧರ್ಮ ಪುರಾತನ ಧರ್ಮವಾಗಿದೆ. ರಾಮ–ಕೃಷ್ಣರಿಗಿಂತಲೂ ಪೂರ್ವದಿಂದಲೂ ಅಸ್ತಿತ್ವದಲ್ಲಿದೆ. ಹಾಗಾಗಿ ಇದರ ಆದಿ ಅಂತ್ಯ ಅರಿಯಲು ಸಾಧ್ಯ. ಇದು ಸತ್ಯದ ಮೇಲೆ ನಿಂತಿದೆ. 'ದುಷ್ಟ ಶಿಕ್ಷಣ ಶಿಷ್ಟ ರಕ್ಷಣೆ' ಇದರ ಧ್ಯಯವಾಗಿದೆ. ಸತ್ಯವೇ ಇದರ ಸಾರಸರ್ವಸ್ವವಾಗಿದೆ. ಹಾಗಾಗಿ ಸನಾತನ ಧರ್ಮದವರು ಸತ್ಯದ ಪರವಾಗಿ ಮತ್ತು ಅಸತ್ಯದ ವಿರುದ್ಧವಾಗಿರಬೇಕು. ಕೇಂದ್ರದಲ್ಲಿನ ಸನಾತನ ಧರ್ಮದ ಪರವಾಗಿರುವ ಸರ್ಕಾರವಾಗಿದ್ದು, ವಿರೋಧಿಗಳು ಸರ್ಕಾರವನ್ನು ಅಸ್ಥಿರಗೊಳಿಸುತ್ತಿದ್ದಾರೆ ಎಂದು ನವದೆಹಲಿಯ ಖ್ಯಾತ ಸನಾತನ ರಾಷ್ಟ್ರೀಯವಾದಿ ವಾಗ್ಮಿ ಪುಷ್ಪೇಂದ್ರ ಕುಲಶ್ರೇಷ್ಠರು ಅವರು ಕಳವಳ ವ್ಯಕ್ತಪಡಿಸಿದರು.

ನಗರದ ಸ್ವಾಮಿ ಸಮರ್ಥ ಕಲ್ಯಾಣ ಮಂಟಪದಲ್ಲಿ ತುಲಸಿಮಾನಸ ಸೇವಾ ಪ್ರತಿಷ್ಠಾನ ಮತ್ತು ರಾಧಾಕೃಷ್ಣ ಸತ್ಸಂಗ ಸಮೀತಿರವರು ಆಯೋಜಿಸಿದ ಸನಾತನ ಸಂಸ್ಕೃತಿ ಉತ್ಸವದಲ್ಲಿ ಉಪನ್ಯಾಸ ನೀಡಿದ ಅವರು, ಸನಾತನ ಧರ್ಮ ಆತ್ಮಕಲ್ಯಾಣ ಲೋಕಕಲ್ಯಾಣ ಬಯಸುತ್ತದೆ. ಜ್ಞಾನ ಸೇವೆ ವೈರಾಗ್ಯ ಪ್ರಕೃತಿ ನಿಯಮ ಪಾಲಿಸುತ್ತದೆ. ಸನಾತನಿಯಾದವನು ಧರ್ಮದ ಪರವಾಗಿರುವಂತೆ ನೋಡಿಕೊಳ್ಳುತ್ತದೆ ಎಂದರು.

ಕಟು ಸತ್ಯವೆಂದರೆ, ಭಾರತದ ಶ್ರೀಮಂತ ಸಾಂಸ್ಕೃತಿಕ ಮತ್ತು ಭೌತಿಕ ಸಂಪತ್ತಿನ ಮೇಲೆ ಪ್ರಭುತ್ವ ಸಾಧಿಸಲು ಒಳಹೊರಗಿನ ದುಷ್ಟ ಶಕ್ತಿಗಳು ಪ್ರಯುತ್ನಿಸುತ್ತಯಲೇ ಬಂದಿವೆ. ಸನಾತನ ಧರ್ಮ ತ್ಯಾಗ ರೋಪಕಾರತೆಗೆ ಪರಾಕ್ರಮತೆಗೆ ಹೆಸರಾಗಿದೆ. ದುಷ್ಟಶಕ್ತಿಗಳ ..ಡ್ಯಂತ್ರಗಳನ್ನು ಸುಳ್ಳು ಸೃಷ್ಟಿಗಳನ್ನು ಇಲ್ಲಿನವರು ಅರಿಯದೇ ಹೋದ್ದರಿಂದ ಬಾರತೀಯರು ಬಾರತೀಯರು ಇಲ್ಲಿವರೆಗೆ ಬಹಳಷ್ಟು ಭೌತಿಕ ಭೌಗೋಳಿಕ ಮತ್ತು ಮಾನವ ಸಂಪತ್ತು ಇತಿಹಾಸದುದ್ದಕ್ಕೂ ಕಳೆದುಕೊಳ್ಳುತ್ತಾ ಬಂದಿದ್ದಾರೆ. ಈಗಲೂ ಕಳೆದುಕೊಳ್ಳುತ್ತಿದ್ದಾರೆ. ಇದರ ಅರಿವು ಮೂಡಿಸಲು ಕ್ರಿ.ಶ.2011ರಿಂದ ನಾನು ದೇಶಾದ್ಯಂತ ಜಾಗೃತಿ ಯಾತ್ರೆ ನಿಸ್ವಾರ್ಥತೆಯಿಂದ ಕೈಗೊಂಡಿದ್ದೇನೆ. ನಾನು ಯಾರದೇ ಅಡಿಯಾಳಾಗಿಲ್ಲ. ಕೈಗೊಂಬೆಯಾಗಿಲ್ಲ. ನಮ್ಮ ದೇಶ ನಮ್ಮ ಸನಾತನ ಧರ್ಮ ಬೆಳಗಿಸಿ ಬಲಿಷ್ಠಗೊಳಿಸಬೇಕೆಂಬ ಆಶೆ ನನ್ನದ್ದಾಗಿದೆ. ಸಾವಿಗೂ ನಾನು ಅಂಜುವುದಿಲ್ಲಾದ್ದರಿಂದ ನನಗೆ ಸತ್ಯ ಕಂಡದ್ದನ್ನು ನಿರ್ಭಿಡೆಯಿಂದ ಹೇಳುತ್ತೇನೆ ಎಂದು ಅವರು ಹೇಳಿದರು.



ಸ್ವಾಮಿ ಸಮರ್ಥ ಕಲ್ಯಾಣ ಮಂಟಪದಲ್ಲಿ ತುಲಸಿಮಾನಸ ಸೇವಾ ಪ್ರತಿಷ್ಠಾನ ಮತ್ತು ರಾಧಾಕೃಷ್ಣ ಸತ್ಸಂಗ ಸಮೀತಿರವರು ಆಯೋಜಿಸಿದ ಸನಾತನ ಸಂಸ್ಕೃತಿ ಉತ್ಸವ ಉದ್ಘಾಟಿಸಿ ನವದೆಹಲಿಯ ಖ್ಯಾತ ಸನಾತನ ರಾಷ್ಟ್ರವಾದಿ, ವಾಗ್ಮಿ ಪುಷ್ಪೇಂದ್ರ ಕುಲಶ್ರೇಷ್ಠ ಅವರು ಉಪನ್ಯಾಸ ನೀಡಿದರು. ಕೇಂದ್ರದ ಮಾಜಿ ಸಚಿವ ಭಗವಂತ್ ಖೂಬಾ, ದಕ್ಷಿಣ ಕ್ಷೇತ್ರದ ಶಾಸಕ ಶೈಲೇಂದ್ರ ಬೆಲ್ದಾಳೆ, ಕೃಷ್ಣ ಮಹಾರಾಜ್ ರಾಮಾಯಣಿ ಅವರೂ ಇದ್ದಾರೆ.

ಇಂದಿನ ಕೇಂದ್ರ ಸರ್ಕಾರ ಒಳ್ಳೆ ಆಡಳಿತ ನೀಡುತ್ತಿದ್ದರೂ ಮತ್ತು ಅಂತರಾಷ್ಟೀಯ ಮಟ್ಟದಲ್ಲಿ ಎಲ್ಲ ರಂಗಗಳಲ್ಲಿ ಮುಂದಿದ್ದರೂ ಜನರ ಕಣ್ಣಿಗೆ ಮಣ್ಣೆರಚಿ ಅಪಪ್ರಚಾರ ಮಾಡುತ್ತಿದ್ದಾರೆ. ಆನ ಜಾಗೃತರಾಗಿ ಇಂತಹವರ ಬಣ್ಣ ಬಯಲಾಗಿಸಬೇಕಾಗಿದೆ. ಇಂತಹವರು ಭಾರತದ ಹಿನ್ನಡೆಗೆ ನಿರಂತರ ಕಾರಣರಾಗುತ್ತಲೇ ಬಂದಿದ್ದಾರೆ. ಈಗ ಭಾರತ ಮುನ್ನಡೆ ಸಾಧಿಸುತ್ತಿರುವುದು ಇವರಿಗೆ ಆಗಿ ಬರುತ್ತಿಲ್ಲ. ಹಾಗಾಗಿ ಭಾರತದ 84 ಕೋಟಿ ಸನಾತನ ಹಿಂದುಗಳು ಒಂದಾಗಿ ಜಾಗೃತರಾಗಿ ಪ್ರಲೋಭನೆಗೆ ಒಳಗಾಗದೇ ಕೇಂದ್ರ ಮತ್ತು ರಾಜ್ಯಗಳಲ್ಲಿ ಸನಾತನ ಧರ್ಮದ ಪರ ಇರುವ ಅಭ್ಯರ್ಥಿಗಳಿಗೆ ಆರಿಸಿ ತರಬೇಕಾದುದು ಜರೂರಾಗಿದೆ ಎಂದರು.

ಭಾರತೀಯರು ತಮ್ಮ ತಪ್ಪುಗಳಿಂದಾಗಿ ಇತಿಹಾಸದಲ್ಲಿ ಬಹಳಷ್ಟು ಅನಾಹುತ ಎದುರಿಸಿದ್ದಾರೆ. ಅಂತಹ ತಪ್ಪುಗಳನ್ನು ಮತ್ತೇ ಮಾಡಿದರೆ ಅದು ಸ್ವಯಂ ಕೃತಾಪರಾಧವಾಗುತ್ತದೆ. ಕ್ರಿ.ಶ, 1947ರ ಸ್ವತಂತ್ರ್ಯ ಪೂರ್ವ ಮತ್ತು ನಂತರ ದೇಶಪ್ರೇಮಿಗಳನ್ನು ಮೂಲೆಗುಂಪು ಮಾಡಲಾಯಿತು. ಅಂತಹವರಿಗೆ ಸಾಕಷ್ಟು ಕಿರುಕುಳ ನೀಡಲಾಯಿತು. ಇಂದಿನ ಕೇಂದ್ರ ಸರ್ಕಾರ ಹಿಂದಿನ ಇಂದಿನ ದೇಶ ಪ್ರೇಮಿಗಳಿಗೆ ಸೂಕ್ತ ಗೌರವ ಸಲ್ಲಿಸುತ್ತಿದೆ. ಇದು ಹೆಮ್ಮೆಯ ವಿಷಯವಾಗಿದೆ. ಸುಭಾಷಚಂದ್ರ ಭೋಸ್, ಸರ್ದಾರ್ ವಲ್ಲಭಭಾಯಿ ಪಟೇಲ್‌ರ ಬೃಹತ್ ಪ್ರತಿಮೆ ಅನಾವರಣಗೊಳಿಸಲಾಗಿದೆ. ಸಾವರಕರ ರಿಗೂ ಸಂಸತ್ತನಲ್ಲಿ ಗೌರವಾರ್ಹಗೊಳಿಸಲಾಗಿದೆ ಎಂದು ಅವರು ಸಂತೋಷ ವ್ಯಕ್ತಪಡಿಸಿದರು.

ಭಾರತದಲ್ಲಿ ಇವತ್ತು ಸನಾತನ ವಿರೋಧಿ ಪಕ್ಷದಲ್ಲಿರುವವರು ಬಹಳಷ್ಟು ಜನರಿದ್ದಾರೆ. ಅವರು ಆಯಾ ಪಕ್ಷದ ಸಿಧ್ಧಾಂತಗಳಿಗೆ ಅನಿವಾರ್ಯವಾಗಿ ಕಟಿಬಿದ್ದಿದ್ದಾರೆ. ಅವರಿಗೆ ರಾಷ್ಟ್ರದ ಹಿತಕ್ಕಿಂತ ತಮ್ಮ ನಾಯಕನ ಹಿತ ಮುಖ್ಯವಾಗಿದೆ. ಅವರು ಹಾಗೆ ಮಾಡದೇ ಹೋದರೆ ಅವರಿಗೆ ಪಕ್ಷದ ಸೀಟು ಸಿಗುವುದಿಲ್ಲ. ಸ್ಥಾನಮಾನ ಸಿಗುವುದಿಲ್ಲ. ಹೀಗಾಗಿ ಅವರ ವಿರೋಧದ ಹಿಂದಿನ ತಾತ್ಪರ್ಯ ಅರಿಯಬೇಕಾಗಿದೆ ಎಂದು ಅವರು ಹೇಳಿದರು.

ಭಾರತದಲ್ಲಿ ಗುಣಕ್ಕೆ ಮಹತ್ವ ಕೊಡಲಾಗಿದೆ. ಒಳ್ಳೆಗುಣ ನಡತೆಯಿದವರಿಗೆ ತಿರಸ್ಕರಿಸಬೇಕಾಗಿದೆ. ಅಂಬೇಡ್ಕರರು ದೊಡ್ಡ ಜ್ಞಾನಿಗಳಾಗಿದ್ದರು. ನಿಸ್ವಾರ್ಥಿಗಳಾಗಿದ್ದರು. ರಾಷ್ಟ್ರದ ಹಿತಚಿಂತಕರಾಗಿದ್ದರು. ಅವರ ಮೂಲ ಸಂವಿಧಾನದಲ್ಲಿ ಭಾರತದ ಹೆಮ್ಮೆಗೆ ಕಾರಣವಾಗುವ ಚಿತ್ರಗಳಿದ್ದವು. ಅವನ್ನು ತೆಗೆಯಲಾಗಿದೆ. ಅವರ ಸಮಗ್ರವಾದ ವಿಚಾರಧಾರೆ ಮರೆಮಾಚಲಾಗಿದೆ. ಅವರ ವಿಚಾರಧಾರೆಯಂತೆ ನಡೆಯದವರು ಅಂಬೇಡ್ಕರ್ ವಾದಿಗಳಾಗಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದರು.ಭಾರತ ದೇಶದಲ್ಲಿ ಇವತ್ತು ಭಾರಿ ಬದಲಾವಣೆ ಕಂಡುಬರುತ್ತದೆ. 250ಕ್ಕೂ ಹೆಚ್ಚಿನ ಚಾನಲ್‌ಗಳು ಇವತ್ತಿನ ಸೈನಿಕ ಕಾರ್ಯಾಚರಣೆ ಬಿತ್ತರಿಸಿವೆ. ಹಿಂದಿನ ಭಾರತ ಮೊದಲು ಯುದ್ಧ ಮಾಡುವುದಿಲ್ಲ ಎಂದಿತ್ತು. ಆದರೆ ಇಂದಿನ ಕೇಂದ್ರ ಸರ್ಕಾರದ ನೀತಿ ಶತ್ರುವಿನ ಅಟ್ಟಹಾಸಕ್ಕೆ ಮೊದಲು ತಕ್ಕ ಶಾಸ್ತಿ ಎನ್ನುವುದು ಈಗ ಕಾರ್ಯಾಚರಣೆಯಲ್ಲಿದೆ ಎಂದು ಶ್ಲಾಘಿಸಿದರು.



ಧಾರಾಕಾರ ಮಳೆಯಿಂದಾಗಿ ಶನಿವಾರ ಮಂಗಳೂರಿನ ಅತ್ತಾವರ ಬಳಿ ಚರಂಡಿಯ ತಡೆಗೋಡೆ ಕುಸಿದಿದೆ.

## ಬಾಲ್ಯವಿವಾಹದಿಂದ ತಪ್ಪಿಸಿಕೊಂಡ ದಿಟ್ಟ ವಿದ್ಯಾರ್ಥಿನಿ

**ಬೀದರ್, ಜೂ.14–** ಇಷ್ಟವಿಲ್ಲದಿದ್ದರೂ ಯುವಕನೊಂದಿಗೆ ನನ್ನ ವಿವಾಹವನ್ನು ಕುಟುಂಬದವರು ನಿಶ್ಚಯ ಮಾಡಿದ್ದಾರೆ. ಇದರಿಂದ ನನ್ನನ್ನು ಪಾರು ಮಾಡಬೇಕು ಎಂದು 17 ವರ್ಷದ ಅಪ್ರಾಪ್ತ ವಯಸ್ಸಿನ ಬಾಲಕಿಯೊಬ್ಬಳು ಮಕ್ಕಳ ಸಹಾಯವಾಣಿ 1098ಕ್ಕೆ ಕರೆ ಮಾಡಿ ಮದುವೆ ನಿಲ್ಲಿಸಲು ಮನವಿ ಮಾಡಿರುವ ಘಟನೆ ಬೆಳಕಿಗೆ ಬಂದಿದೆ.

ನಾನಿನ್ನೂ ಪಿಯುಸಿ ಮೊದಲ ವರ್ಷದಲ್ಲಿ ಓದುತ್ತಿದ್ದೇನೆ. ಇಷ್ಟವಿಲ್ಲದಿದ್ದರೂ ಹುಮ್ನಾಬಾದ್ ಯುವಕನೊಂದಿಗೆ ನನ್ನ ವಿವಾಹವನ್ನು ಕುಟುಂಬದವರು ನಿಶ್ಚಯ ಮಾಡಿದ್ದಾರೆ. ಇದರಿಂದ ನನ್ನನ್ನು ಪಾರು ಮಾಡಬೇಕು ಎಂದು ವಿದ್ಯಾರ್ಥಿನಿ ಮನವಿ ಮಾಡಿದ್ದಳು. ತಕ್ಷಣ ಬಾಲಕಿ ಮನೆಗೆ ಬೇಟಿ ನೀಡಿದ ಅಧಿಕಾರಿಗಳ ತಂಡ ಪೋಷಕರಿಗೆ ಮನವರಿಕೆ ಮಾಡಿ ಬಾಲಕಿ ಸಮ್ಮುಖದಲ್ಲಿ ಸಂಬಂಧಿಕರು ಹಾಗೂ ಮದುವೆ ನಿಶ್ಚಯವಾದ ಯವಕನ ಪೋಷಕರನ್ನು ಕರೆಸಿಕೊಂಡು ಎಲ್ಲರ ಸಮ್ಮುಖದಲ್ಲಿ ಮುಚ್ಚಳಿಕೆ ಬರೆಸಿಕೋಂಡು ಎಚ್ಚರಿಕೆ ನೀಡುವ ಮೂಲಕ ಬಾಲ್ಯ ವಿವಾಹವನ್ನು ತಪ್ಪಿಸಿದ್ದಾರೆ. ಹುಮ್ನಾಬಾದ್ ತಹಸಿಲ್ದಾರ್ ಅಂಜುಂ ತಬಸುಮ್, ಸಿಡಿಪಿಓ, ಮಹಿಳಾ ಪಿಎಸ್ಐ ಸೇರಿದಂತೆ ಇತರೆ ಅಧಿಕಾರಿಗಳೊಂದಿಗೆ ತಹಸಿಲ್ದಾರ್ ಬಾಲಕಿಯ ಮನೆಗೆ ಭೇಟಿ ನೀಡಿದ್ದು, ಅಧಿಕಾರಿಗಳ ಕಾರ್ಯಕ್ಕೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶಶಿಧರ ಕೊಸಂಭೆ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



ಬೀದರನಲ್ಲಿ ಅಪ್ರಾಪ್ತೆಯ ಮದುವೆ ನಡೆಯುತ್ತಿರುವ ಬಗ್ಗೆ ಬಾಲಕಿಯೇ ಸಹಾಯವಾಣಿಗೆ ಕರರೆ ಮಾಡಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳ ತಂಡ ಮನೆಗೆ ಭೇಟಿ ನೀಡಿ ಮದುವೆ ನಿಲ್ಲಿಸಿದರು.

### ಸೂರತ್-ಚೆನ್ನೈ ಆರ್ಥಿಕ ಕಾರಿಡಾರ್

## ರಸ್ತೆ ಕಾಮಗಾರಿ ವೀಕ್ಷಿಸಿದ ಸಂಸದ ಕುಮಾರನಾಯಕ

**ರಾಯಚೂರು, ಜೂ.14–** ಜಿಲ್ಲೆಯಲ್ಲಿ ಹಾದುಹೋಗಿರುವ ಚೆನ್ನೈ ಸೂರತ್ ರಸ್ತೆಯನ್ನು ರಾಯಚೂರು– ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಅವರು, ರಾಯಚೂರು ಜಿಲ್ಲೆಯ ಮೂಲಕ ಹಾದುಹೋಗುವ ಸೂರತ್–ಚೆನ್ನೈ ಆರ್ಥಿಕ ಕಾರಿಡಾರ್ ರಸ್ತೆಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಗುಣಮಟ್ಟದ ಕುರಿತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕ್ಯಾಂಪ್ ಅಧಿಕಾರಿಗಳೊಂದಿಗೆ ವೀಕ್ಷಣೆ ನಡೆಸಿ ಸಭೆ ನಡೆಸಿದರು.

ಈ ವೇಳೆ ಅಧಿಕಾರಿಗಳೊಂದಿಗೆ ಮಾತನಾಡಿದ ಅವರು ಕಾಮಗಾರಿಯೂ ಗುಣಮಟ್ಟದಿಂದ ಕೂಡಿರಬೇಕು, ಆದಷ್ಟು ಬೇಗನೆ ಈ ಕಾಮಗಾರಿ ಪೂರ್ಣಗೊಳ್ಳಬೇಕು, ಕ್ರ್ಯಾಕ್ ಕಂಡುಬಂದಿರುವ ಸ್ಥಳಗಳಲ್ಲಿ ಪುನಃ ಕೆಲಸವನ್ನು ಮಾಡಿಸಲು ರಾಷ್ಟೀಯ ಪ್ರಾಧಿಕಾರದ ಯೋಜನೆ ನಿರ್ದೇಶಕರಿಗೆ ಸೂಚಿಸಿದರು.

ಭಾರತ್ ಮಾಲಾ ಯೋಜನೆಯ ಪ್ಯಾಕೇಜ್–3 ಮತ್ತು 4 ನನ್ನ ಲೋಕಸಭಾ ಕ್ಷೇತ್ರ ವ್ಯಾಪ್ತಿ ಇರುವುದರಿಂದ ಈ ಕಾಮಗಾರಿಯು ಅತ್ಯಂತ ಗುಣಮಟ್ಟದಿಂದ ಕೂಡಿರಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನೆ ನಿರ್ದೇಶಕರು ಭಾವನೇಶ್ ಕುಮಾರ, ಪ್ರಾಧಿಕಾರದ ಸಿಬ್ಬಂದಿಗಳಾದ ಮಂಜುನಾಥ್ ಸೇರದಂತೆ ಅನೇಕರು ಹಾಜರಿದ್ದರು.



ರಾಯಚೂರು ಸಂಸದ ಜಿ.ಕುಮಾರ ನಾಯಕ ಅವರು, ರಾಯಚೂರು ಮೂಲಕ ಹಾದು ಹೋಗುವ ಸೂರತ್–ಚನ್ನೈ ಎಕನಾಮಿಕ್ ಕಾರಿಡಾರ್ ರಸ್ತೆ ಕಾಮಗಾರಿಯನ್ನು ವೀಕ್ಷಿಸಿದರು.

## ರೈತರ ಕಬ್ಬಿನ ಬಾಕಿ ಹಣ ಪಾವತಿಗೆ ಆಗ್ರಹಿಸಿ ಬೃಹತ್ ಮೆರವಣಿಗೆ

**ಬೀದರ್, ಜೂ.14–** ಕಬ್ಬು ಪೂರೈಸಿರುವ ರೈತರ ಖಾತೆಗೆ ಕೂಡಲೇ ಹಣ ಜಮೆ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಗುರುವಾರ ನಗರದ ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಬೃಹತ್ ಮೆರವಣಿಗೆ ನಡೆಸಿದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಮನವಿ ಪತ್ರ ಸಲ್ಲಿಸಿ, ಜಿಲ್ಲೆಯ ರೈತರು ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿ ಸುಮಾರು 6–7 ತಿಂಗಳು ಗತಿಸಿದರೂ ಇಲ್ಲಿಯವರೆಗೆ ಕಬ್ಬು ಸರಬರಾಜು ಮಾಡಿರುವ ರೈತರ ಖಾತೆಗೆ ಹಣ ಜಮೆ ಮಾಡಿಲ್ಲ. ಜಿಲ್ಲಾಧಿಕಾರಿಗಳಿಗೆ, ಜಿಲ್ಲಾ ಉಸ್ತುವಾರಿ ಸಚಿವರಿಗೆ, ಮುಖ್ಯಮಂತ್ರಿಗಳಿಗೆ ಹಲವಾರು ಸಲ ಭೇಟಿಯಾಗಿ ಮನವಿ ಪತ್ರಗಳು ಕೊಟ್ಟರೂ ಪ್ರಯೋಜನವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಖಾನೆಗಳಲ್ಲಿನ ಸಕ್ಕರೆ ಜಪ್ತಿ ಮಾಡಿದ್ದೀರಿ. ಆದರೆ ಇಲ್ಲಿಯವರೆಗೆ ರೈತರಿಗೆ ಅನುಕೂಲವಾಗಿಲ್ಲ. ಈಗ ಮುಂಗಾರು ಹಂಗಾಮಿನ ಬಿತ್ತು ಸಮಯ ಇರುವುದರಿಂದ ರೈತರಿಗೆ ಬಿತ್ತುವ ಬೀಜ, ಗೊಬ್ಬರ, ಕೃಷಿಯಲ್ಲಿ ಉಳುಮೆ ಮಾಡಲು ಖರ್ಚು, ರೈತರ ಮಕ್ಕಳಿಗೆ ಶಾಲಾ ಕಾಲೇಜುಗಳ ಪ್ರವೇಶ ಶುಲ್ಕ, ಪಠ್ಯ ಪುಸ್ತಕಗಳ ಖರ್ಚು, ಮದುವೆ ಸಮಾರಂಭಗಳು ಹಿಗೆ ಇನ್ನೀತರ ಖರ್ಚು ವೆಚ್ಚಗಳು ಇರುತ್ತವೆ. ಆದರೆ ಜಿಲ್ಲೆಯಲ್ಲಿ ಜಿಲ್ಲಾಡಳಿತ ಹಾಗೂ ಸರ್ಕಾರಗಳಾಗಲೀ, ಚುನಾಯಿತ ಪ್ರತಿನಿಧಿಗಳಾಗಲೀ, ಅಧಿಕಾರಿಗಳಾಗಲೀ ಯಾರಿಗೂ ರೈತರ ಕಾಳಜಿ ಇಲ್ಲದಿರುವುದು ಬಹಳ ವಿಷಾದದ ಸಂಗತಿ ಎಂದು ಅವರು ಬೇಸರ ಹೊರಹಾಕಿದರು.

ಜಿಲ್ಲೆಯ ರೈತರು ಕೇಳುತ್ತಿರುವುದು ಭೀ–ಕ್ಷೆ ಅಲ್ಲ, ಅವರ ಹಕ್ಕು. ಆದಕಾರಣ ಶೀಘ್ರದಲ್ಲಿ ಕಬ್ಬು ಕಾರ್ಖಾನೆಗಳ ವಿಷಯದಲ್ಲಿ ಗಂಭೀರವಾಗಿ ಪರಿಗಣಿಸಿ, ರೈತರಿಗೆ ದೊರೆಯಬೇಕಾದ ಹಣ ಶೀಘ್ರದಲ್ಲಿ ಅವರ ಖಾತೆಗಳಿಗೆ ಜಮೆ ಮಾಡಿಸಬೇಕು ಎಂದು ಅವರು ಒತ್ತಾಯಿಸಿದರು.ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆಯವರ ನೇತೃತ್ವದ ಸಭೆಯಲ್ಲಿ ಪ್ರತಿ ಟನ್ ಕಬ್ಬಿಗೆ 2700ರೂ.ಗಳ ನಿಗದಿಯಂತೆ ಎಲ್ಲ ರೈತರ ಖಾತೆಗೆ ಜಮೆ ಮಾಡುವಂತೆ, ಭಾಲ್ಕೇಶ್ವರ, ನಾರಂಜಾ ಮತ್ತು ಬಿಕೆಎಸ್‌ಕೆ ಕಾರ್ಖಾನೆಯವರು ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿರುವ ಕೆಲವೇ ರೈತರ ಖಾತೆಗಳಿಗೆ ಹಣ ಜಮೆ ಮಾಡಲಾಗಿದೆ. ಆದರೆ ಇನ್ನೂ ಬಹಳಷ್ಟು ರೈತರ ಬಿಲ್ಲು ಬಾಕಿ ಇದ್ದು, ಅದನ್ನು ಶೀಘ್ರದಲ್ಲಿ ಜಮೆ ಮಾಡಿಸಬೇಕು ಎಂದು ಅವರು ಆಗ್ರಹಿಸಿದರು.

ಮಹಾತ್ಮಾ ಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆಯವರೂ ಕೂಡ ಬೆಲೆ ನಿಗದಿ ಪ್ರಕಾರ ಪ್ರತಿ ಟನ್ ಕಬ್ಬಿಗೆ ಇನ್ನೂ 50ರೂ.ಗಳನ್ನು ಕೊಡಬೇಕು, ಅದನ್ನು ಶೀಘ್ರ ಕೊಡಿಸುವಂತೆ, ನಾರಂಜಾ ಹಾಗೂ ಭಾಲ್ಕೇಶ್ವರ ಸಹಕಾರ ಸಕ್ಕರೆ ಕಾರ್ಖಾನೆಯ ಸಕ್ಕರೆ ತಮ್ಮ ಅಧೀನದಕ್ಕೆ ತೆಗೆದುಕೊಂಡು, ಇವತ್ತಿಗೆ ಸುಮಾರು ಒಂದು ತಿಂಗಳಾದರೂ ಕೂಡ ತಮಗೆ ತಮ್ಮ ಅಧೀನದಲ್ಲಿದ್ದ ಸಕ್ಕರೆ ಮಾರಾಟ



ಬೀದರನಲ್ಲಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಕಾರ್ಯಕರ್ತರು ಕಾರ್ಖಾನೆಗಳಿಗೆ ರೈತರು ಒದಗಿಸಿರುವ ಕಬ್ಬಿನ ಬಿಲ್ ಬಾಕಿ ನೀಡುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು.

# ತಾಂತ್ರಿಕ ಸ್ಪರ್ಧೆಗಳಿಂದ ಪ್ರತಿಭೆಗಳು ಅನಾವರಣಗೊಳ್ಳುತ್ತವೆ: ಬಸವರಾಜ ದೇಶಮುಖ

**ಕಲಬುರಗಿ, ಜೂ.14–** ತಾಂತ್ರಿಕ ಸ್ಪರ್ಧೆಗಳು ಮತ್ತು ಉತ್ಸವಗಳನ್ನು ನಿಯಮಿತವಾಗಿ ಆಯೋಜಿಸುವುದ ರಿಂದ ವಿದ್ಯಾರ್ಥಿಗಳಲ್ಲಿ ಅಡಗಿರುವ ಸೂಪ್ತ ಪ್ರತಿಭೆಗಳನ್ನು ಬಹಿರಂಗ ಪಡಿಸಲು ಮತ್ತು ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಹಾಗೂ ಶಿಸ್ತಿನ ಮನೋಭಾವ ಅಳವಡಿಸಿಕೊಳ್ಳಲು ಪರಿಪೂರ್ಣ ಅವಕಾಶ ಒದಗಿಸಿದಂತಾಗುತ್ತದೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಹೇಳಿದರು.

ಕಲಬುರಗಿ ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪ ಸಭಾಮಂಟಪದಲ್ಲಿ ಶನಿವಾರದಂದು, ಈ ಹಿಂದೆ ಅಪ್ಪಾ ಇನ್ಸಿಟ್ಯೂಟ್ ಆಫ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಎಂದು ಕರೆಯಲ್ಪಡುತ್ತಿದ್ದ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ವಿಭಾಗ ಆಯೋಜಿಸಿದ್ದ 2 ದಿನಗಳ ತಾಂತ್ರಿಕ–ಸಾಂಸ್ಕೃತಿಕ "ಅವಿರತ್" ಉತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವವಿದ್ಯಾಲಯವು ಇಂತಹ ಸ್ಪರ್ಧೆಗಳನ್ನು ನಿಯಮಿತವಾಗಿ ಆಯೋಜಿಸುತ್ತಿರುವುದು ಶರಣಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಮಾತ್ರವಲ್ಲದೆ ಇತರ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ವಿಶ್ವ ವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ವೇದಿಕೆ ಒದಗಿಸಿರುವುದು ತಿಳಿದು ಅತೀವ ಸಂತೋಷವಾಗಿದೆ. ಸ್ಪರ್ಧೆಗಳು ತಾಂತ್ರಿಕ ಅಂಶಕ್ಕೆ ಮಾತ್ರ ಸೀಮಿತವಾಗಿಲ್ಲ, ಸಾಂಸ್ಕೃತಿಕ ಇತರ ಕಾರ್ಯಕ್ರಮಗಳು ಸೇರಿದಂತೆ ತಮ್ಮ ವೈವಿಧ್ಯಮಯ ಪ್ರತಿಭೆಗಳನ್ನು ಪ್ರದರ್ಶಿಸಲು ಅವಕಾಶವನ್ನು ಒದಗಿಸಲಾಗಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ, ವಿದ್ಯಾರ್ಥಿಗಳು ಇಂತಹ ತಾಂತ್ರಿಕ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಶಿಸ್ತು, ಸಮಯಪ್ರಜ್ಞೆ ಮತ್ತು ಸ್ಪರ್ಧಾತ್ಮಕ ಸ್ವಭಾವ ಮೈಗೂಡಿಸಿಕೊಳ್ಳುತ್ತಾರೆ. ಅದೇ ರೀತಿ ಇಂತಹ ಸ್ಪರ್ಧೆಗಳು ವಿವಿಧ ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಸಂಬಂಧಗಳು ಮತ್ತು ಒಡನಾಟ ಬೆಳೆಸಲು ಸಹಾಯ ಮಾಡುತ್ತವೆ ಹಾಗೂ ಅನುಭವಗಳನ್ನು ಹಂಚಿಕೊಳ್ಳಲು, ಬಾಂಧವ್ಯ ಬೆಳೆಸುವ ಅವಕಾಶ ಒದಗಿಸಿತ್ತವೆ ಎಂದರು.





# ಸಚಿವ ಶಿವರಾಜ್ ತಂಗಡಗಿ ಸತತ ಪ್ರಯತ್ನದಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ 2 ವರ್ಷಗಳ ಸಾಧನೆಯ ಹಾದಿ





## ಹಾಸ್ಟೆಲ್‌ನಲ್ಲಿ ಪಾರದರ್ಶಕತೆ; ಸಚಿವರ ಪ್ರಯತ್ನದಿಂದ ಅಂಗೈಯಲ್ಲಿ ಮಾಹಿತಿ

ಎಷ್ಟು ಬಡ ಮಕ್ಕಳಿಗೆ ಓದಿನಲ್ಲಿ ಆಸಕ್ತಿ ಇರುತ್ತದೆ. ಆದರೆ ಸೌಲಭ್ಯಗಳ ಕೊರತೆಯಿಂದ ವಿದ್ಯಾಭ್ಯಾಸವನ್ನು ಮೊಟಕುಗೊಳಿಸುವ ಪರಿಸ್ಥಿತಿ ಎದುರಾಗುತ್ತದೆ. ಇಂತಹ ಸಾವಿರಾರು ಬಡ ಮಕ್ಕಳಿಗೆ ಸರ್ಕಾರಿ ಹಾಸ್ಟೆಲ್‌ಗಳೇ ಆಸರೆ. ಇಷ್ಟು ದೊಡ್ಡ ಸಂಖ್ಯೆಯ ಹಾಸ್ಟೆಲ್‌ಗಳ ನಿರ್ವಹಣೆ ಸವಾಲೇ ಸರಿ.

ಆದರೆ ಬಡತನದ ಬೇಗೆಯಲ್ಲಿ ಬಂದು ಹಾಸ್ಟೆಲ್ ವ್ಯವಸ್ಥೆಯಲ್ಲಿ ಬೆಳೆದ ಸಚಿವ ಶಿವರಾಜ್ ತಂಗಡಗಿ ಅವರು ಇಲಾಖೆ ಜವಾಬ್ದಾರಿ ವಹಿಸಿಕೊಂಡ ಕೂಡಲೇ ಇಲಾಖೆಯ ಹಾಸ್ಟೆಲ್‌ಗಳ ಕಾರ್ಯನಿರ್ವಹಣೆಯಲ್ಲಿ ತೆಗೆದುಕೊಂಡ ಕ್ರಮಗಳು ನಿಜಕ್ಕೂ ಮಾದರಿಯಾಗಿದೆ.

ತಾವು ಅಧಿಕಾರ ವಹಿಸಿಕೊಂಡ ಕೂಡಲೇ ಹಾಸ್ಟೆಲ್‌ಗಳಲ್ಲಿ ಪಾರದರ್ಶಕತೆ, ಸುಧಾರಣೆ ತರುವ ಮೂಲಕ ಸಂಪೂರ್ಣ ಗಣಕೀಕೃತ ಆಡಳಿತ ವ್ಯವಸ್ಥೆ ಜಾರಿಗೊಳಿಸುವಲ್ಲಿ ಸಚಿವರು ಯಶಸ್ವಿಯಾಗಿದ್ದಾರೆ. ಇಲಾಖೆ ಅಧೀನದಲ್ಲಿ ಪೂರ್ವ ಮೆಟ್ರಿಕ್ 1284 ಹಾಗೂ ಮೆಟ್ರಿಕ್ ನಂತರದ 1,162 ಸೇರಿ ಒಟ್ಟು 2,597 ಹಾಸ್ಟೆಲ್‌ಗಳು ಕಾರ್ಯ ನಿರ್ವಹಿಸುತ್ತವೆ. ಮೆಟ್ರಿಕ್ ಪೂರ್ವ ಹಾಸ್ಟೆಲ್‌ಗಳಲ್ಲಿ 66,413 ವಿದ್ಯಾರ್ಥಿಗಳು, ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಲ್ಲಿ 1,18,415 ಮಕ್ಕಳು ಪ್ರವೇಶ ಪಡೆದಿದ್ದಾರೆ. ಇದೀಗ ಹಾಸ್ಟೆಲ್‌ಗಳ ನಿರ್ವಹಣೆಗೆ ಇ– ವ್ಯವಸ್ಥೆ ಜಾರಿಗೆ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ.

ಕಳಪೆ ಆಹಾರ ಪೂರೈಕೆ ಮೂಲ ಸೌಲಭ್ಯಗಳ ಕೊರತೆ ಆರೋಪಗಳು ಈ ತಂತ್ರಾಂಶದ ಅಳವಡಿಕೆಯಿಂದ ಕಡಿಮೆಯಾಗಲಿದೆ.

ಹಾಸ್ಟೆಲ್‌ಗಳಲ್ಲಿ ನಿಗದಿತ ಮೆನು ಚಾರ್ಟ್ ಅನುಸಾರ ಭೋಜನದ ವ್ಯವಸ್ಥೆಯನ್ನು ಪರಿಚಯ ಪರಿಶೀಲಿಸಲಾಗುತ್ತದೆ. ತಯಾರಿಸಲಾದ ಭೋಜನದ ಫೋಟೋಗಳನ್ನ ಈ ತಂತ್ರಾಂಶದ ಮೂಲಕ ಕಡ್ಡಾಯವಾಗಿ ಅಪ್ಲೋಡ್ ಮಾಡಲಾಗುತ್ತದೆ. ಹಾಸ್ಟೆಲ್‌ಗಳಲ್ಲಿ ನಿತ್ಯ ಸ್ವಚ್ಛತೆ, ವಿದ್ಯಾರ್ಥಿಗಳಿಗೆ ನೀಡುವ ಸೌಲಭ್ಯಗಳ ವಿವರಗಳನ್ನು ತಂತ್ರಾಂಶದ ಮೂಲಕ ಪಡೆಯುವ ವ್ಯವಸ್ಥೆ ಕಲ್ಪಿಸಲಾಗಿದೆ.

ಬಡತನದಿಂದ ಬಂದ ನಾನು ಹಾಸ್ಟೆಲ್ ಜೀವನ ಕಂಡಿದ್ದೇನೆ. ಹೀಗಾಗಿ ಹಾಸ್ಟೆಲ್ ಆಹಾರ ಹೇಗಿರುತ್ತದೆ ಎಂದು ತಿಳಿದಿದ್ದೇನೆ. ಹಾಸ್ಟೆಲ್‌ಗಳಲ್ಲಿ ಉತ್ತಮ ಗುಣಮಟ್ಟದ ಆಹಾರ ಪೂರೈಕೆಯೇ ನನ್ನ ಆದ್ಯತೆ. ಈ ಉದ್ದೇಶದಿಂದ ಸಂಪೂರ್ಣವಾಗಿ ಆಹಾರ ಸರಬರಾಜು ವ್ಯವಸ್ಥೆಯನ್ನು ಉನ್ನತೀಕರಿಸಲಾಗಿದೆ ಹಾಗೂ ಪಾರದರ್ಶಕತೆಯನ್ನು ತರಲು ನಿಲಯ ಪೋರ್ಟಲ್‌ನ್ನು ಜಾರಿಗೆ ತರಲಾಗಿದೆ.

ಶಿವರಾಜ್ ಎಸ್.ತಂಗಡಗಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರು ಎರಡು ವರ್ಷದಲ್ಲಿ ಬರೋಬ್ಬರಿ 15 ಸಾವಿರ ಬೋರ್‌ವೆಲ್ ಕೊರೆತ. ರೈತ ಈ ದೇಶದ ಬೆನ್ನೆಲುಬು. ರೈತನಿಗೆ ಅನುಕೂಲ ಮಾಡಿಕೊಡಬೇಕೆಂದೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಗಂಗಾ ಕಲ್ಯಾಣ (ಕೊಳವೆ ಬಾವಿ) ಯೋಜನೆಯನ್ನ ಜಾರಿಗೆ ತರಲಾಗಿದೆ. ಈ ಯೋಜನೆಯಡಿ ಇಲಾಖೆ ವತಿಯಿಂದ ರೂ.3.50 ಲಕ್ಷ ಒದಗಿಸಲಾಗುತ್ತದೆ.

ಕಳೆದ ಮೂರು ವರ್ಷಗಳಲ್ಲಿ ಹಿಂದಿನ ಸರ್ಕಾರ ಹಲವು ನೆಪಗಳನ್ನೊಡ್ಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಒಂದೇ ಒಂದು ಕೊಳವೆ ಬಾವಿ ಕೊರೆಸಿರಲಿಲ್ಲ. ಆದರೆ ಸಚಿವ ಶಿವರಾಜ್ ತಂಗಡಗಿ ಅವರು ಯೋಜನೆಗೆ ತಾಂತ್ರಿಕವಾಗಿ ಅಡ್ಡಿಯಾಗಿದ್ದ ಎಲ್ಲ ಸಮಸ್ಯೆಗಳನ್ನು ಪರಿಹರಿಸಿ ಎರಡು ವರ್ಷದಲ್ಲಿ ದಾಖಲೆ ಸಂಖ್ಯೆಯ ಕೊಳವೆ ಬಾವಿ ಕೊರೆಸುವಲ್ಲಿ ಯಶಸ್ವಿಯಾಗಿದ್ದಾರೆ. ಅಧಿಕಾರಿಗಳ ಬೆನ್ನಿಗೆ ಬಿದ್ದಿದ್ದ ಸಚಿವರು ಇಲಾಖೆ ಅಧಿಕಾರಿಗಳು ಮತ್ತು ನಿಗಮಗಳ ವ್ಯವಸ್ಥಾಪಕರಿಗೆ ನಿರಂತರವಾಗಿ ಕೊಳವೆ ಬಾವಿ ಕೊರೆಸುವ ಬಗ್ಗೆ ಪ್ರಗತಿ ಪರಿಶೀಲನೆ ನಡೆಸಿದ್ದರು. ಪರಿಣಾಮ ಕಳೆದ ಎರಡು ವರ್ಷದಲ್ಲಿ ಬರೋಬ್ಬರಿ 15,460 ಕೊಳವೆ ಬಾವಿ ಕೊರೆಸುವ ಮೂಲಕ ಸೈ ಎನಿಸಿದ್ದಾರೆ.

### ತಂತ್ರಾಂಶದ ವೈಶಿಷ್ಟ್ಯ

ಇ– ತಂತ್ರಾಂಶದಲ್ಲಿ ರಾಜ್ಯದ 31 ಜಿಲ್ಲೆಗಳ ಹಾಸ್ಟೆಲ್‌ಗಳ ವಿವರ ಪಡಿತರ ವಿತರಕರು, ಸಿಬ್ಬಂದಿ ಪಡಿತರ ವಿತರಕರು, ಆಸ್ತಿ, ಗ್ರಂಥಾಲಯ ಹಾಗೂ ಖಾತೆ ನಿರ್ವಹಣೆಯ ವಿವರವನ್ನು ಅಳವಡಿಸಲಾಗಿದೆ. ಆನ್‌ಲೈನ್ ಪ್ರವೇಶಾತಿ, ಹಾಜರಾತಿ ಮತ್ತು ವಿದ್ಯಾರ್ಥಿಗಳ ಚಲನವಲನವನ್ನು ದಾಖಲಿಸಲಾಗುತ್ತದೆ. ಹಾಸ್ಟೆಲ್‌ಗಳಿಗೆ ಬೇಕಾಗುವ ಆಹಾರ ಸಾಮಗ್ರಿಗಳ ಬೇಡಿಕೆಯನ್ನು ಪೋರ್ಟಲ್ ಮೂಲಕ ತಂತ್ರಾಂಶದಲ್ಲಿಯೇ ವಿತರಕರಿಗೆ ತಿಳಿಸಲಾಗುತ್ತದೆ. ಆಹಾರ ಸಾಮಗ್ರಿಗಳ ಬಗ್ಗೆ ದೂರುಗಳಿದ್ದರೆ ವಿದ್ಯಾರ್ಥಿಗಳು ಈ ತಂತ್ರಾಂಶದಲ್ಲಿ ನೇರವಾಗಿ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

### ಗಂಗಾ ಕಲ್ಯಾಣ ಯೋಜನೆ ನೆರವು 3.5 ಲಕ್ಷಕ್ಕೆ ಹೆಚ್ಚಳ

ಗಂಗಾ ಕಲ್ಯಾಣ ಯೋಜನೆಯಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇಲಾಖೆಯಡಿ ಕೇವಲ 2 ಲಕ್ಷ ಘಟಕ ವೆಚ್ಚವನ್ನು ನೀಡಲಾಗುತ್ತಿತ್ತು. ಉಳಿದ ವೆಚ್ಚವನ್ನು ರೈತರೇ ಭರಿಸಬೇಕಿತ್ತು. ರೈತರ ಕಷ್ಟ ಅರಿತಿದ್ದ ಸಚಿವರು ಕೂಡಲೇ ಈ ಸಂಬಂಧ ಅಧಿಕಾರಿಗಳ ಸಭೆ ನಡೆಸಿ ತಾವು ಸಚಿವರಾದ ಕೆಲವೇ ತಿಂಗಳಲ್ಲಿ ಘಟಕದ ವೆಚ್ಚವನ್ನು 2 ಲಕ್ಷದಿಂದ ಮೂರುವರೆ ಲಕ್ಷಕ್ಕೆ ಹೆಚ್ಚಿಸುವಂತೆ ಮಾಡಿ ರೈತರಿಗೆ ಅನುಕೂಲ ಮಾಡಿಕೊಡುವ ರೈತರಿಂದ ಮೆಚ್ಚುಗೆಗೆ ಕಾರಣರಾಗಿದ್ದಾರೆ.

### ನೂತನ 150 ಹಾಸ್ಟೆಲ್ ವ್ಯವಸ್ಥೆ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರತಿ ವರ್ಷ ಎರಡೂವರೆ ಲಕ್ಷ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಇನ್ನು ಹೆಚ್ಚಿನ ಹಾಸ್ಟೆಲ್ ಅಗತ್ಯವಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಬಳಿ ಸಚಿವರು ವಿಶೇಷವಾಗಿ 150 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಅನುದಾನ ಗಿಟ್ಟಿಸಿದ್ದಾರೆ. ಈ ಹಾಸ್ಟೆಲ್ ಗಳಿಗೆ ಕಳೆದ ಡಿಸೆಂಬರ್ ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಚಾಲನೆ ಕೂಡ ನೀಡಲಾಗಿದೆ.

### ಕನಕಗಿರಿ, ಕಲಬುರಗಿಯಲ್ಲಿ ಸೇನಾ ತರಬೇತಿ ಶಾಲೆ

ಸಚಿವರು ತಮ್ಮ ಕೊಪ್ಪಳ ಜಿಲ್ಲೆ ಅದರಲ್ಲೂ ತಾವು ಪ್ರತಿನಿಧಿಸುವ ಕನಕಗಿರಿ ವಿಧಾನಸಭಾ ಕ್ಷೇತ್ರಕ್ಕೆ ಸೈನಿಕ ಶಾಲೆ ತರಬೇಕೆಂದು ಕನಸ್ಸು ಹೊಂದಿ, ಅದಕ್ಕಾಗಿ ಶ್ರಮಿಸಿದ್ದರು. ಆದರೆ ತಾವು ಅಂದುಕೊಂಡಂತೆ ಹಿಂದುಳಿದ ವರ್ಗಗಳ ಇಲಾಖೆಯ ಹೊಣೆಯ ಸಚಿವರಿಗೆ ದೊರಕಿದ ಪರಿಣಾಮ ಕನಕಗಿರಿಗೆ ಸೈನಿಕ ಶಾಲೆ ತರುವಲ್ಲಿ ಸಚಿವ ತಂಗಡಗಿ ಅವರು ಸೈ ಎನಿಸಿಕೊಂಡಿದ್ದಾರೆ. ಕೊಪ್ಪಳ ಜಿಲ್ಲೆಯ ಕನಕಗಿರಿ ಮತ್ತು ಕಲಬುರಗಿಯ ಕೇಂದ್ರ ಸ್ಥಳಗಳಲ್ಲಿ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. (ತಲಾ ಜಿಲ್ಲೆಗೆ ಒಂದು ಬ್ಯಾಚ್ಗೆ 100 ಅಭ್ಯರ್ಥಿಗಳು) ಈಗಾಗಲೇ ಆರಂಭಿಸಿರುವ 3 ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಗಳಲ್ಲಿ ಸುಮಾರು 1,000 ಅಭ್ಯರ್ಥಿಗಳಿಗೆ ಯಶಸ್ವಿಯಾಗಿ ತರಬೇತಿಯನ್ನು ನೀಡಿದ್ದು, ಸುಮಾರು 300ಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸೇನೆಗಳಲ್ಲಿ ದೇಶಾದ್ಯಂತ ಸೇವೆ ಸಲ್ಲಿಸುತ್ತಿದ್ದಾರೆ.



ಯುಪಿಎಸ್ಸಿಗೆ ಸಿದ್ಧತೆ; ದೆಹಲಿಯಲ್ಲಿ ಉಚಿತ ವಸತಿ ವ್ಯವಸ್ಥೆಗೆ ಕ್ರಮ!: ಕೇಂದ್ರ ಲೋಕಾಸೇವಾ ಆಯೋಗದ (ಯುಪಿಎಸ್ಸಿ) ಪರೀಕ್ಷೆಗೆ ಸಿದ್ಧತೆ ನಡೆಸುವ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಬೆಂಗಳೂರು ಹಾಗೂ ದೆಹಲಿಯಲ್ಲಿ ಉಚಿತ ವಸತಿ ವ್ಯವಸ್ಥೆ ಕಲ್ಪಿಸುವ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರು ಅಗತ್ಯ ಕ್ರಮವಹಿಸಿದ್ದಾರೆ.



### ನಿಗಮ ನೊಂದಣಿ ಮಾಡಿಸಿ ಅನುದಾನ ಒದಗಿಸಿದರು!

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಹತ್ತು ನಿಗಮಗಳು ಕಾರ್ಯ ನಿರ್ವಹಿಸುತ್ತಿದ್ದು, ಹಿಂದಿನ ಸರ್ಕಾರ ಕೇವಲ ಭಾಷಣದಲ್ಲಿ ನಿಗಮಗಳ ಘೋಷಣೆ ಮಾಡಿ ಹೋಗಿದ್ದು, ನೋಂದಣಿ ಕೂಡ ಮಾಡಿಸಿರಲಿಲ್ಲ. ಆದರೆ ಶಿವರಾಜ್ ತಂಗಡಗಿ ಅವರು ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಬಳಿಕ ಮುಖ್ಯವಾಗಿ ಅವರ ಬಳಿ ಚರ್ಚಿಸಿ, ಘೋಷಣೆ ಮಾಡಿ ಹೋಗಿದ್ದ ನಿಗಮಗಳಿಗೆ ಅನುದಾನ ಒದಗಿಸಿ ಜೀವ ತುಂಬಿದ್ದರು.

### ಸ್ವಾವಲಂಬಿ ಜೀವನಕ್ಕೆ ಆಸರೆ

ಮುಖ್ಯವಾಗಿ ಕೃಷಿ ಜಮೀನಿನಲ್ಲಿ ಕೊಳವೆ ಬಾವಿ ಕೊರೆದು ವಿದ್ಯುತ್ ಸಂಪರ್ಕ, ಮೋಟಾರ್ ಅಳವಡಿಸುವ "ಗಂಗಾ ಕಲ್ಯಾಣ ಯೋಜನೆ' ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಹೆಚ್ಚಿನ ಆದ್ಯತೆ ನೀಡಿವೆ. ಕೃಷಿ ಲಾಭಾದಾಯಕವಾಗಿ ಪರಿವರ್ತಿಸಿ ಆದಾಯ ವೃದ್ಧಿಗೆ ಆಸರೆಯಾಗಿವೆ. ಶಿಕ್ಷಣ, ವಿದೇಶದಲ್ಲಿ ವ್ಯಾಸಂಗಕ್ಕೆ ಸಾಲ, ಸ್ವಯಂ ಉದ್ಯೋಗ, ವಿವಿಧ ಕಸಬುಗಳಡಿ ಆದಾಯೋತ್ಪನ್ನ ಚಟುವಟಿಕೆಗಳಿಗೆ ಸಾಲಗಳಿಗೆ ಸಹಾಯಧನ ಸೌಲಭ್ಯವನ್ನು ಯಥೋಚಿತವಾಗಿ ನೀಡಿ, ಅರ್ಹ ಫಲಾನುಭವಿಗಳು ಹೆಚ್ಚು ಬಡ್ಡಿ ದರದ ಸಾಲಕ್ಕೆ ಕೈಯೊಡ್ಡುವುದನ್ನು ತಪ್ಪಿಸಿವೆ.

### ನಿಗಮಗಳಿಗೆ ದಾಖಲೆಯ 1600 ಕೋಟಿ ರೂ. ಅನುದಾನ ನೀಡಿಕೆ

ಹಿಂದುಳಿದ ವರ್ಗಗಳ ಸಮುದಾಯಗಳನ್ನು ಅಭಿವೃದ್ಧಿಯ ಮುಖ್ಯವಾಹಿನಿಗೆ ತರಲು ಬಜೆಟ್‌ನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಮಾನ್ಯತೆ, ಪ್ರಾಧಾನ್ಯತೆ ಸಿಗುವಂತೆ ಮಾಡುವಲ್ಲಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರ ಪ್ರಯತ್ನ ಕಾಳಜಿ ಎದ್ದು ಕಾಣುತ್ತದೆ. ಇಲಾಖೆಯಡಿ ರೂಪಿಸಿದ ದೂರದರ್ಶಿ ಯೋಜನೆಗಳ ಜತೆಗೆ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಸೇರಿ 10 ವಿವಿಧ ಹಿಂದುಳಿದ ಅಭಿವೃದ್ಧಿ ನಿಗಮಗಳು ರೂಪಿಸಿದ ಕಾರ್ಯ ಚಟುವಟಿಕೆಗಳಿಗೆ ಆರ್ಥಿಕ ಬಲ ಒದಗಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಸಚಿವರಾದ ಶಿವರಾಜ್ ತಂಗಡಗಿ ಅವರ ಪ್ರಯತ್ನ ಹಾಗೂ ದೂರಗಾಮಿ ಯೋಜನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಅಗತ್ಯವಿರುವ ಅನುದಾನ ಒದಗಿಸಿ ಪ್ರೋತ್ಸಾಹಿಸಿದ್ದಾರೆ. ಇದರಿಂದಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ಅಭಿವೃದ್ಧಿ ನಿಗಮಗಳಿಗೆ 1600 ಕೋಟಿ ರೂ.ದಾಖಲೆಯ ಅನುದಾನ ಪಡೆದಿರುವುದು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಕಳೆದ ಎರಡು ವರ್ಷಗಳಲ್ಲಿ ಒಂದು ಸಾವಿರ ಕೋಟಿ ವೆಚ್ಚ ಮಾಡಿ, ಕಾರ್ಯಕ್ರಮಗಳ ಅರ್ಹರಿಗೆ ತಲುಪಿಸುವ ನಿಟ್ಟಿನಲ್ಲಿ ಸಾಧನೆಯ ಛಾಪು ಮೂಡಿಸಿದೆ. ಯಾವುದೇ ಸರ್ಕಾರ, ಮುಖ್ಯಮಂತ್ರಿಗಳು ಇಷ್ಟು ಮಟ್ಟದ ಅನುದಾನವನ್ನ ನಿಗಮಗಳಿಗೆ ನೀಡಿರಲಿಲ್ಲ. ಆದರೆ ಹಿಂದುಳಿದ ವರ್ಗಗಳ ನಾಯಕರಿಂದ ಖ್ಯಾತಿ ಪಡೆದಿರುವ ನಮ್ಮ ಮುಖ್ಯಮಂತ್ರಿಗಳು ನಿಗಮಗಳಿಗೆ ದಾಖಲೆಯ ಅನುದಾನ ನೀಡಿರುವುದು ನಮ್ಮ ಹೆಮ್ಮೆ ಎನ್ನುತ್ತಾರೆ ಸಚಿವ ಶಿವರಾಜ ತಂಗಡಗಿ.

### ರಾಯಣ್ಣನ ಜೀವನ ಚರಿತ್ರೆ ಸಾರುವ ರಾಕ್ ಗಾರ್ಡನ್ ಸಜ್ಜು!



ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಸಂಗೊಳ್ಳಿ ರಾಯಣ್ಣ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ರಾಯಣ್ಣ ಹುತಾತ್ಮನಾದ ಸ್ಥಳವಾದ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ನಂದಗಢ ಮತ್ತು ಜನ್ಮ ಸ್ಥಳವಾದ ಬೈಲಹೊಂಗಲ ತಾಲ್ಲೂಕಿನ, ಸಂಗೊಳ್ಳಿ ಗ್ರಾಮ ಹಾಗೂ ಅವುಗಳ ಸುತ್ತಮುತ್ತಲಿನ ಪಾರಂಪರಿಕ ತಾಣಗಳನ್ನು ಅಂತರಾಷ್ಟ್ರೀಯ ಪ್ರವಾಸ ಸ್ಥಳವಾಗಿ ಅಭಿವೃದ್ಧಿಪಡಿಸಲು ಸಚಿವರು ಹಲವು ಕ್ರಮ ಕೈಗೊಂಡಿದ್ದಾರೆ. ಇದಕ್ಕೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಒತ್ತಾಸೆ ಕೂಡ ಇದೆ. ಈ ಹಿನ್ನೆಲೆಯಲ್ಲಿ ನಾಲ್ಕಾರು ಬಾರಿ ನಂದಗಡಕ್ಕೆ ಖುದ್ದು ಸಚಿವರೇ ಭೇಟಿ ನೀಡಿ ಕಾಮಗಾರಿಗಳಿಗೆ ವೇಗ ನೀಡುವಂತೆ ನೋಡಿಕೊಂಡ ಪರಿಣಾಮ ರಾಕ್ ಗಾರ್ಡನ್ ಸಾರ್ವಜನಿಕರ ಪ್ರವೇಶಕ್ಕೆ ಮುಕ್ತವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 10 ಎಕರೆ ಪ್ರದೇಶದಲ್ಲಿ ತಲೆಯೆತ್ತಿರುವ ರಾಕ್ ಗಾರ್ಡನ್ ಉದ್ಘಾಟನೆ ಮಾಡಿದ್ದು, ರಾಯಣ್ಣನ ಕುರಿತಾದ ಸಂಪೂರ್ಣ ಜೀವನ ಸಾರವನ್ನು ಹೇಳುವ ಮಾಹಿತಿ ಈ ಗಾರ್ಡನ್‌ನಲ್ಲಿ ಇದೆ.

**ಉದ್ಘಾಟನೆಗೆ ಸಿದ್ಧಗೊಂಡಿರುವ ರಾಯಣ್ಣ ಮ್ಯೂಸಿಯಂ:** ಇನ್ನು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಮ್ಯೂಸಿಯಂನಲ್ಲಿ (ವೀರಭೂಮಿ) ಕಾಮಗಾರಿಗಳು ಪೂರ್ಣಗೊಂಡಿದ್ದು, ಉದ್ಘಾಟನೆಗೆ ಸಿದ್ಧಗೊಂಡಿದೆ. ಮ್ಯೂಸಿಯಂನಲ್ಲಿ ಸಂಗೊಳ್ಳಿ ರಾಯಣ್ಣನ ಅಧ್ಯಯನ ಕೇಂದ್ರ ಹಾಗೂ ರಾಯಣ್ಣನ ಕುರಿತು ಗ್ರಂಥಾಲಯ ಇರಲಿದ್ದು, ಪ್ರವಾಸಿಗರ ಅನುಕೂಲಕ್ಕಾಗಿ ರಾಯಣ್ಣನ ಇತಿಹಾಸ ತಿಳಿಸಿಕೊಡುವ ರೊಬೊಟ್‌ನ್ನು ಕೂಡ ಇರಿಸಲಾಗಿದೆ.



### ಪ್ರಸಕ್ತ ಸಾಲಿನಲ್ಲಿ ರಾಜ್ಯದ ಹಾಸ್ಟೆಲ್‌ಗಳಲ್ಲಿ ಹೆಚ್ಚುವರಿ 15 ಸಾವಿರ ವಿದ್ಯಾರ್ಥಿಗಳಿಗೆ ಪ್ರವೇಶಾತಿಗೆ ಅವಕಾಶ

ಕಲ್ಯಾಣ ಕರ್ನಾಟಕದಲ್ಲಿ 156 ಕೋಟಿ ವೆಚ್ಚದಲ್ಲಿ 34 ಹಾಸ್ಟೆಲ್ ನಿರ್ಮಾಣಕ್ಕೆ ಕ್ರಮ
ವಿದ್ಯಾಸಿರಿ ಯೋಜನೆಗೆ 100 ಕೋಟಿ ಅನುದಾನ ನೀಡಿಕೆ
ಕಳೆದ ವರ್ಷ ಆಯವ್ಯದಲ್ಲಿ ನೀಡಲಾಗಿದ್ದ ಅನುದಾನದಲ್ಲಿ ಶೇ.98.42 ರಷ್ಟು ವೆಚ್ಚ
ಗಂಗಾ ಕಲ್ಯಾಣ ಯೋಜನೆ ಅಡಿ ನೀಡಲಾಗುತ್ತಿದ್ದ ಸಹಾಯಧನ 2.50 ಲಕ್ಷದಿಂದ ಮೂರುವರೆ ಲಕ್ಷಕ್ಕೆ ಹೆಚ್ಚಳ
ಹಾಸ್ಟೆಲ್‌ಗಳಲ್ಲಿನ ಪ್ರತಿ ವಿದ್ಯಾರ್ಥಿಗಳ ಭೋಜನ ವೆಚ್ಚ 100ಗೆ ಹೆಚ್ಚಳ
ಮಧ್ಯವರ್ತಿಗಳ ಹಾವಳಿ ತಡೆಗೆ ವಿಶ್ವಾಸ್ ತಂತ್ರಾಂಶ ಅಭಿವೃದ್ಧಿ



ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಎರಡು ವರ್ಷಗಳಲ್ಲಿ (2023–24, 2024–25) ಒಟ್ಟು 3500 ಕೋಟಿ ರೂ ವಿನಿಯೋಗಿಸಿ ಎಲ್ಲಾ ಯೋಜನೆ ಕಾರ್ಯಕ್ರಮಗಳನ್ನ ಪ್ರತಿಕ್ಷತ 99ರಷ್ಟು ಅನುಷ್ಠಾನ ಗೊಳಿಸಲಾಗಿದೆ. ಹಿಂದುಳಿದ ವರ್ಗಗಳ ಸಮುದಾಯವನ್ನು ಎಲ್ಲಾ ರೀತಿಯಿಂದ ಸಾಮಾಜಿಕ ಮುಖ್ಯ ವಾಹಿನಿಗೆ ತರಲು ಇಲಾಖೆ ಶ್ರಮಿಸಿದೆ.



**ತುಳಸಿ ಮದ್ದಿನೇನಿ**
ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ